ಸಂಪುಟ: 05 ಸಂಚಿಕೆ: 348 ಪುಟಗಳು: 08 ಸೋಮವಾರ 02 ಮಾರ್ಚ್ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**

ಹಿಂದಿರುಗಿ ನೋಡುವ ಅವಶ್ಯಕತೆ ಇಲ್ಲ, ಮುಂದೆ ನೋಡಿ ನಮಗೆ ಅನಂತ ಶಕ್ತಿ ಅನಂತ ಉತ್ಸಾಹ ಅನಂತ ತಾಳ್ಮೆ ಬೇಕು, ಆಗ ಮಾತ್ರ ಮಹತ್ತಾರ್ಯಗಳನ್ನು ನಾವು ಸಾಧಿಸಬಹುದು

# ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# ಇರಾನ್ ಖಮೇನಿ ಇನ್ನಿಲ್ಲ

ಅನೇಕರಿಗೆ ಗಾಯ



**ಅಮೆರಿಕ-ಇಸ್ರೇಲ್ ನಡೆಸಿರುವ ಜಂಟಿ ದಾಳಿಯಲ್ಲಿಇರಾನ್ ಪರಮೋಚ್ಚ ನಾಯಕ ಆಯತೊಲ್ಲಾಅಲಿ ಖಮೇನಿ, ಅವರ ಅಳಿಯ, ಸೊಸೆ ಮೃತಪಟ್ಟದ್ದಾರೆ ಎಂದು ವರದಿಯಾಗಿದೆ. ಒಟ್ಟಾರೆ ಸಂಘರ್ಷದಲ್ಲಿ82 ಮಕ್ಕಳು ಸೇರಿದಂತೆ 201 ಮಂದಿ ಸಾವಿಗೀಡಾಗಿದ್ದಾರೆ. 747ಕ್ಕೂಅಧಿಕಮಂದಿಗಾಯಗೊಂಡಿದ್ದಾರೆ. ಇದೀಗಮುಂದಿನಉತ್ತರಾಧಿಕಾರಿಬಗ್ಗೆಚರ್ಚೆಶುರುವಾಗಿದೆ.**

• ಉದಯವಾಹಿನಿ,ವಾಷಿಂಗ್ಟನ್

ಇರಾನ್ ಸರ್ವೋಚ್ಚ ನಾಯಕ ಅಯತೊಲ್ಲ ಅಲಿ ಖಮೇನಿ(86) ಅವರನ್ನು ಹತ್ಯೆ ಮಾಡಿದ್ದೇವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಣೆ ಮಾಡಿದ್ದಾರೆ. ಈ ಕುರಿತು ಅವರು ಸಾಮಾಜಿಕ ಜಾಲತಾಣ ವೇದಿಕೆ ಟ್ರೂಥ್‌ನಲ್ಲಿ ತಿಳಿಸಿದ್ದಾರೆ.

**ದಾಳಿ ಮುಂದುವರೆಯುತ್ತದೆ-ಟ್ರಂಪ್:** ಇತಿಹಾಸದ ಅತ್ಯಂತ ದುಷ್ಟ ಜನರಲ್ಲಿ ಒಬ್ಬರಾದ ಖಮೇನಿ ಸಾವನ್ನಪ್ಪಿದ್ದಾರೆ. ಇದು ಇರಾನ್ ಜನರು ಮಾತ್ರವಲ್ಲ, ಖಮೇನಿ ಮತ್ತವರ ರಕ್ತಪಿಪಾಸು ಗುಂಪಿನಿಂದ ಕೊಲ್ಲಲ್ಪಟ್ಟ ಅಥವಾ ಅಂಗವಿಕಲರಾದ ಜಗತ್ತಿನಾದ್ಯಂತದ ಅನೇಕ ದೇಶಗಳ ಜನರಿಗೆ ದೊರೆಯ ನ್ಯಾಯ. ಖಮೇನಿ ನಮ್ಮ ಗುಪ್ತಚರ ಮತ್ತು ಅತ್ಯಾಧುನಿಕ ಟ್ರ್ಯಾಕಿಂಗ್ ವ್ಯವಸ್ಥೆಗಳನ್ನು ತಪ್ಪಿಸಲು ಸಾಧ್ಯವಾಗಿಲ್ಲ. ಇರಾನಿನ ಜನರು ತಮ್ಮ ದೇಶವನ್ನು ಮರಳಿ ಪಡೆಯಲು ಇದು ಏಕೈಕ ದೊಡ್ಡ ಅವಕಾಶ. ಇರಾನ್‌ನ ಐಆರ್‌ಜಿಸಿ, ಸೇನೆ ಮತ್ತಿತರ ಭದ್ರತಾ ಮತ್ತು ಪೊಲೀಸ್ ಪಡೆಗಳು ಇನ್ನು ಮುಂದೆ ನಮ್ಮೊಂದಿಗೆ ಹೋರಾಡಲು ಬಯಸುವುದಿಲ್ಲ. ಭಾರೀ ಮತ್ತು ನಿಖರವಾದ ಬಾಂಬ್ ದಾಳಿ ವಾರವಿಡೀ ನಿರಂತರವಾಗಿ ಮುಂದುವರಿಯುತ್ತದೆ ಎಂದು ಟ್ರಂಪ್ ತಿಳಿಸಿದ್ದಾರೆ.

**200ಕ್ಕೂ ಹೆಚ್ಚು ಮಂದಿ ಸಾವು:** ಈ ಭಯಾನಕ ದಾಳಿಗಳಲ್ಲಿ ಇಲ್ಲಿಯವರೆಗೆ 201ಕ್ಕೂ ಹೆಚ್ಚು ಮಂದಿ ಸಾವನ್ನಪ್ಪಿದ್ದು, ಇದರಲ್ಲಿ 108 ಮಂದಿ ವಿದ್ಯಾರ್ಥಿಗಳು ಎಂದು ವರದಿಯಾಗಿದೆ.,ಈ ದಾಳಿಯಲ್ಲಿ ಖಮೇನಿ ಅವರ ಮಗಳು, ಮೊಮ್ಮಗಳು, ಸೊಸೆ ಮತ್ತು ಅಳಿಯನೂ ಸಾವನ್ನಪ್ಪಿದ್ದಾರೆ ಎಂದು ಇರಾನ್‌ನ ರಾಜ್ಯ ಮಾಧ್ಯಮ ವರದಿ ಮಾಡಿರುವುದನ್ನು ಟೈಮ್ಸ್ ಆಫ್ ಇಸ್ರೇಲ್ ಉಲ್ಲೇಖಿಸಿದೆ. ಇರಾನ್‌ನ ರಕ್ಷಣಾ ಮಂತ್ರಿ, ಉನ್ನತ ಭದ್ರತಾ ಸಲಹೆಗಾರ ಮತ್ತು ಕ್ರಾಂತಿಕಾರಿ ಗಾರ್ಡ್‌ನ ಕಮಾಂಡರ್‌ನನ್ನು ಕೊಂದು ಹಾಕಿದ್ದೇವೆ ಎಂದು ಇಸ್ರೇಲ್ ಸೇನೆ ತಿಳಿಸಿದೆ.

ಯುಎಸ್-ಇಸ್ರೇಲ್ ದಾಳಿಯಲ್ಲಿ ನೂರಾರು ನಾಗರಿಕರು ಸಾವನ್ನಪ್ಪಿದ್ದಾರೆ ಮತ್ತು ಅನೇಕರು ಗಾಯಗೊಂಡಿದ್ದಾರೆ ಎಂದು ಇರಾನಿನ ರಾಜತಾಂತ್ರಿಕ ಅಧಿಕಾರಿ ವಿಶ್ವಸಂಸ್ಥೆಯ ಭದ್ರತಾ ಮಂಡಳಿಗೆ ತಿಳಿಸಿದ್ದಾರೆ ಎಂದು ತಿಳಿದು ಬಂದಿದೆ. ಖಮೇನಿ ಹತ್ಯೆಗೆ ಪ್ರತಿಕ್ರಿಯಿಸಿದ ಇರಾನ್ ಸರ್ಕಾರ, ಈ ಮಹಾ ಅಪರಾಧಕ್ಕೆ ನಾವು ತಕ್ಕ ಉತ್ತರ ನೀಡದೆ ಬಿಡುವುದಿಲ್ಲ ಎಂದು ಎಚ್ಚರಿಕೆ ನೀಡಿದೆ. ಖಮೇನಿ ಅವರ ಹತ್ಯೆಗೆ 'ಕಠಿಣ, ನಿರ್ಣಾಯಕ ಮತ್ತು ವಿಷಾದ ಹುಟ್ಟಿಸುವಂತಹ ಶಿಕ್ಷೆ' ನೀಡುತ್ತೇವೆ ಎಂದು ಇರಾನಿನ ಕ್ರಾಂತಿಕಾರಿ ಗಾರ್ಡ್ ಹೇಳಿರುವುದಾಗಿ ವರದಿಯಾಗಿದೆ. ಖಮೇನಿ ಹತ್ಯೆಯ ಹಿನ್ನೆಲೆಯಲ್ಲಿ 40 ದಿನಗಳ ಕಾಲ ರಾಷ್ಟ್ರೀಯ ಶೋಕಾಚರಣೆ ಮಾಡಲಾಗುವುದು ಎಂದು ಇರಾನ್ ಘೋಷಣೆ ಮಾಡಿದೆ.

## ಖಮೇನಿ ಸಾವಿಗೆ ಇಂಡಿಯಾ ಟು ಇರಾಕ್ ಭುಗಿಲೆದ್ದ ಪ್ರತಿಭಟನೆ: ಕರಾಚಿಯಲ್ಲಿ WT ರಾಯಭಾರ ಕಚೇರಿಗೆ ನುಗ್ಗಿ ದಾಂಧಲೆ ಎಬ್ಬಿಸಿದ ಪಾಕಿಗಳು!

### ಶರಣಾಗಿ ಇಲ್ಲ ಸಾಯಿರಿ: ಟ್ರಂಪ್ ವಾರ್ನಿಂಗ್

### ಭಾರತದ ಜಮ್ಮು-ಕಾಶ್ಮೀರದಲ್ಲಿ ಪ್ರತಿಭಟನೆ

ಇತ್ತ ಭಾರತದ ಜಮ್ಮುಹಾಗೂ ಕಾಶ್ಮೀರದಲ್ಲೂ ಖಮೇನಿ ಹತ್ಯೆಯನ್ನು ಖಂಡಿಸಿ ಪ್ರತಿಭಟನೆಗಳು ನಡೆಯುತ್ತಿವೆ. ಜಮ್ಮು-ಕಾಶ್ಮೀರದ ರಾಂಬನ್ ಜಿಲ್ಲೆಯಲ್ಲಿ ಶಿಯಾ ಸಮುದಾಯದ ನಾಯಕ ಸೈಯದ್ ಸಮರ್ ಕಜ್ಮಿ ನೇತೃತ್ವದಲ್ಲಿ ಬೀದಿ ಪ್ರತಿಭಟನೆಗಳು ನಡೆದಿದ್ದು, ಅಮೆರಿಕಾ ಮತ್ತು ಇಸ್ರೇಲ್ ವಂಚನೆಯಿಂದ ನಮ್ಮ ನಾಯಕನನ್ನು ಕೊಂದಿದ್ದಾರೆ ಎಂದು ಆರೋಪಿಸಿದ್ದು, ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಫೋಟೋವನ್ನು ಬೆಂಕಿಯಿಂದ ಸುಟ್ಟು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೆಂಕಿಯಿಂದ ಸುಟ್ಟು ಆಕ್ರೋಶ





### ಇರಾನ್ ದಾಳಿಯ ದಿನಾಂಕವನ್ನು ನಿಖರವಾಗಿ ಊಹಿಸಿದ್ದ ಗ್ರೋಕ್

ಇರಾನ್ ನಲ್ಲಿ ಯುದ್ಧ ಆರಂಭವಾಗಿದ್ದು, ಇದರಿಂದಾಗಿ ಈಗಾಗಲೇ ಮಧ್ಯಪ್ರಾಚ್ಯದಲ್ಲಿನ ಬಹ್ರೇನ್, ಕುವೈತ್, ಕತಾರ್ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ (ಯುಎಇ) , ಒಮಾನ್ ಸೇರಿದಂತೆ ಹಲವು ರಾಷ್ಟ್ರಗಳು ಈ ಯುದ್ಧಕ್ಕೆ ಬಲಿಯಾಗುತ್ತಿವೆ. ಆದರೆ, ಇವೆಲ್ಲದರ ನಡುವೆ ಎಲಾನ್ ಮಸ್ಕ್ ಅವರ ಆಸಿಸ್ಟೆಂಟ್ ಚಾಟ್ ಬಾಟ್ ಗ್ರೋಕ್ ಇರಾನ್ ಮೇಲಿನ ದಾಳಿ ಫೆ.28ರಂದೇ ನಡೆಯಲಿದೆ ಎಂಬುದನ್ನು ಖಚಿತವಾಗಿ ದಾಳಿಗೂ ಮೊದಲೇ ಊಹಿಸಿ ಹೇಳಿತ್ತು ಎಂಬುದರ ಕುರಿತ ಸ್ಕ್ರೀನ್ ಶಾಟ್ ಪೋಸ್ಟ್‌ಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ.ಇನ್ನು, ಈ ಕುರಿತಾಗಿ ಇರಾನ್ ಮೇಲೆ ಫೆ.28ರಂದು ಖಚಿತವಾಗಿ ದಾಳಿಯಾಗಲಿದೆ ಎಂಬುದನ್ನು ಇಸ್ರೇಲ್ ನ ಮಾಧ್ಯಮ ಸಂಸ್ಥೆ ದಿ ಜೆರುಸಲೇಂ ಪೋಸ್ಟ್ ವರದಿ ಮಾಡಿದ್ದ ಲೇಖನದಲ್ಲಿ ಫೆ.28ರಂದು ಇರಾನ್ ಮೇಲೆ ಯುಎಸ್-ಇರಾನ್ ದಾಳಿ ಮಾಡಲಿದೆ? ಎಂಬುದನ್ನು ತಿಳಿಸಿದೆ ಎಂಬ ಶೀರ್ಷಿಕೆಯಡಿ ಪ್ರಕಟಮಾಡಿತ್ತು.

**1** ಅಮೆರಿಕ-ಇಸ್ರೇಲ್ ನಡೆಸಿರುವ ಜಂಟಿ ದಾಳಿಯಲ್ಲಿಇರಾನ್ ಪರಮೋಚ್ಚ ನಾಯಕ ಆಯತೊಲ್ಲಾ ಅಲಿ ಖಮೇನಿ ಮೃತ

**2** ಮುಂದಿನ ಉತ್ತರಾಧಿಕಾರಿ ಬಗ್ಗೆ ಚರ್ಚೆ ಶುರು

**3** ಇದೀಗ, ದೇಶವನ್ನು ಆಳಲು ತಾತ್ಕಾಲಿಕ ಮಂಡಳಿ ರಚನೆ

## 150 ಕನ್ನಡಿಗರು ಲಾಕ್!

### ಪ್ರತೀಕಾರದ ಹೆಜ್ಜೆ ಇಟ್ಟ ಇರಾನ್


ಇಡೀ ಮಧ್ಯಪ್ರಾಚ್ಯ ಹೊತ್ತಿ ಉರಿಯುತ್ತಿದೆ. ಇರಾನ್-ಇಸ್ರೇಲ್ ಮಧ್ಯೆ ಭೀಕರ ಯುದ್ಧ ಆರಂಭವಾಗಿದ್ದು ದಾಳಿ-ಪ್ರತಿದಾಳಿಗಳು ನಡೆಯುತ್ತಿವೆ. ಅಪಾರ ಪ್ರಮಾಣದ ಸಾವು ನೋವುಗಳು ಸಂಭವಿಸಿವೆ.. ಯುದ್ಧದ ಭೀಕರತೆ ಎಷ್ಟಿದೆ ಅಂದ್ರೆ ಇರಾನ್‌ನ ಸುಪ್ರೀಂ ಖಮೇನಿ ಹತ್ಯೆಯಾಗಿದೆ. ದಶಕಗಳಿಂದ ಅಮೆರಿಕ , ಇಸ್ರೇಲ್‌ಗೆ ಸಿಂಹಸ್ವಪ್ನವಾಗಿದ್ದ ಇರಾನ್‌ನ ಸುಪ್ರೀಂ ಲೀಡರ್ ಆಯತೊಲ್ಲಾ ಅಲಿ ಖಮೇನಿ ಕಥೆ ಫಿನೀಶ್ ಆಗಿದೆ. ಅಮೆರಿಕ ಮತ್ತು ಇಸ್ರೇಲ್ ಜಂಟಿಯಾಗಿ ನಡೆಸಿದ ಭೀಕರ, ಕರಾರುವಕ್ಕಾದ ವಾಯುದಾಳಿಗೆ 86 ವರ್ಷದ ಇರಾನ್‌ನ ಸರ್ವೋಚ್ಚ ನಾಯಕ ಬಲಿಯಾಗಿದ್ದಾನೆ ಎಂದು ಸ್ವತಃ ಇರಾನ್ ಸರ್ಕಾರವೇ ಅಧಿಕೃತವಾಗಿ ಘೋಷಿಸಿದೆ.

### ಇರಾಕ್ ನಲ್ಲಿ ಭುಗಿಲೆದ್ದ ಆಕ್ರೋಶ

ಇತ್ತ ಇರಾಕ್ ನಲ್ಲಿಯೂ ಸಹ ಇಂತದ್ದೇ ವಾತವರಣ ಮನೆ ಮಾಡಿದ್ದು, ಇರಾಕ್ ರಾಜಧಾನಿ ಬಾಗ್ದಾದ್‌ನಲ್ಲಿರುವ ಯುಎಸ್ ರಾಯಭಾರ ಕಚೇರಿಯ ಹೊರಗೆ ಸಹ ಪ್ರತಿಭಟನೆಗಳು ನಡೆಯುತ್ತಿವೆ. ಈ ವೇಳೆ, ಪ್ರತಿಭಟನಾಕಾರರು ಅಮೆರಿಕಾ ಮಧ್ಯಪ್ರಾಚ್ಯದಲ್ಲಿ ಅಸ್ಥಿರತೆಯನ್ನುಂಟು ಮಾಡುತ್ತಿದ್ದು, ಈ ಪ್ರದೇಶದಲ್ಲಿ ವಿದೇಶಿ ಮಿಲಿಟರಿಗಳು ಕೊನೆಗೊಳ್ಳಲಿ ಎಂದು ಘೋಷಣೆಗಳನ್ನು ಕೂಗಿದ್ದಾರೆ. ಪೊಲೀಸರು ಪ್ರತಿಭಟನಾಕಾರರನ್ನು ನಿಯಂತ್ರಿಸಲು ಅಶ್ರುವಾಯುಗಳನ್ನು ಬಳಕೆ ಮಾಡುತ್ತಿದ್ದಾರೆ.



## ವಿನ್ಯಾಸಗಾರರು ಬೇಕಾಗಿದ್ದಾರೆ



ಪೇಜ್ ಮೇಕರ್, ಇನ್ ಡಿಸೈನರ್, ಕನ್ನಡ ಟೈಪ್ ಮಾಡಬಲ್ಲವರು. ಬೆಂಗಳೂರಿನಲ್ಲಿ ವಾಸವಿರುವ ಬೆಂಗಳೂರು ಕಚೇರಿಯಲ್ಲಿ ಕೆಲಸ ಮಾಡಲು ಇಚ್ಚಿಸುವ (4 ಮಂದಿ) ಪತ್ರಿಕೋದ್ಯಮದಲ್ಲಿ ತೀವ್ರ ಆಸಕ್ತಿ, ಕನ್ನಡ ಭಾಷೆಯ ಮೇಲೆ ಹಿಡಿತ, ಸಾಮಾನ್ಯ ಜ್ಞಾನ, ಓದುವ ಹವ್ಯಾಸ ಹಾಗೂ ಉತ್ಸಾಹ ಕಾತುರವಿರುವ ಆಸಕ್ತರಿಗೆ ನಿರ್ದಿಷ್ಟ ಪದವಿಯ ಅಗತ್ಯವಿಲ್ಲ. ವಯೋಮಿತಿ ಗರಿಷ್ಠ 25 ವರ್ಷ. ಆಸಕ್ತರು ಕೂಡಲೇ ಈ ಕೆಳಗಿನ ವಿಳಾಸಕ್ಕೆ ತಮ್ಮ ಪೂರ್ಣ ವಿವರಗಳುಳ್ಳ ಅರ್ಜಿ ಸಲ್ಲಿಸಿ ಅಥವಾ ಮುಖತಃ ಭೇಟಿ ನೀಡಿ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ
9448225696

ಉದಯ ವಾಹಿನಿ

#: 1230 'JAYAMAHAL 13th cross, 2nd phase, Girinagar, Bangalore-560085.
(Near to bangalore one park, opposite mandya medical)
udayavahininews@gmail.com

## ಕುಕ್ಕೆ ಸುಬ್ರಹ್ಮಣ್ಯ ಕ್ಷೇತ್ರಕ್ಕೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಭೇಟಿ



• ಉದಯವಾಹಿನಿ, ಬೆಂಗಳೂರು

ಕುಕ್ಕೆ ಸುಬ್ರಹ್ಮಣ್ಯ ಕ್ಷೇತ್ರಕ್ಕೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ಭಾನುವಾರ ಸಂಜೆ ಭೇಟಿ ನೀಡಿದ್ದಾರೆ.

ಬೆಂಗಳೂರು ಜಕ್ಕೂರು ವಿಮಾನ ನಿಲ್ದಾಣದಿಂದ ಸಂಜೆ 4 ಗಂಟೆಗೆ ಹೆಲಿಕಾಪ್ಟರ್ ಮೂಲಕ ಹೊರಟು 5.30ಕ್ಕೆ ಕಡಬ ತಾಲ್ಲೂಕಿನ ಬಿಳಿನೆಲೆ ಹೆಲಿಪ್ಯಾಡ್ಡ್ ಆಗಮಿಸಿ ಅಲ್ಲಿಂದ ರಸ್ತೆಮೂಲಕ ಕಾರಿನಲ್ಲಿ ಬಿಗಿಭದ್ರತೆಯೊಂದಿಗೆ ಕುಕ್ಕೇ ಸುಬ್ರಹ್ಮಣ್ಯಕ್ಕೆ ಆಗಮಿಸಿದರು.

ಕುಕ್ಕೆಗೆ ಆಗಮಿಸಿದ ಮಾಜಿ ಪ್ರಧಾನಿಗಳಿಗೆ ಶ್ರೀ ದೇವಳದ ಪರವಾಗಿ ಕಾರ್ಯನಿರ್ವಾಹಣಾಧಿಕಾರಿ ಅರವಿಂದ ಅಯ್ಯಪ್ಪ ಸುತಗುಂಡಿ ಸ್ವಾಗತಿಸಿ ಬರಮಾಡಿಕೊಂಡರು. ಬಳಿಕ ಅತಿಥಿಗೃಹದಲ್ಲಿ ವಿಶ್ರಾಂತಿ ಪಡೆದ ಅವರು ರಾತ್ರಿ ಮಹಾಪೂಜೆಯಲ್ಲಿ ಪಾಲ್ಗೊಂಡು ಉತ್ಸವಾದಿಗಳನ್ನು ವೀಕ್ಷಿಸಿದರು. ನಂತರ ಪ್ರಸಾದ ಭೋಜನ ಸ್ವೀಕರಿಸಿದರು. ಸೋಮವಾರ ಆಶ್ಲೇಷ ಬಲಿ ಸೇವೆ ನೆರವೇರಿಸಲಿದ್ದಾರೆ.

## ಟ್ರಂಪ್ ನಡೆಗೆ ಸಿದ್ದು ಆಕ್ಷೇಪ: ಇಸ್ರೇಲ್ -ಅಮೆರಿಕ ಜಂಟಿ ದಾಳಿ ವಿರುದ್ಧ ಆಕ್ರೋಶ

• ಉದಯವಾಹಿನಿ, ಬೆಂಗಳೂರು

ಇರಾನ್ ಮೇಲೆ ಇಸ್ರೇಲ್ ಮತ್ತು ಅಮೆರಿಕದ ಜಂಟಿ ದಾಳಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ತೀವ್ರವಾಗಿ ಖಂಡಿಸಿದ್ದಾರೆ.ಶಿವಮೊಗ್ಗ ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ದ್ವಂದ್ವ ನೀತಿಯೇ ಈ ಅಶಾಂತಿಗೆ ಕಾರಣ ಎಂದು ಕಿಡಿಕಾರಿದರು.

''ಒಂದೆಡೆ ಜಗತ್ತಿಗೆ ಶಾಂತಿಯ ಮಂತ್ರ ಪಠಿಸುತ್ತಾ, ಮತ್ತೊಂದೆಡೆ ಯುದ್ಧಕ್ಕೆ ಪ್ರಚೋದನೆ ನೀಡುತ್ತಿರುವುದು ಸರಿಯಲ್ಲ. ಇರಾನ್ ಪರಮೋಚ್ಚ ನಾಯಕ ಖಮೇನಿ ಅವರ ಹತ್ಯೆ ಅತ್ಯಂತ ಖಂಡನೀಯ,'' ಎಂದು ಸಿಎಂ ಅಸಮಾಧಾನ ವ್ಯಕ್ತಪಡಿಸಿದರು.

## ಸಚಿವ ಮಧು ಬಂಗಾರಪ್ಪ ಬರ್ತಡೇ: 30ಕ್ಕೂ ಹೆಚ್ಚು ಪೌರ ಕಾರ್ಮಿಕರಿಗೆ ವಿಮಾನಯಾನ ಭಾಗ್ಯ

• ಉದಯವಾಹಿನಿ, ಬೆಂಗಳೂರು

ಶಿಕ್ಷಣ ಸಚಿವ ಮಧು ಬಂಗಾರಪ್ಪನವರ ಜನ್ಮದಿನದ ಪ್ರಯುಕ್ತ ಸೊರಬ ತಾಲ್ಲೂಕಿನ 30ಕ್ಕೂ ಅಧಿಕ ಪೌರ ಕಾರ್ಮಿಕರಿಗೆ ವಿಮಾನಯಾನ ಭಾಗ್ಯ ಲಭಿಸಿದೆ. ಸೊರಬ ಹಾಗೂ ಆನವಟ್ಟಿಯ ಪೌರ ಕಾರ್ಮಿಕರಿಗೆ ಶಿವಮೊಗ್ಗದಿಂದ ಬೆಂಗಳೂರಿಗೆ ವಿಮಾನಯಾನ ಮಾಡಿಸಲಾಗುತ್ತಿದೆ. ಇಂದು ಪೌರ ಕಾರ್ಮಿಕರು ಶಿವಮೊಗ್ಗದ ಕುವೆಂಪು ವಿಮಾನ ನಿಲ್ದಾಣದಿಂದ ಇಂಡಿಗೋ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸಿದರು. ಸೋಮವಾರ ಬೆಂಗಳೂರಿನಲ್ಲಿ ಸಚಿವ ಮಧು ಬಂಗಾರಪ್ಪನವರ ಜನ್ಮ ದಿನಾಚರಣೆ ನಡೆಯಲಿದೆ.

## ಡಿನ್ನರ್ ಮೀಟಿಂಗ್ ಕರೆದಿದ್ರೆ ಹೋಗುತ್ತಿದ್ದೆ, ಊಟಕ್ಕೆ ಕರೆದರೆ ಹೋಗಲು ಏನಂತೆ: ಮಾಜಿ ಸಚಿವ ಕೆ.ಎನ್ ರಾಜಣ್ಣ

• ಉದಯವಾಹಿನಿ, ಬೆಂಗಳೂರು

ಡಿನ್ನರ್ ಮೀಟಿಂಗ್ ಕರೆದಿದ್ರೆ ಹೋಗುತ್ತಿದ್ದೆ, ಊಟಕ್ಕೆ ಕರೆದರೆ ಹೋಗಲು ಏನಂತೆ ಎಂದು ಮಾಜಿ ಸಚಿವ ಕೆ.ಎನ್. ರಾಜಣ್ಣ ಅವರು ಮಾಗಡಿ ಶಾಸಕ ಬಾಲಕೃಷ್ಣ ಅವರ ಹುಟ್ಟುಹಬ್ಬಕ್ಕೆ ಆಮಂತ್ರಣಕ್ಕೆ ನೀಡದಿರುವ ಬಗ್ಗೆ ಪ್ರತಿಕ್ರಿಯಿಸಿದರು.

ನಗರದಲ್ಲಿ ಆಯೋಜಿಸಲಾಗಿದ್ದ ಇಫ್ತಿಯಾರ್ ಕೂಟದಲ್ಲಿ ಭಾಗಿಯಾದ ಬಳಿಕ ಮಾತನಾಡಿದ ಅವರು, ಮಾಗಡಿ ಶಾಸಕ ಬಾಲಕೃಷ್ಣ ಬರ್ತ್‌ಡೇ ಡಿನ್ನರ್ ಮೀಟಿಂಗ್ ವಿಚಾರ ಕುರಿತು ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದರು. ಡಿನ್ನರ್ ಮೀಟಿಂಗ್‌ಗೆ ನನ್ನ ಕರೆದಿಲ್ಲ, ಕರೆದಿದ್ರೆ ಹೋಗ್ತಿದ್ದೆ. ಊಟಕ್ಕೆ ಕರೆದರೆ ಹೋಗಲು ಏನಂತೆ ಎಂದ ಅವರು ಡಿ.ಕೆ. ಬೆಂಬಲಿಗರಿಗೆ ಮಾತ್ರ ಕರೆದಿದ್ರಾ ಎಂಬ ವಿಚಾರಕ್ಕೆ ಪಾವಗಡ ಎಂಎಲ್‌ಎ ವೆಂಕಟೇಶ್ ಹೋಗಿದ್ದಾರೆ. ಅವರೇನು ಡಿ.ಕೆ. ಶಿವಕುಮಾರ್ ಬೆಂಬಲಿಗನಾ. ಪಾವಗಡ ವೆಂಕಟೇಶ್ ಇಲ್ವೇನ್ರಿ?, ನಾಲ್ಕನೇ ಸೀರಿಯಲ್ ನಂಬರ್, ನಮ್ಮನ್ನು ಯಾರು





ಬಿಟ್ಟುಹೋಗಲ್ಲ. ಎಲ್ಲರೂ ಒಟ್ಟಿಗೆ ಇದ್ದೇವೆ. 138 ಜನ ಕಾಂಗ್ರೆಸ್ ಎಂಎಲ್‌ಎಗಳು ಎಲ್ಲರೂ ಒಂದೇನೆ. ಸುಮ್ನೆ ಎಲ್ಲರಿಗೂ ಒಂದು ಊಟ ಹಾಕೋಣ, ಅರ್ಧ ಗಂಟೆ ಇಸ್ಪೀಟು ಆಡೋಣ ಅಂತ ಕರೆದ್ರೆ ಹೋಗ್ತಾರೆ ಎಂದರು. ದೆಹಲಿ ಭೇಟಿ ವಿಚಾರಕ್ಕೆ ಸಂಬಂಧಿಸಿದಂತೆ ಮಾತನಾಡಿದ ರಾಜಣ್ಣ, ಈಗಾಗಲೇ ಎಲ್ಲಾ ಹೇಳಿದ್ದೇನೆ. ಡೆಲ್ಲಿಗೆ ಹೋದ ಸಂದರ್ಭದಲ್ಲಿ ನಮ್ಮ ಹಿರಿಯರು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರನ್ನು ಭೇಟಿ ಮಾಡಿದ್ದೇನೆ.

ಕರ್ನಾಟಕದಲ್ಲಿರುವ ಗೊಂದಲ ಏನಿದೆ, ಇದರಿಂದ ಸರ್ಕಾರಕ್ಕೆ ಧಕ್ಕೆಯಾಗುತ್ತಿದೆ, ಗೌರವಕ್ಕೆ ಚ್ಯುತಿಯಾಗುತ್ತಿದೆ, ಪಕ್ಷಕ್ಕೂ ಚ್ಯುತಿಯಾಗುತ್ತಿದೆ. ಈ ಗೊಂದಲವನ್ನು ನೀವು ನಿವಾರಣೆ ಮಾಡಬೇಕು ಎಂದು ನಾನು ಒತ್ತಾಯ ಪೂರಕವಾಗಿ ಮನವಿ ಮಾಡಿದ್ದೇನೆ ಎಂದರು.

ಮುಂದಿನ ಬಾರಿ ಕಾಂಗ್ರೆಸ್ ಬರಲ್ಲ ಎಂಬ ಶಾಸಕ ಬಾಲಕೃಷ್ಣ ಹೇಳಿಕೆ ವಿಚಾರಕ್ಕೆ, ಬಾಲಕೃಷ್ಣ ಹೇಳಿರುವುದು ಅವರ ಕ್ಷೇತ್ರದಲ್ಲಿ ಇರಬಹುದು. ನಾವೆಲ್ಲ ಗೆಲ್ಲಲ್ವಾ.. 224 ರಲ್ಲಿ 138 ಜನ ಕಾಂಗ್ರೆಸ್ ಶಾಸಕರಿದ್ದೇವೆ, ಬಾಕಿ ಇನ್ನೂ 90 ಜನ ಸೋತಿರುವವರು ಇದ್ದಾರೆ. ಅದರಲ್ಲಿ ಸೋತಿರುವವರು ಕೆಲವರು ಗೆಲ್ಲುತ್ತಾರೆ. ಗೆದ್ದಿರುವವರು ಕೆಲವರು ಸೋಲ್ತಾರೆ. ಇದು ರಾಜಕೀಯದಲ್ಲಿ ನಡೆಯುವಂತ ಪ್ರಕ್ರಿಯೆ.



ಕಾಂಗ್ರೆಸ್ ಪಕ್ಷ ಸದೃಢವಾಗಿದೆ ಮುಂದಿನ ಬಾರಿ ನಾವೇ ಗೆಲ್ಲುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ದೆಹಲಿಗೆ ಪತ್ರ ಬರೆದ ವಿಚಾರಕ್ಕೆ ಸಂಬಂದಿಸಿದಂತೆ ಪ್ರಶ್ನೆಗೆ ಉತ್ತರಿಸಿದ ಅವರು, ಪಕ್ಷದಲ್ಲಿ ಸಂಘಟನೆಗೆ ಸರ್ಕಾರದ ಗೌರವ ಹೆಚ್ಚಿಸಲಿಕ್ಕೆ ಏನೆಲ್ಲ ಮಾಡಬಹುದು. ಅದನ್ನು ಕೇಂದ್ರದ ನಾಯಕರಿಗೆ ಮನವರಿಕೆ ಮಾಡಿಕೊಟ್ಟಿದ್ದೇನೆ. ನಮ್ಮಲ್ಲಿ ಏನ್ ಚರ್ಚೆ ಆಗಿದೆ ಅದು ಸಾರ್ವತ್ರಿಕವಾಗಿ ಚರ್ಚೆಗಳು ಆಗುವುದಿಲ್ಲ ಎಂದು ಹೇಳಿದರು.

## ರಾಜ್ಯ, ರಾಷ್ಟ್ರಮಟ್ಟದಲ್ಲಿ ವೀರರಾಣಿ ಬೆಳವಡಿ ಮಲ್ಲಮ್ಮಗೆ ಸಿಗಬೇಕಿದೆ ಗೌರವ

### ಮಲ್ಲಮ್ಮಾಜಿ ಶೌರ್ಯ, ಸಾಹಸ ಇಂದಿನ ಪೀಳಿಗೆಗೆ ಪರಿಚಯಿಸಲು ರಾಜ್ಯ ಸರ್ಕಾರ ಏನೋ ಎರಡು ದಿನ ಉತ್ಸವ ಆಚರಣೆ

• ಉದಯವಾಹಿನಿ,ಬೆಂಗಳೂರು

ಮಹಿಳೆಯರು ಮನೆ ಬಿಟ್ಟು ಹೊರಗೆ ಬಾರದ ಕಾಲದಲ್ಲಿ 348 ವರ್ಷಗಳ ಹಿಂದೆ 2 ಸಾವಿರ ಮಹಿಳೆಯರ ಸೈನ್ಯ ಕಟ್ಟಿದ್ದ ವೀರರಾಣಿ ಬೆಳವಡಿ ಮಲ್ಲಮ್ಮ, ಇಡೀ ಸ್ತ್ರೀ ಕುಲಕ್ಕೆ ಸ್ವಾಭಿಮಾನದ ಪ್ರತೀಕ. ಪುರುಷರಿಗೆ ಸರಿಸಮಾನವಾಗಿ ತಮ್ಮ ಸೇನೆಯಲ್ಲಿ ಮಹಿಳೆಯರಿಗೆ ಅವಕಾಶ ನೀಡಿದ್ದು, ಜಗತ್ತಿನ ಇತಿಹಾಸದಲ್ಲೆ ಅಪರೂಪ. ಅಂತ ಮಲ್ಲಮ್ಮಾಜಿ ಶೌರ್ಯ, ಸಾಹಸ ಇಂದಿನ ಪೀಳಿಗೆಗೆ ಪರಿಚಯಿಸಲು ರಾಜ್ಯ ಸರ್ಕಾರ ಏನೋ ಎರಡು ದಿನ ಉತ್ಸವ ಆಚರಿಸುತ್ತದೆ. ಆದರೆ, ಅದು ಬೆಳವಡಿಗೆ ಮಾತ್ರ ಸೀಮಿತವಾಗಿದ್ದು, ರಾಜ್ಯ-ರಾಷ್ಟ್ರಮಟ್ಟದಲ್ಲಿ ಮಲ್ಲಮ್ಮನವರಿಗೆ ಸಿಗಬೇಕಾದ ಗೌರವ ಸಿಕ್ಕಿಲ್ಲ ಎಂದು ಈ ಭಾಗದ ಜನರು ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ.

ಹೌದು, ಬೆಳವಡಿಯಲ್ಲಿ ಇಂದಿನಿಂದ ಎರಡು ದಿನಗಳ ಕಾಲ ಉತ್ಸವ ನಡೆಯುತ್ತಿದೆ. ಉತ್ಸವದಲ್ಲಿ ಮಲ್ಲಮ್ಮನವರ ಸಾಹಸಗಾಥೆ ಕುರಿತು ವಿಚಾರ ಸಂಕೀರ್ಣ ಸೇರಿ ಮತ್ತಿತರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಉತ್ಸವ



ಬಂದಾಗ ಮಾತ್ರ ಮಲ್ಲಮ್ಮ ನೆನಪಾಗುತ್ತಾರೆ. ಆ ಮೇಲೆ ವರ್ಷಪೂರ್ತಿ ಮರೆತು ಬಿಡುತ್ತಾರೆ. ಹಾಗಾಗಿ, ಮಲ್ಲಮ್ಮನ ಅಭಿಮಾನಿಗಳ ಬಹುದಿನಗಳ ಬೇಡಿಕೆ ಆಗಿರುವ ಮಲ್ಲಮ್ಮ ಸಮಾಧಿ ಸ್ಥಳ ಗುರುತಿಸುವುದು, ರಾಕ್ ಗಾರ್ಡನ್ ನಿರ್ಮಾಣ, ವೀರರಾಣಿ ಬೆಳವಡಿ ಮಲ್ಲಮ್ಮ ಅಭಿವೃದ್ಧಿ ಪ್ರಾಧಿಕಾರ, ಮಲ್ಲಮ್ಮನವರ ಹೆಸರಲ್ಲಿ ಅಧ್ಯಯನ ಪೀಠ ಸ್ಥಾಪಿಸಲು ಸರ್ಕಾರ ಮನಸ್ಸು ಮಾಡದೇ ಇರುವುದು ಅಸಮಾಧಾನಕ್ಕೆ ಕಾರಣವಾಗಿದೆ.

**ಮಲ್ಲಮ್ಮ ಸ್ತ್ರೀ ಕುಲಕ್ಕೆ ಸ್ಫೂರ್ತಿಯ ಸೆಲೆ :** 'ಛತ್ರಪತಿ ಶಿವಾಜಿ ಮಹಾರಾಜರ ಸೈನ್ಯಕ್ಕೆ ಸೋಲಿನ ರುಚಿ ತೋರಿಸಿದ್ದ ದಿಟ್ಟ ಮಹಿಳೆ ಬೆಳವಡಿ ಮಲ್ಲಮ್ಮ. ಮಲ್ಲಮ್ಮಾಜಿ ಶೌರ್ಯ, ಸಾಹಸ, ವಾತ್ಸಲ್ಯಕ್ಕೆ ಮನಸೋತ ಶಿವಾಜಿ ಮಹಾರಾಜ, ಒಪ್ಪಿಕೊಂಡಿದ್ದು ಇತಿಹಾಸದಲ್ಲಿ ದಾಖಲಾಗಿದೆ.


### ಸಮರ್ಥ ಮಹಿಳಾ ಸೈನ್ಯ ಕಟ್ಟಿದ್ದರು

ಸ್ವತಃ ಯುದ್ಧ ನೈಪುಣ್ಯತೆ ಹೊಂದಿದ್ದ ಮಲ್ಲಮ್ಮ ತಮ್ಮ ಸೈನಿಕರನ್ನು ಸಮರಕ್ಕೆ ಹುರಿಗೊಳಿಸಿದ್ದರು. ಜನಪರ ಆಡಳಿತ ನೀಡಿದ ಈ ವೇಳೆ 2 ಸಾವಿರ ಮಹಿಳೆಯರು, 15 ಸಾವಿರ ಸಶಸ್ತ್ರ ಪುರುಷ ಸೈನಿಕರು, 25 ಸಾವಿರಕ್ಕೂ ಅಧಿಕ ಯುವಕರು ಯುದ್ಧ ತರಬೇತಿ ಪಡೆದು ಆಪತ್ಕಾಲದಲ್ಲಿ ಸಂಸ್ಥಾನಕ್ಕೆ ಪ್ರಾಣಕೊಡಲು ಸಜ್ಜಾಗಿದ್ದರು. ಅದೇ ರೀತಿ ಗುಪ್ತಚರ ವ್ಯವಸ್ಥೆ ಕೂಡ ಬಲಿಷ್ಠವಾಗಿತ್ತು.

ಶಿವಾಜಿ ಸೈನಿಕರ ವಿರುದ್ಧ ಯುದ್ಧದ ನಂತರವೂ ಕಿತ್ತೂರು ಸಂಸ್ಥಾನ ಮತ್ತು ಸವಣೂರಿನ ನವಾಬರ ನಿರಂತರ ಉಪಟಳದ ನಡುವೆಯೂ 20 ವರ್ಷಗಳ ಕಾಲ ಸುಭದ್ರ, ಜನಪರ ಆಡಳಿತ ನೀಡಿದ ಕೀರ್ತಿ ಮಲ್ಲಮ್ಮ ಅವರಿಗೆ ಸಲ್ಲುತ್ತದೆ.

## ಯಡಿಯೂರಪ್ಪ ಉತ್ಸವ 2028ನೇ ಚುನಾವಣೆಯಲ್ಲಿ ಪರಿವರ್ತನೆಗೆ ಮುನ್ನುಡಿ: ಬೊಮ್ಮಾಯಿ

• ಉದಯವಾಹಿನಿ,ಬೆಂಗಳೂರು



2028ರ ವಿಧಾನಸಭೆ ಚುನಾವಣೆಗೂ ಮುನ್ನ ಬಿಜೆಪಿ ಮಾಜಿ ಸಿಎಂ ಯಡಿಯೂರಪ್ಪ ಉತ್ಸವ ಮಾಡಲು ಸಿದ್ಧತೆ ನಡೆಸುತ್ತಿದೆ. ಈ ಕುರಿತು ಹಾವೇರಿ ಸಂಸದ ಬಸವರಾಜ್ ಬೊಮ್ಮಾಯಿ ಅವರು ಮಾತನಾಡಿದ್ದು, ಯಡಿಯೂರಪ್ಪ ಬಿಜೆಪಿಯ ದೊಡ್ಡ ಆಸ್ತಿ, ದೊಡ್ಡ ಶಕ್ತಿ. ಆ ಶಕ್ತಿಯ ಬಳಕೆ ಮಾಡಿಕೊಳ್ಳುವುದರಲ್ಲಿ ತಪ್ಪಿಲ್ಲ ಎನ್ನುವುದು ನನ್ನ ನಂಬಿಕೆ ಎಂದರು.

ರಾಜ್ಯದಲ್ಲಿ ಐವತ್ತು ವರ್ಷ ತುಂಬು ರಾಜಕಾರಣ ಮಾಡಿರುವವರ ಸಂಖ್ಯೆ ತುಂಬಾ ಕಡಿಮೆ. ಯಡಿಯೂರಪ್ಪ ನಾಲ್ಕು ಬಾರಿ ಸಿಎಂ ಆದವರು. ಬಹಳಷ್ಟು ಅನುಭವವಿದೆ. ಕಾಂಗ್ರೆಸ್ ದುಸ್ಥಿತಿಯ ಸರ್ಕಾರಕ್ಕೆ ಒಂದು ಒಳ್ಳೆಯ ಉತ್ತರ ಅಷ್ಟೇ ಅಲ್ಲ, ನಾಡು ಸುಭಿಕ್ಷೆಯಾಗುವ, ಜನಪರ ಆಡಳಿತ ಕೊಡುವುದಕ್ಕೆ ಯಡಿಯೂರಪ್ಪನವರ ಮಾರ್ಗದರ್ಶನದ ಅವಶ್ಯಕತೆ ಇದೆ. ಆ ಹಿನ್ನೆಲೆಯಲ್ಲಿ ಉತ್ಸವ ಮಾಡುತ್ತಿದ್ದೇವೆ. ಈ ಉತ್ಸವ 2028ನೇ ಚುನಾವಣೆಗೆ ಮುನ್ನುಡಿ. ಬಿಜೆಪಿಯ ಎಲ್ಲಾ ನಾಯಕರು ಸಕ್ರಿಯವಾಗಿ ಪಾಲ್ಗೊಳ್ಳುತ್ತೇವೆ ಎಂದು ಹೇಳಿದರು. ಬಿಜೆಪಿ ಬಿಟ್ಟುಹೋಗಿರುವ ಕೆ.ಎಸ್.ಈಶ್ವರಪ್ಪ ಸೇರಿದಂತೆ ಉಳಿದ ನಾಯಕರ ಘರ್‌ವಾಪಸಿ ಬಗ್ಗೆ ಗಂಭೀರವಾದ ಚಿಂತನೆ ಮಾಡಬೇಕಾಗುತ್ತದೆ.

ಈ ಎಲ್ಲಾ ವಿಚಾರಗಳು ವೈಯಕ್ತಿಕಕ್ಕಿಂತ ಪಕ್ಷದ ಕೋರ್ ಕಮಿಟಿಯಲ್ಲಿ ಚರ್ಚೆ ಮಾಡಲಾಗುತ್ತದೆ. ಅಂತಿಮವಾಗಿ ಕೋರ್ ಕಮಿಟಿಯಲ್ಲಿ ತೀರ್ಮಾನ ತೆಗೆದುಕೊಂಡ ನಂತರ ದೆಹಲಿಯಲ್ಲಿ ನಮ್ಮ ಪಕ್ಷದ ವರಿಷ್ಠರು ಅಂತಿಮ ತೀರ್ಮಾನ ತೆಗೆದುಕೊಳ್ಳುತ್ತಾರೆ. 2028ರ ಗೆಲುವಿಗೆ ಏನೆಲ್ಲಾ ಮಾಡಬೇಕು ಎಂಬ ಅಂಶಗಳನ್ನು ಪಕ್ಷ ನಿರ್ಧರಿಸಲಿದೆ ಎಂದರು.ಕಾಂಗ್ರೆಸ್ ಹೈಕಮಾಂಡ್‌ಗೆ ಯಾವುದೇ ಶಕ್ತಿ ಇಲ್ಲ.


**ಈ ದಿನದ ದರ** ಪೆಟ್ರೋಲ್: 102.98 ₹/L ಡೀಸೆಲ್ : 91.52 ₹/L ಬಂಗಾರ: ₹17,308/Gram24ct ₹15,865/Gram22ct ಬೆಳ್ಳಿ: ₹295.00/Gram

# ಭಾರತ ಶಾಂತಿ ಬಯಸುವ ದೇಶ, ಯುದ್ಧಗಳು ಸರಿಯಲ್ಲ : ಡಿಸಿಎಂ

• ಉದಯವಾಹಿನಿ, ಬೆಂಗಳೂರು

ಮೂವರು ಶಾಸಕರು ಸೇರಿದಂತೆ ಸಾವಿರಾರು ಮಂದಿ ದುಬೈನಲ್ಲಿ ಸಿಲುಕಿದ್ದಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕ, ಕೇರಳ ಸೇರಿದಂತೆ ದಕ್ಷಿಣ ಭಾರತ ಲಕ್ಷಾಂತರ ಮಂದಿ ದುಬೈನಲ್ಲಿ ಕೆಲಸ ನಿರ್ವಹಿಸುತ್ತಿದ್ದು, ಇರಾನ್–ಇಸ್ರೇಲ್ ಯುದ್ಧದಿಂದಾಗಿ ಸಂಕಷ್ಟಕ್ಕೆ ಸಿಲುಕಿದ್ದಾರೆ. ಅವರುಗಳನ್ನು ಸುರಕ್ಷಿತವಾಗಿ ಕರೆತರಲು ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳುತ್ತಿದ್ದೇವೆ ಎಂದರು. ವಿದೇಶದಲ್ಲಿ ಸಿಲುಕಿರುವವರನ್ನು ಕೇಂದ್ರ ಸರ್ಕಾರ ರಕ್ಷಣೆ ಮಾಡಬೇಕಿದೆ. ರಾಜ್ಯ ಸರ್ಕಾರ ಅಗತ್ಯ ಸಹಕಾರ ನೀಡಲಿದೆ. ಕರ್ನಾಟಕದ ಶಾಸಕ ಎ.ಸಿ. ಶ್ರೀನಿವಾಸ್, ವಿಧಾನ ಪರಿಷತ್ ಸದಸ್ಯ ಎಸ್.ಎಲ್.ಭೋಜೇಗೌಡ, ಶಾಸಕ ಭರತ್‌ರೆಡ್ಡಿ ಅವರ ಕುಟುಂಬದ ಸದಸ್ಯರು ದುಬೈನಲ್ಲಿ ಸಿಲುಕಿದ್ದಾರೆ ಎಂದು ಮಾಹಿತಿ ಇದೆ. ಯಾರಿಗೂ ಆತಂಕ ಬೇಡ, ಎಲ್ಲರನ್ನೂ ಸುರಕ್ಷಿತವಾಗಿ ಕರೆತರಲು ಪ್ರಯತ್ನಿಸುತ್ತೇವೆ ಎಂದರು.

ಭಾರತ ಶಾಂತಿ ಬಯಸುವ ದೇಶ. ಈ ರೀತಿಯ ಯುದ್ಧಗಳು ಸರಿಯಲ್ಲ, ಅದರಲ್ಲೂ ಶಾಲೆಯ ಮೇಲೆ ದಾಳಿ ನಡೆಸಿ, 70 ಮಕ್ಕಳನ್ನು ಹತ್ಯೆ ಮಾಡಿರುವುದು ಖಂಡನೀಯ. ಟಿವಿಗಳಲ್ಲಿ ದಾಳಿಯ ದೃಶ್ಯಗಳನ್ನು ನೋಡಿದರೆ, ಗಾಬರಿಯಾಗುತ್ತಿದೆ. ಮಿಸೈಲ್‌ಗಳು ಡ್ರೋನ್‌ಗಳ ಮೂಲಕ ಏರ್‌ಸ್ಟ್ರೈಕ್ ನಡೆಸಲಾಗುತ್ತಿದೆ. ಇದು ಆತಂಕದ ವಾತಾವರಣ



ಎಂದು ಹೇಳಿದರು. ಸಂಕಷ್ಟದಲ್ಲಿ ಸಿಲುಕಿದವರಿಗೆ ಕೇಂದ್ರ ಸರ್ಕಾರ ಸಹಾಯವಾಣಿ ಆರಂಭಿಸಿದೆ. ರಾಜ್ಯ ಸರ್ಕಾರ ಪ್ರತ್ಯೇಕವಾದ ಸಹಾಯವಾಣಿ ತೆರೆಯುವುದು ಸೂಕ್ತವಲ್ಲ. ವಿದೇಶದಲ್ಲಿರುವ ಕನ್ನಡದ ಸಂಘಟನೆಗಳು ಭಾರತೀಯರ ನೆರವಿಗೆ ಧಾವಿಸಬೇಕು ಎಂದು ಅವರು ಮನವಿ ಮಾಡಿದರು.

ಕೇಂದ್ರ ಸರ್ಕಾರ ವಿದೇಶದಲ್ಲಿರುವವರಿಗೆ ಆತ್ಮಸ್ಥೈರ್ಯ ತುಂಬುವ ಕ್ರಮಗಳನ್ನು ಕೈಗೊಳ್ಳಬೇಕೆಂದು ಒತ್ತಡ ಹೇರುವುದಾಗಿ ಡಿ.ಕೆ.ಶಿವಕುಮಾರ್ ಹೇಳಿದರು. ಮತ್ತೊಂದೆಡೆ ಚಿಕ್ಕಮಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎರಡು ದಿನಗಳ ಹಿಂದೆ ದುಬೈ ಹಾಗೂ ಇತರ ಮಧ್ಯ ಪ್ರಾಚ್ಯ ರಾಷ್ಟ್ರದಲ್ಲಿ ನೆಲೆಸಿದ್ದ ವಿದೇಶಿ ಪ್ರಜೆಗಳಿಗೆ ಎಚ್ಚರಿಕೆಯ ಸಂದೇಶ ರವಾನಿಸಿದ್ದಾಗಿ ತಿಳಿದು ಬಂದಿದೆ. ಏನೇ ಆದರೂ ಶಾಂತಿ ಪಾಲನೆ ಮುಖ್ಯ. ಯಾರ ಆಸ್ತಿಗೂ ಹಾನಿಯಾಗಬಾರದು. ಕನ್ನಡಿಗರೂ ಸೇರಿದಂತೆ ಎಲ್ಲಾ ಭಾರತೀಯರನ್ನು ಸುರಕ್ಷಿತವಾಗಿ ಕರೆತರಬೇಕಿದೆ ಎಂದು ಹೇಳಿದರು. ಯುದ್ಧ ನಿಲ್ಲಿಸಲು ಕೇಂದ್ರ ಸರ್ಕಾರ ಅಮೇರಿಕಾದ ಮೇಲೆ ಒತ್ತಡ ಹೇರಬೇಕು. ಈ ಸಂಘರ್ಷದಿಂದಾಗಿ ವಿಶ್ವದ ಅರ್ಧ ಭಾಗಕ್ಕೆ ಸಂಪರ್ಕವೇ ಕಡಿತಗೊಂಡಂತಾಗಿದೆ. ಭಾರತಕ್ಕೆ ದುಬೈ ಹಾಗೂ ಸಿಂಗಾಪೂರದ ಮೂಲಕ ಬೇರೆ ಬೇರೆ ದೇಶಗಳಿಗೆ ವಿಮಾನ ಪ್ರಯಾಣಿಸುತ್ತಿದ್ದವು ಈಗ ಎಲ್ಲವೂ ಸ್ಥಗಿತವಾಗಿವೆ ಎಂದರು.

> ದಕ್ಷಿಣ ಭಾರತದಲ್ಲಿ ಅದರಲ್ಲೂ ಮಂಗಳೂರಿನಲ್ಲಿ ಕುಟುಂಬಕ್ಕೆ ಒಬ್ಬರಂತೆ ದುಬೈನಲ್ಲಿದ್ದು, ಕೆಲಸ ಮಾಡುತ್ತಿದ್ದಾರೆ. ಸೌದಿ ಅರೇಬಿಯಾ ಇಂದು ಅಭಿವೃದ್ಧಿಯಾಗಲು ಭಾರತೀಯ ಕೆಲಸಗಾರರೇ ಕಾರಣ. ಈ ಯುದ್ಧದಿಂದ ಭಾರತಕ್ಕೆ ಗಂಡಾತರವಾಗಲಿದೆ.
>
> –ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ

## ಬೆಳ್ಳಂಬೆಳಗ್ಗೆ ಬೆಂಕಿ ಅವಘಡ; ಹೊತ್ತಿ ಉರಿದ ಹಾಸಿಗೆ ಗೋದಾಮು

• ಉದಯವಾಹಿನಿ, ಬೆಂಗಳೂರು

ನಗರದ ಹೊರವಲಯದಲ್ಲಿ ಬೆಳ್ಳಂಬೆಳಗ್ಗೆ ಬೃಹತ್ ಹಾಸಿಗೆ, ಸೋಫ ಗೋದಾಮಿನಲ್ಲಿ ಬೆಂಕಿ ಕಾಣಿಸಿಕೊಂಡು ಹೊತ್ತಿ ಉರಿದಿದೆ. ಮುಗಿಲೆತ್ತರಕ್ಕೆ ದಟ್ಟ ಹೊಗೆ ಆವರಿಸಿದ್ದರಿಂದ ಸುತ್ತಮುತ್ತಲಿನ ನಾಗರಿಕರು ಆತಂಕಗೊಂಡಿದ್ದಾರೆ. ತಲಘಟ್ಟಪುರ ಪೊಲೀಸ್ ಠಾಣೆ ವ್ಯಾಪ್ತಿಯ ಅಂಜಾನಪುರ ಸಮೀಪದ ಕೆಂಬತ್ತಹಳ್ಳಿಯಲ್ಲಿ ಬೃಹತ್ ಹಾಸಿಗೆ ಗೋದಾಮು ಇದೆ. ಇಲ್ಲಿ ಹಾಸಿಗೆ ಹಾಗೂ ಸೋಫಾ ತಯಾರಿಸಲಾಗುತ್ತದೆ. ಭಾನುವಾರ ಬೆಳಗ್ಗೆ 8.15ರ ಸುಮಾರಿನಲ್ಲಿ ಈ ಗೋದಾಮಿನಲ್ಲಿ ಬೆಂಕಿ ಕಾಣಿಸಿಕೊಂಡು ದಟ್ಟ ಹೊಗೆ ಆವರಿಸಿದೆ. ತಕ್ಷಣ ಸ್ಥಳೀಯರು ಅಗ್ನಿಶಾಮಕ ದಳಕ್ಕೆ ವಿಷಯ ತಿಳಿಸಿದ್ದಾರೆ. ಅಗ್ನಿಶಾಮಕ ದಳದಸಿಬ್ಬಂದಿ 8 ವಾಹನಗಳೊಂದಿಗೆ ಸ್ಥಳಕ್ಕೆ ಆಗಮಿಸಿ ಬೆಂಕಿ ನಂದಿಸಲು ಹರಸಾಹಸಪಡುತ್ತಿದ್ದಾರೆ.

ಈ ಗೋದಾಮಿನ ಕಾಂಪೌಂಡ್‌ನೊಳಗೆ ನಿಲ್ಲಿಸಿದ್ದ ಮೂರು ಕಾರುಗಳು, ಎರಡು ಗೂಡ್ಸ್ ವಾಹನಗಳು ಬೆಂಕಿಗೆ ಆಹುತಿಯಾಗಿವೆ. ಈ ಗೋದಾಮು ಅಕ್ಕಪಕ್ಕದಲ್ಲಿರುವ ಎರಡು ಅಪಾರ್ಟ್‌ಮೆಂಟ್‌ಗಳಿಗೂ ಬೆಂಕಿ ತಗುಲಿದ್ದರಿಂದ ಸೈಡ್‌ಗ್ಲಾಸ್‌ಗಳು ಸುಟ್ಟು ಮೆಲ್ಟಾಗಿವೆ. ಈ ಅಪಾರ್ಟ್‌ಮೆಂಟ್‌ಗಳಲ್ಲಿರುವ ನಿವಾಸಿಗಳನ್ನು ಮತ್ತೊಂದು ಬ್ಲಾಕ್‌ಗೆ ಸ್ಥಳಾಂತರಿಸಲಾಗಿದೆ. ಬೆಂಕಿಯ ದಟ್ಟ ಹೊಗೆ ಆಕಾಶದೆತ್ತರಕ್ಕೆ ಆವರಿಸಿದ್ದು, ಬೆಂಕಿ ಅವಘಡಕ್ಕೆ ಕಾರಣ ಸದ್ಯಕ್ಕೆ ತಿಳಿದುಬಂದಿಲ್ಲ. ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಕಾಣಿಸಿಕೊಂಡಿರಬಹುದೆಂಬ ಶಂಕೆ ವ್ಯಕ್ತವಾಗಿದೆ. ತಲ್ಲಘಟ್ಟಪುರ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿದ್ದು, ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಕಳೆದ ಒಂದು ವಾರದ ಹಿಂದೆಯಷ್ಟೇ ನೆಲಮಂಗಲದ ಪರ್ಫ್ಯೂಮ್ ಕಾರ್ಖಾನೆ ಹೊತ್ತಿ ಉರಿದಿತ್ತು. ಅಲ್ಲದೆ ನಾಲ್ಕು ದಿನಗಳ ಹಿಂದೆ ನಗರದ ಚಿಕ್ಕಪೇಟೆಯ ಕುಂಬಾರಪೇಟೆಯಲ್ಲಿ ವಾಣಿಜ್ಯ ಕಟ್ಟಡ ಹೊತ್ತಿ ಉರಿದಿತ್ತು. ಈ ಎರಡು ಘಟನೆಗಳು ಮಾಸುವ ಮುನ್ನವೇ ಇದೀಗ ಹಾಸಿಗೆ ಗೋದಾಮಿನಲ್ಲಿ ಬೆಂಕಿ ಕಾಣಸಿಕೊಂಡಿದೆ.

## ವಿಲ್ಲಾದಲ್ಲಿ ಸಾಮೂಹಿಕ ಅತ್ಯಾಚಾರ ಪ್ರಕರಣ: ಪರೋಕ್ಷವಾಗಿ ಸಹಕರಿಸಿದ ಇನ್ನೂ ಮೂವರ ಬಂಧನ

• ಉದಯವಾಹಿನಿ, ಬೆಂಗಳೂರು

ಡ್ರಗ್ಸ್ ನೀಡಿ ಯುವತಿ ಮೇಲೆ ಸಾಮೂಹಿಕ ಅತ್ಯಾಚಾರವೆಸಗಿದ್ದ ಪ್ರಕರಣದ ತನಿಖೆಯನ್ನು ಚುರುಕುಗೊಳಿಸಿರುವ ಅಮೃತಹಳ್ಳಿ ಠಾಣೆ ಪೊಲೀಸರು ಇನ್ನೂ ಮೂವರನ್ನು ಬಂಧಿಸಿದ್ದಾರೆ. ಈ ಕೃತ್ಯಕ್ಕೆ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಸಹಕರಿಸಿದ ಆಧಾರದಲ್ಲಿ ಶಿವಮೊಗ್ಗ ಮೂಲದ ಶ್ರವಣ್ (21), ದಾವಣಗೆರೆ ಜಿಲ್ಲೆಯ ಅನಿರುದ್ಧ್ (33). ಗುಜರಾತ್ ರಾಜ್ಯದ ಮೋಹಿತ್ ಜೈನ್ (23) ಬಂಧಿತರು. ಈ ಆರೋಪಿಗಳು ಪಾರ್ಟಿಗಳಿಗೆ ಯುವತಿಯರನ್ನು ಬುಕ್ ಮಾಡುತ್ತಿದ್ದರು ಎಂಬುದು ಇದುವರೆಗಿನ ತನಿಖೆಯಿಂದ ತಿಳಿದುಬಂದಿದೆ.

ಈಗಾಗಲೇ ಈ ಪ್ರಕರಣದಲ್ಲಿ ಕೋಲ್ಕತ್ತಾ ಮೂಲದ ಡಿಕ್ಸನ್ ಸಾಂತ್ರಾ (21). ಹಾಸನ ಜಿಲ್ಲೆ ಸಕಲೇಶಪುರ ಮೂಲದ ನಿಖಿಲ್ (34)ನನ್ನು ಬಂಧಿಸಲಾಗಿದೆ. ಇನ್‌ಸ್ಟಾಗ್ರಾಮ್ ಮೂಲಕ ಯುವತಿಯರ ಸ್ನೇಹ ಬೆಳೆಸಿ ನಂತರ ಫೋಟೋಶೂಟ್, ಮಾಡೆಲಿಂಗ್ ಹಾಗೂ ಪಾರ್ಟಿ ನೆಪದಲ್ಲಿ ಆಹ್ವಾನಿಸುತ್ತಿದ್ದರು. ಪ್ರಾರಂಭದಲ್ಲಿ ಅವರ ನಂಬಿಕೆ ಗಳಿಸಲು ಪಬ್ ಹಾಗೂ ಕೆಫೆಗಳಲ್ಲಿ ಭೇಟಿಯಾಗಿ ಸಭ್ಯರಂತೆ ವರ್ತಿಸುತ್ತಿದ್ದರು. ತದನಂತರದಲ್ಲಿ ಸ್ನೇಹ ಮುಂದುವರೆಸಿ ಪಾರ್ಟಿ ನೆಪದಲ್ಲಿ ವಿಲ್ಲಾಗಳಿಗೆ ಕರೆದೊಯ್ದು, ಮತ್ತುಬರಿಸುವ ಪಾನೀಯ ಕುಡಿಸಿ ಅವರ ಮೇಲೆ ಲೈಂಗಿಕ ದೌರ್ಜನ್ಯ ಎಸಗುತ್ತಿದ್ದರು ಎಂಬ ಆರೋಪ ಕೇಳಿಬಂದಿದೆ. ಆರೋಪಿಗಳ ಕೈಗೆ ಸಿಕ್ಕಿಕೊಂಡ ಯುವತಿಯೊಬ್ಬಳ ಮೇಲೆ ಸಾಮೂಹಿಕ ಅತ್ಯಾಚಾರ ಪ್ರಕರಣದಲ್ಲಿ ಇನ್ನೂ ಹಲವರು ಭಾಗಿಯಾಗಿರುವ ಶಂಕೆ ವ್ಯಕ್ತವಾಗಿದ್ದು, ತನಿಖೆ ಮುಂದುವರೆದಿದೆ. ಈಗಾಗಲೇ ಅಮೃತಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೇಳು ಮಂದಿ ಸಾಕ್ಷ್ಯಾದಾರರನ್ನು ವಿಚಾರಣೆ ಮಾಡಿದ್ದು, ಅವರ ಹೇಳಿಕೆ ಹಾಗೂ ಸಾಕ್ಷ್ಯಾಧಾರಗಳ ಆಧಾರದ ಮೇಲೆ ಇದುವರೆಗೂ ಐದು ಮಂದಿಯನ್ನು ಬಂಧಿಸಲಾಗಿದೆ.

## ಒಂಟಿಮನೆಗಳ ಆದೇಶ ಪತ್ರಗಳ ವಿತರಣೆ

• ಉದಯವಾಹಿನಿ, ಬೆಂಗಳೂರು

ಮಾಗಡಿ ರಸ್ತೆಯ ಬಿಇಎಲ್ ಬಡಾವಣೆಯಲ್ಲಿರುವ ಶಾಸಕರ ಕಚೇರಿಯಲ್ಲಿ ಬೆಂಗಳೂರು ಪಶ್ಚಿಮ ನಗರ ಪಾಲಿಕೆ ವತಿಯಿಂದ ಒಂಟಿ ಮನೆ, ನಿವೇಶನ ಹಕ್ಕು ಪತ್ರ, 94 ಸಿಸಿ ಅಡಿಯಲ್ಲಿ ಹಕ್ಕು ಪತ್ರಗಳನ್ನು ವಿತರಿಸಲಾಯಿತು.ಶಾಸಕ ಎಸ್.ಟಿ. ಸೋಮಶೇಖರ್ ಮಾತನಾಡಿ, ಸರ್ಕಾರದಿಂದ ಸಿಗುವ ಸವಲತ್ತುಗಳು ದುರುಪಯೋಗವಾಗಬಾರದು. ಹತ್ತಾರು ದಶಕ ಬಾಳಿಕೆ ಬರುವಂತಹ ಮನೆ ಕಟ್ಟಿಕೊಂಡು ನೆಮ್ಮದಿಯ ಜೀವನ ಸಾಗಿಸಿ ಎಂದು ತಿಳಿಸಿದರು. ಮಾಗಡಿ ಮುಖ್ಯರಸ್ತೆಯಿಂದ ತುಮಕೂರು ರಸ್ತೆ, ಗರುಡಪ್ಪ ವೃತ್ತದಿಂದ ಚೇತನ್ ಸರ್ಕಲ್, ಡಿ. ಗ್ರೂಪ್ ವೃತ್ತದಿಂದ ಕೆಂಪೇಗೌಡ ವೃತ್ತದವರೆಗೆ ಕೈಗೊಂಡಿರುವ 23 ಕೋಟಿ ವೆಚ್ಚದ ಡಾಂಬರೀಕರಣ ಕಾಮಗಾರಿಗಳಿಗೆ ಚಾಲನೆ ನೀಡಿದರು.

## 75 ಲಕ್ಷ ವೆಚ್ಚದ ರಸ್ತೆ ಕಾಮಗಾರಿಗೆ ಚಾಲನೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ತಾವರೆಕೆರೆ

ರಾಮೇಶ್ವರ ದೇವಾಲಯ ಸಂಪರ್ಕಿಸುವ ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ ಶಾಸಕ ಶರತ್ ಬಚ್ಚೇಗೌಡ ಚಾನೆ ನೀಡಿದರು. ರಾಮೇಶ್ವರ ದೇವಾಲಯದಲ್ಲಿ ಪ್ರತಿ ಹತ್ತು ವರ್ಷಕ್ಕೊಮ್ಮೆ ದೊಡ್ಡದೇವರ ಜಾತ್ರೆ ನಡೆಯುತ್ತದೆ. ಈ ವರ್ಷ ಮಾರ್ಚ್ 28 ರಿಂದ ಏಪ್ರಿಲ್ 5 ರವರೆಗೆ ನಡೆಯುವ ದೊಡ್ಡದೇವರ ಜಾತ್ರೆಗೆ 2 ಲಕ್ಷಕ್ಕೂ ಅಧಿಕ ಸಂಖ್ಯೆಯಲ್ಲಿ ಭಕ್ತರು ಆಗಮಿಸಲಿದ್ದಾರೆ. ಜಾತ್ರೆಗೆ ಬರುವವರ ಪ್ರಯಾಣ ಉತ್ತಮವಾಗಿರಲಿ ಹಾಗೂ ಸುಗಮ ಸಂಚಾರಕ್ಕೆ ಅನುಕೂಲವಾಗಲೆಂದು ರಸ್ತೆ ನಿರ್ಮಿಸಲಾಗುತ್ತಿದೆ ಎಂದು ಶಾಸಕ ಶರತ್ ಬಚ್ಚೇಗೌಡ ತಿಳಿಸಿದರು. ದೇವಾಲಯಕ್ಕೆ ತೆರಳಲು ಸಮರ್ಪಕ ರಸ್ತೆ ಇಲ್ಲದ ಕಾರಣ ಶಾಸಕರ ಅನುದಾನ, ಪಂಚಾಯಿತಿ ಅನುದಾನದಡಿ 75 ಲಕ್ಷ ವೆಚ್ಚದಲ್ಲಿ ರಸ್ತೆ ಮತ್ತು ಕಾಲುವೆ ಕಾಮಗಾರಿ ನಡೆಸಲಾಗುತ್ತಿದೆ ಎಂದರು.

# ಗಲ್ಫ್ ರಾಷ್ಟ್ರಗಳಲ್ಲಿ ಸಿಲುಕಿಕೊಂಡ ಕನ್ನಡಿಗರು

### ಅವರೆಲ್ಲಾ ಸಂಪರ್ಕಿಸಿ ಸುರಕ್ಷಿತವಾಗಿ ಕರೆತರುವ ಪ್ರಯತ್ನ ಮುಂದುವರೆದಿದೆ

ಇರಾನ್ –ಇಸ್ರೇಲ್ ಯುದ್ಧ

• ಉದಯವಾಹಿನಿ, ಬೆಂಗಳೂರು



ಇರಾನ್–ಇಸ್ರೇಲ್ ಯುದ್ಧದ ಹಿನ್ನೆಲೆ ಇರಾನ್‌ವಾಯುಪ್ರದೇಶ ತಾತ್ಕಾಲಿಕವಾಗಿ ಮುಚ್ಚಿರುವುದರಿಂದ ಗಲ್ಫ್ ರಾಷ್ಟ್ರಗಳಲ್ಲಿ ಅನೇಕರ ಕನ್ನಡಿಗರು ಸಿಲುಕಿಕೊಂಡಿದ್ದಾರೆ. ಪ್ರವಾಸಕ್ಕೆಂದು ತೆರಳಿದ್ದ ಬಳ್ಳಾರಿ ಮೂಲದ 35 ಪ್ರವಾಸಿಗರು, ಜೊತೆಗೆ ಬಿಗ್ ಬಾಸ್ ಮಾಜಿ ಸ್ಪರ್ಧಿ ಡ್ರೋನ್ ಪ್ರತಾಪ್, ವಿಧಾನ ಪರಿಷತ್ ಸದಸ್ಯ ಭೋಜೇಗೌಡ, ಬಳ್ಳಾರಿ ಭರತ್ ರೆಡ್ಡಿ ಸೇರಿದಂತೆ 150ಕ್ಕೂ ಹೆಚ್ಚು ಕನ್ನಡಿಗರು ದುಬೈನಲ್ಲಿ ಸಿಲುಕಿಕೊಂಡಿದ್ದಾರೆ. ಕುಟುಂಬ ಸಮೇತರಾಗಿ ಭೋಜೇ ಗೌಡ ದುಬೈ ತೆರಳಿದ್ದರು. ದುಬೈನಲ್ಲಿ ಸಿಲುಕಿರುವ ಬಗ್ಗೆ ಭೋಜೇಗೌಡ ಮಾಹಿತಿ ಹಂಚಿಕೊಂಡಿದ್ದಾರೆ.

ದುಬೈಗೆ ತೆರಳುವ ವಿಮಾನಗಳ ಹಾರಾಟವನ್ನ ರದ್ದುಗೊಳಿಸಲಾಗಿದೆ. ಲಕ್ಷಾಂತರ ಪ್ರಯಾಣಿಕರು ದುಬೈನಲ್ಲಿ ಸಿಲುಕಿಕೊಂಡಿದ್ದಾರೆ. ಅದರಲ್ಲಿ ಕರ್ನಾಟಕ 150 ಮಂದಿ ಕೂಡ ದುಬೈನಲ್ಲೇ ಸಿಲುಕಿದ್ದಾರೆ. ಇನ್ನು ಈ ಕುರಿತು ಸಿಎಂ ಸಿದ್ದರಾಮಯ್ಯ ಜೊತೆ ಮಾತನಾಡಿ ಬಳ್ಳಾರಿ ಕ್ಷೇತ್ರದ ಜನರ ಬಗ್ಗೆ ಶಾಸಕ ಬಿ.ನಾಗೇಂದ್ರ ಮಾಹಿತಿ ನೀಡಿದ್ದಾರೆ. ನಾಗೇಂದ್ರ ಜೊತೆ ಮಾತನಾಡಿ ಘಟನೆಯ ವಿವರ ಪಡೆದುಕೊಂಡಿರುವ ಸಿಎಂ ಸಿದ್ದರಾಮಯ್ಯ, ಮುಖ್ಯ ಕಾರ್ಯದರ್ಶಿ ಜೊತೆ ಮಾತನಾಡುವುದಾಗಿ ಭರವಸೆ ನೀಡಿದ್ದಾರೆ.



ದುಬೈನಲ್ಲಿ ವಿದ್ಯಾರ್ಥಿಗಳು ಸೇರಿ 150 ಹೆಚ್ಚು ಕನ್ನಡಿಗರು ಸಿಲುಕಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿಕೆ ನೀಡಿದ್ದಾರೆ.

ಅವರೆಲ್ಲಾ ಸಂಪರ್ಕಿಸಿ ಸುರಕ್ಷಿತವಾಗಿ ಕರೆತರುವ ಪ್ರಯತ್ನ ಮುಂದುವರೆದಿದೆ. ಫೆ.23ರಂದು ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕು ತೋರಣಘಟ್ಟ ಗ್ರಾಮದ 15 ಮಂದಿ, ಬಳ್ಳಾರಿ ಸುತ್ತಮುತ್ತಲಿನ 35 ಮಂದಿ ಸೇರಿ ಒಟ್ಟು 50ಕ್ಕೂ ಹೆಚ್ಚು ಕನ್ನಡಿಗರು ಪ್ರವಾಸಕ್ಕೆ ತೆರಳಿದ್ದರು. ವಾಪಸ್ಸು ಟಿಕೆಟ್ ಬುಕ್ ಮಾಡಿದ್ದರೂ ಶಾರ್ಜಾ, ಅಬುಧಾಬಿ, ದುಬೈ ವಿಮಾನ ನಿಲ್ದಾಣಗಳಲ್ಲಿ ಸಂಚಾರ ಸ್ಥಗಿತಗೊಂಡಿರುವುದರಿಂದ ಹೋಟೆಲ್‌ಗಳಲ್ಲಿ ತಂಗಬೇಕಾಗಿದೆ. ಪ್ರವಾಸದಲ್ಲಿ ಹಣ ಖರ್ಚಾಗಿ ಇದೀಗ ತಂಗುವ ವ್ಯವಸ್ಥೆಗೂ ಹಣದ ಕೊರತೆ ಎದುರಾಗಿದೆ. ಒಂದೇ ಕೊಠಡಿಯಲ್ಲಿ ಮೂವರು ತಂಗಿದ್ದು ದಿನಕ್ಕೆ ಸುಮಾರು 10,000 ರೂಪಾಯಿ ವೆಚ್ಚವಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ. ಪ್ರವಾಸಿಗರು ವಿದೇಶಾಂಗ ಸಚಿವಾಲಯ ಮತ್ತು ಕರ್ನಾಟಕ ಸರ್ಕಾರದಿಂದ ತುರ್ತು ನೆರವು ಮತ್ತು ಶೀಘ್ರ ಸ್ವದೇಶಕ್ಕೆ ಮರಳುವ ವ್ಯವಸ್ಥೆಗಾಗಿ ಮನವಿ ಮಾಡಿದ್ದಾರೆ. ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕನ್ನಡಿಗರಿಗಾಗಿ ಸಹಾಯವಾಣಿ ಆರಂಭಿಸುವುದಾಗಿ ಘೋಷಿಸಿದ್ದಾರೆ. ಬಳ್ಳಾರಿಯ ಪಂಪನಗೌಡ ಕುಟುಂಬಸ್ಥರು ಕುಟುಂಬ ಸಮೇತರಾಗಿ ದುಬೈ ಪ್ರವಾಸಕ್ಕೆ ತೆರಳಿದ್ದರು. ಯಾಳ್ಪಿ ಪಂಪನಗೌಡ ಕುಟುಂಬದ 15 ಜನ ಸೇರಿ ಬಳ್ಳಾರಿಯಿಂದ 35 ಜನ ದುಬೈ ಪ್ರವಾಸಕ್ಕೆ ತೆರಳಿದ್ದರು. ದುಬೈನಲ್ಲಿ ಸಿಲುಕಿರುವ ಪ್ರವಾಸಿಗರು ಕುಟುಂಬದ ಜೊತೆ ನಿರಂತರ ಸಂಪರ್ಕದಲ್ಲಿದ್ದಾರೆ.


ಯಾವುದೇ ಆತಂಕ ಇಲ್ಲ, ನಾವು ಸುರಕ್ಷಿತವಾಗಿದ್ದೇವೆ ಎಂದು ಕುಟುಂಬಸ್ಥರ ಜೊತೆ ಪ್ರವಾಸಿಗರು ಹೇಳಿದ್ದಾರೆ. ಈಗಾಗಲೇ ಬಳ್ಳಾರಿ ಗ್ರಾಮೀಣ ಶಾಸಕ ಬಿ ನಾಗೇಂದ್ರ ಕೂಡಾ ಸಂಪರ್ಕ ಮಾಡಿದ್ದಾರೆ. ಬಳ್ಳಾರಿಯ 35 ಜನರು ದುರ್ಗದ 15 ಜನರು ಒಂದೆಡೆ ಇದ್ದೇವೆ ಎಂದು ಹೇಳಿದ್ದಾರೆ. ಶಾಸಕ ಭರತ್ ರೆಡ್ಡಿ ಕೂಡ ದುಬೈನಲ್ಲಿದ್ದಾರೆ. ಭರತ್ ರೆಡ್ಡಿ ಆಪ್ತರು ಸಂಪರ್ಕ ಮಾಡಿದ್ದಾರೆ. ಬುರ್ಜ್ ಖಲೀಫಾ ಪಕ್ಕದ ಲಾಡ್ಜ್‌ನಲ್ಲಿದ್ದೇವೆ ಎಂದು ಹೇಳಿದ್ದಾರೆ. ಆದರೆ ಅವರೆಲ್ಲರೂ ಆತಂಕದಲ್ಲಿದ್ದಾರೆ. ಕೂಡಲೇ ದುಬೈನಲ್ಲಿ ಸಿಲುಕಿರುವವರನ್ನು ಭಾರತಕ್ಕೆ ವಾಪಸ್ ಕರೆತರಬೇಕು ಎಂದು ಆಗ್ರಹಿಸಿದ್ದಾರೆ.

**ಕನ್ನಡಿಗರ ಸುರಕ್ಷತೆ ಕುರಿತು ಜೈಶಂಕರ್ ಜೊತೆ ಹೆಚ್ಡಿಕೆ ಸಮಾಲೋಚನೆ:** ಇರಾನ್ ಮತ್ತು ಇಸ್ರೇಲ್ ನಡುವಿನ ಯುದ್ಧದಿಂದಾಗಿ ದುಬೈ ಸೇರಿದಂತೆ ವಿವಿಧ ವಿದೇಶಿ ವಿಮಾನ ನಿಲ್ದಾಣದಲ್ಲಿ ಸಿಲುಕಿರುವ ಕನ್ನಡಿಗರ ಸುರಕ್ಷತೆ ಕುರಿತಂತೆ ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್ ಅವರೊಂದಿಗೆ ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಸಮಾಲೋಚನೆ ನಡೆಸಿದ್ದಾರೆ.

**ಸೂಕ್ತ ವ್ಯವಸ್ಥೆ ಕಲ್ಪಿಸುವಂತೆ ಮನವಿ**

**ದುಬೈನಲ್ಲಿ ಸಿಲುಕಿರುವ ವಿಧಾನ ಪರಿಷತ್ ಸದಸ್ಯ ಎಸ್.ಎಲ್.ಭೋಜೇಗೌಡ ಸೇರಿದಂತೆ ಕನ್ನಡಿಗರು ಸುರಕ್ಷಿತವಾಗಿ ತಾಯ್ನಾಡಿಗೆ ಮರಳಲು ಸೂಕ್ತ ವ್ಯವಸ್ಥೆ ಕಲ್ಪಿಸುವಂತೆ ವಿದೇಶಾಂಗ ಸಚಿವರಲ್ಲಿ ಕುಮಾರಸ್ವಾಮಿ ಮನವಿ ಮಾಡಿದ್ದಾರೆ. ಭೋಜೇಗೌಡ ಅವರೊಂದಿಗೆ ನಿನ್ನೆಯಿಂದ ಕುಮಾರಸ್ವಾಮಿ ಅವರು ಸಂಪರ್ಕದಲ್ಲಿದ್ದು, ಆತಂಕಕ್ಕೆ ಒಳಗಾಗದಂತೆ ಧೈರ್ಯ ತುಂಬಿದ್ದಾರೆ ಎಂದು ಜೆಡಿಎಸ್ ಮೂಲಗಳು ತಿಳಿಸಿವೆ. ಯುದ್ಧದ ಪರಿಣಾಮದಿಂದ ವಿದೇಶಗಳಲ್ಲಿ ಸಿಲುಕಿರುವವರು ಆಯಾ ದೇಶದ ಭಾರತೀಯ ರಾಯಭಾರ ಕಚೇರಿಯನ್ನು ಸಂಪರ್ಕಿಸಿ ಸೂಕ್ತ ಸಲಹೆಗಳನ್ನು ಪಡೆಯುವಂತೆ ಕುಮಾರಸ್ವಾಮಿ ತಿಳಿಸಿದ್ದಾರೆ. ಯಾರೂ ಕೂಡ ಆತಂಕಕ್ಕೆ ಒಳಗಾಗದೇ ಏನಾದರೂ ತೊಂದರೆಯಾದರೆ ಸಹಾಯವಾಣಿಯನ್ನು ಸಂಪರ್ಕಿಸುವಂತೆ ಕೋರಿದ್ದಾರೆ ಎಂದು ಮೂಲಗಳು ಹೇಳಿವೆ.**

## ಲಾಲ್‌ಬಾಗ್‌ಗೆ ಮತ್ತೊಂದು ಎಂಟ್ರಿ ಗೇಟ್ ನಿರ್ಮಾಣಕ್ಕೆ ವಾಯುವಿಹಾರಿಗಳ ವಿರೋಧ




• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿಯ ಸಸ್ಯಕಾಶಿ ಎಂದೇ ಖ್ಯಾತಿ ಪಡೆದಿರುವ ಲಾಲ್‌ಬಾಗ್ ಮತ್ತೊಮ್ಮೆ ಚರ್ಚೆಯ ಕೇಂದ್ರಬಿಂದುವಾಗಿದೆ. ಈಗಾಗಲೇ ನಾಲ್ಕು ಪ್ರವೇಶ ದ್ವಾರಗಳ ಮೂಲಕ ಸಾರ್ವಜನಿಕರಿಗೆ ಪ್ರವೇಶ ಕಲ್ಪಿಸಿರುವ ತೋಟಗಾರಿಕಾ ಇಲಾಖೆ, ಇದೀಗ ಕ್ಯಾಂಟೀನ್ ಸಮೀಪ ಮತ್ತೊಂದು ಹೊಸ ಗೇಟ್ ನಿರ್ಮಿಸುವ ಚಿಂತನೆ ನಡೆಸಿದೆ. ಈ ನಿರ್ಧಾರಕ್ಕೆ ವಾಯುವಿಹಾರಿಗಳು, ಪರಿಸರ ಪ್ರೇಮಿಗಳಿಂದ ತೀವ್ರ ವಿರೋಧ ವ್ಯಕ್ತವಾಗಿದೆ. ಲಾಲ್ ಬಾಗ್ ಪ್ರವೇಶಕ್ಕೆ ಈಗ ನಾಲ್ಕು ಪ್ರಮುಖ ಗೇಟ್‌ಗಳಿದ್ದು, ಬೆಳಿಗ್ಗೆ–ಸಂಜೆ ಸಾವಿರಾರು ಮಂದಿ ವಾಯುವಿಹಾರಿಗಳು, ಪ್ರವಾಸಿಗರು ಮತ್ತು ಪ್ರಕೃತಿ ಪ್ರಿಯರು ಇದೇ ದ್ವಾರಗಳ ಮೂಲಕ ಓಡಾಡುತ್ತಾರೆ.

ಉದ್ಯಾನವನದ ಆವರಣದಲ್ಲಿ ತೋಟಗಾರಿಕಾ ಇಲಾಖೆಯ ಹಲವು ಕಚೇರಿಗಳೂ ಕಾರ್ಯ ನಿರ್ವಹಿಸುತ್ತಿವೆ. ಆಡಳಿತಾತಕ ದೃಷ್ಟಿಯಿಂದ ಅಧಿಕಾರಿಗಳು, ಕಚೇರಿ ವ್ಯವಹಾರಗಳಿಗೆ ಅನುಕೂಲವಾಗುವಂತೆ ಹೊಸ ಗೇಟ್ ಅಗತ್ಯವಿದೆ ಎಂದು ಇಲಾಖೆ ಮೂಲಗಳು ತಿಳಿಸಿವೆ. ಕಚೇರಿಗಳಿಗೆ ನೇರ ಪ್ರವೇಶ, ವಾಹನಗಳ ಸುಗಮ ಸಂಚಾರ, ಆಡಳಿತ ಕಾರ್ಯಗಳಿಗೆ ನೆರವಾಗಲಿದೆ. ಈ ಹಿನ್ನೆಲೆ ಹೊಸ ಗೇಟ್ ನಿರ್ಮಾಣಕ್ಕೆ ಸಿದ್ಧತೆ ಎಂದು ಎಂಬುದು ತೋಟಗಾರಿಕೆ ಇಲಾಖೆಯ ಅಧಿಕಾರಿಗಳ ಅಭಿಪ್ರಾಯಪಟ್ಟಿದ್ದಾರೆ. ಇದಕ್ಕೆ ಅಸಮಾಧಾನ ವ್ಯಕ್ತಪಡಿಸಿರುವ ಆದರೆ ವಾಯುವಿಹಾರಿಗಳು ಹಾಗೂ ಪರಿಸರ ಪ್ರೇಮಿಗಳು, ಈಗಿರುವ ಗೇಟ್‌ಗಳೇ ಸಾಕು. ಹೊಸ ದ್ವಾರ ನಿರ್ಮಾಣದಿಂದ ಸಾರ್ವಜನಿಕರಲ್ಲಿ ಗೊಂದಲ ಉಂಟಾಗುವ ಸಾಧ್ಯತೆ ಇದೆ. ಉದ್ಯಾನವನದ ಪರಿಸರ ಸಮತೋಲನಕ್ಕೆ ಧಕ್ಕೆಯಾಗಬಹುದು ಎಂದು ಹೇಳುತ್ತಿದ್ದಾರೆ. ಲಾಲ್ ಬಾಗ್ ಕೇವಲ ಉದ್ಯಾನವಲ್ಲ, ನಗರದ ಉಸಿರುಗಾವಲು. ಹೀಗಾಗಿ ಯಾವುದೇ ಹೊಸ ನಿರ್ಮಾಣ ಪರಿಸರದ ಮೇಲೆ ಪರಿಣಾಮ ಬೀರುವ ಸಾಧ್ಯತೆಯನ್ನು ನಿರ್ಲಕ್ಷಿಸಬಾರದು ಎಂದು ಪರಿಸರ ಸಂಘಟನೆಗಳು ಎಚ್ಚರಿಕೆ ನೀಡಿವೆ.ಆದರೆ ತೋಟಗಾರಿಕಾ ಇಲಾಖೆ ಪರಿಸರ ಪ್ರೇಮಿಗಳು ಹಾಗೂ ವಾಯುವಿಹಾರಿಗಳ ಅಭಿಪ್ರಾಯವನ್ನು ಪರಿಗಣಿಸುತ್ತದೆಯೇ ಎಂಬುದನ್ನು ಕಾದುನೋಡಬೇಕಿದೆ.

## ರಾಜ್ಯವನ್ನು ಮಾದಕ ವ್ಯಸನ ಮುಕ್ತಗೊಳಿಸುವ ಸಂಕಲ್ಪ : ಗೃಹ ಸಚಿವ ಪರಮೇಶ್ವರ್



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಇರಾನ್–ಇಸ್ರೇಲ್ ಸಂಘರ್ಷದಿಂದ ದುಬೈನಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ 150ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸಿಲುಕಿದ್ದು, ಅವರನ್ನು ಸುರಕ್ಷಿತವಾಗಿ ಕರೆತರಲು ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ತಿಳಿಸಿದ್ದಾರೆ. ಪೊಲೀಸ್ ಇಲಾಖೆಯಿಂದ ಆಯೋಜಿಲಾಗಿದ ವಾಕಥಾನ್‌ನಲ್ಲಿ ಭಾಗವಹಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದುಬೈನಲ್ಲಿ ಸಿಲುಕಿರುವ ಕನ್ನಡಿಗರ ಬಗ್ಗೆ ಪೂರ್ಣಪ್ರಮಾಣದ ಮಾಹಿತಿಗಳು ನಮಗಿನ್ನೂ ಬರಬೇಕಿದೆ. ಈವರೆಗಿನ ಮಾಹಿತಿಯ ಪ್ರಕಾರ ಚಿಕ್ಕಬಳ್ಳಾಪುರ ಜಿಲ್ಲೆಯಿಂದ ಪ್ರವಾಸಕ್ಕೆ ತೆರಳಿದ್ದ, 150 ವಿದ್ಯಾರ್ಥಿಗಳು ದುಬೈನಲ್ಲಿ ಸಿಲುಕಿದ್ದಾರೆ. ಅವರನ್ನು ಸುರಕ್ಷಿತವಾಗಿ ಕರೆ ತರುವ ಪ್ರಯತ್ನಗಳನ್ನು ನಮ್ಮ ಸರ್ಕಾರ ನಡೆಸಿದೆ ಎಂದರು.ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರದೊಂದಿಗೂ ಸಂಪರ್ಕ ಸಾಧಿಸಲಾಗಿದೆ. ಪೊಲೀಸ್ ಇಲಾಖೆಯಿಂದ ಅಗತ್ಯವಿರುವ ಎಲ್ಲಾ ಸಹಕಾರ ನೀಡುತ್ತಿರುವುದಾಗಿ ತಿಳಿಸಿದರು.

**ಜನ ಜಾಗೃತಿಗಾಗಿ ವಾಕಥಾನ್:** ಮಾದಕ ವಸ್ತುಗಳ ವಿರುದ್ಧ ಜಾಗೃತಿ, ಸೈಬರ್ ಕ್ರೈಂ ಕುರಿತ ತಿಳಿವಳಿಕೆಗಳಿಗೆ ಜನರಲ್ಲಿ ಅರಿವು ಮೂಡಿಸಲು ಕಳೆದ ಮೂರು ವರ್ಷಗಳಿಂದಲೂ ರಾಜ್ಯದಲ್ಲಿ ವಾಕಥಾನ್ ನಡೆಸಲಾಗುತ್ತಿದೆ ಎಂದು ಹೇಳಿದರು.ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸರ್ಕಾರ ರಾಜ್ಯವನ್ನು ಮಾದಕ ವಸ್ತುಗಳ ವ್ಯಸನ ಮುಕ್ತಗೊಳಿಸುವ ಸಂಕಲ್ಪ ಹೊಂದಿದೆ. ಇದಕ್ಕಾಗಿ ರಾಜ್ಯದಲ್ಲಿ ಬೆಂಗಳೂರು ಸೇರಿದಂತೆ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲೂ ವಾಕಥಾನ್ ಅನ್ನು ಆಯೋಜಿಸುತ್ತಿದೆ ಎಂದರು.

ಮಾದಕ ವಸ್ತುಗಳ ಹಾವಳಿಯನ್ನು ಸವಾಲಾಗಿ ಸ್ವೀಕರಿಸಿದ್ದೇವೆ. ಅದನ್ನು ಮಟ್ಟ ಹಾಕಲು ನಿರಂತರ ಪ್ರಯತ್ನ ನಡೆಯುತ್ತಿದೆ. ಒಂದಲ್ಲಾ ಒಂದು ದಿನ ನಾವು ಗುರಿ ತಲುಪುತ್ತೇವೆ ಎಂದರು.ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ, ಸ್ಟೇಟ್ ಬ್ಯಾಂಕ್ ಆಫ್‌ಇಂಡಿಯಾ ಸಹಯೋಗದಲ್ಲಿ ನಮ್ಮ ಪೊಲೀಸ್ ನಮ್ಮ ಹೆಮ್ಮೆ ಘೋಷವಾಕ್ಯದಡಿ ಆಯೋಜಿಸಿದ್ದ 3ನೇ ವರ್ಷದ ಪೊಲೀಸ್ ಓಟ ಸ್ಪರ್ಧೆಗೆ ಡಾ. ಜಿ. ಪರಮೇಶ್ವರ ಅವರು ವಿಧಾನಸೌಧದ ಬೃಹತ್ ಮೆಟ್ಟಿಲುಗಳ ಮುಂಭಾಗದಲ್ಲಿ ಚಾಲನೆ ನೀಡಿದರು. ಡ್ರಗ್ಸ್ ಮುಕ್ತ ಕರ್ನಾಟಕ, ಸೈಬರ್ ಅಪರಾಧ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಆಯೋಜಿಸಿದ್ದ 10 ಕಿ.ಮೀ., 5 ಕಿ.ಮೀ. ಓಟದ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದವರಿಗೆ ಬಹುಮಾನ ವಿತರಿಸಿ ಶುಭ ಹಾರೈಸಿದರು.

## ರಾಜ್ಯದ 7 ಜಿಲ್ಲೆಗಳ ನಗರಾಭಿವೃದ್ಧಿ ಪ್ರಾಧಿಕಾರಗಳು, ನಿಗಮ ಮಂಡಳಿಗಳ ಅಧ್ಯಕ್ಷರ ಅವಧಿ ವಿಸ್ತರಣೆ

• ಉದಯವಾಹಿನಿ, ಬೆಂಗಳೂರು

ರಾಜ್ಯದ 7 ಜಿಲ್ಲೆಗಳ ನಗರಾಭಿವೃದ್ಧಿ ಪ್ರಾಧಿಕಾರಗಳು, ನಿಗಮ, ಮಂಡಳಿಗಳ ಅಧ್ಯಕ್ಷರ ಅಧಿಕಾರ ಅವಧಿಯನ್ನು ವಿಸ್ತರಣೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ. ಈ ಮೂಲಕ 10 ಮಂದಿಯ ಅಧ್ಯಕ್ಷರ ಅಧಿಕಾರ ಅವಧಿ ವಿಸ್ತರಣೆಯಾಗಿದೆ. ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಗಳಿಗೆ ಪತ್ರ ಬರೆದು ಈ ಬಗ್ಗೆ ಮನವಿ ಮಾಡಿದ್ದರು. 2024ರ ಫೆಬ್ರವರಿ 28ರಂದು ವಿವಿಧ ನಿಗಮ ಮಂಡಳಿ ಹಾಗೂ ಪ್ರಾಧಿಕಾರಗಳಿಗೆ ನೇಮಕಗೊಂಡಿದ್ದ ಅಧ್ಯಕ್ಷರ ಎರಡು ವರ್ಷಗಳ ಅವಧಿ ಮುಕ್ತಾಯಗೊಳ್ಳುತ್ತಿದೆ. ಇತ್ತೀಚೆಗೆ ಕೆಲವರಿಗೆ ರಾಜ್ಯ ಸಚಿವ ಸ್ಥಾನಮಾನ ನೀಡಿ ಅವರ ಅವಧಿಯನ್ನು ಮುಂದುವರಿಸಲಾಗಿತ್ತು. ಆದರೆ, ಆ ಪಟ್ಟಿಯಲ್ಲಿ ಕಾಡಾ ಅಧ್ಯಕ್ಷರು ಮತ್ತು ಕೆಲವು ಯೋಜನಾ ಪ್ರಾಧಿಕಾರಗಳ ಅಧ್ಯಕ್ಷರನ್ನು ಕೈಬಿಡಲಾಗಿತ್ತು. ಪ್ರಸ್ತುತ ಈ ಸ್ಥಾನಗಳಿಗೆ ಬೇರೆ ಹೊಸ ಅಧ್ಯಕ್ಷರನ್ನು ನೇಮಕ ಮಾಡಿಲ್ಲದ ಕಾರಣ, ಆಡಳಿತಾತ್ಮಕ ಹಿತದೃಷ್ಟಿಯಿಂದ ಅಥವಾ ಮುಂದಿನ ಆದೇಶದವರೆಗೆ ಈ ಕೆಳಕಂಡ 10 ಮಂದಿ ಅಧ್ಯಕ್ಷರನ್ನು ಮುಂದುವರಿಸುವಂತೆ ಡಿಸಿಎಂ ಶಿಫಾರಸು ಮಾಡಿದ್ದರು.



**ಸರ್ಕಾರದ ಆದೇಶ ಏನಿದೆ?:** ಸರ್ಕಾರದ ವಿವಿಧ ಇಲಾಖೆಗಳ ಅಧೀನದಲ್ಲಿ ಬರುವ ನಿಗಮ, ಮಂಡಳಿ, ಪ್ರಾಧಿಕಾರಗಳ ನಾಮನಿರ್ದೇಶನಗೊಂಡ ಅಧ್ಯಕ್ಷರುಗಳ ಮುಕ್ತಾಯಗೊಂಡ/ಮುಕ್ತಾಯಗೊಳ್ಳಲಿರುವ ಅವಧಿಯನ್ನು ಮುಂದಿನ ಆದೇಶದವರೆಗೆ ಮುಂದುವರೆಸಿ ಆದೇಶಿಸಿದೆ. ಮೇಲ್ಕಂಡ ಆದೇಶದಂತೆ ಆಡಳಿತ ಇಲಾಖೆಯ ಸಂಬಂಧಿಸಿದೆ, ಅಧ್ಯಕ್ಷರು ಕಾರ್ಯನಿರ್ವಹಿಸಲು ಸೂಕ್ತ ಅಧಿಸೂಚನೆ ಹೊರಡಿಸುವಂತೆ ಆಡಳಿತ ಇಲಾಖೆಗಳಿಗೆ ಸೂಚಿಸಲಾಗಿದೆ.

## ವಿಮಾನದೊಳಗೆ ಪ್ರಯಾಣಿಕರ ಪತಿಭಟನೆ

• ಉದಯವಾಹಿನಿ, ದೇವನಹಳ್ಳಿ

ನೇಪಾಳದ ರಾಜಧಾನಿ ಕಾಠ್ಮಂಡುವಿಗೆ ತೆರಳಬೇಕಿದ್ದ ಏರ್ ಇಂಡಿಯಾ ಎಕ್ಸ್ ಪ್ರೆಸ್ ವಿಮಾನವು ಎರಡನೇ ದಿನವೂ ಪ್ರಯಾಣಿಕರನ್ನು ಕರೆದುಕೊಂಡು ಹೋಗಿ ಮತ್ತೆ ವಾಪಸ್ ಬಂದಿದ್ದು, ಇಲ್ಲಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕರು ಪ್ರತಿಭಟನೆ ನಡೆಸಿದರು. ಬೆಳಗ್ಗೆ 10:30ಕ್ಕೆ ಅವರ ವಿಮಾನ ಬೆಂಗಳೂರಿನಿಂದ ಕಾಠ್ಮಂಡುವಿಗೆ ಹೊರಟಿತ್ತು. ಆದರೆ ಸ್ಪಷ್ಟ ಕಾರಣ ನೀಡದೆ ವಿಮಾನ ಕಾಠ್ಮಂಡುವಿನಲ್ಲಿ ಇಳಿಯದೇ ವಾಪಸ್ ಬೆಂಗಳೂರಿಗೇ ಬಂದಿತು. ಮತ್ತೆ ಅದೇ ವಿಮಾನ ಬೆಳಗ್ಗೆ ಕಾಠ್ಮಂಡುವಿಗೆ ಹೊರಟಿತು. ಆದರೆ ಈ ಬಾರಿಯೂ ಅದು ಕಾಠ್ಮಂಡುವಿನಲ್ಲಿ ಇಳಿಯಲು ಸಾಧ್ಯವಾಗದೆ, ಲಕ್ನೋ ನಗರಕ್ಕೆ ತಿರುಗಿಸಲಾಯಿತು. ಲಕ್ನೋ ವಿಮಾನ ನಿಲ್ದಾಣದಲ್ಲಿ



ಉದಯವಾಹಿನಿ ಚಿತ್ರ

ಇಳಿದ ಬಳಿಕ ಪ್ರಯಾಣಿಕರನ್ನು ಹಲವು ಗಂಟೆಗಳ ಕಾಲ ವಿಮಾನದ ಒಳಗೇ ಕೂರಿಸಲಾಗಿತ್ತು. ಈ ವೇಳೆ ಯಾವುದೇ ಮಾಹಿತಿ ನೀಡಿಲ್ಲ ಎಂದು ಪ್ರಯಾಣಿಕರು ಆರೋಪಿಸಿದ್ದಾರೆ.

**ಪ್ರಯಾಣಿಕರ ಸಂಕಷ್ಟ:** ಸುಸ್ತು, ಬೇಸರದಿಂದ ಕಂಗೆಟ್ಟ ಪ್ರಯಾಣಿಕರು ವಿಮಾನದ ಒಳಗೇ ಪ್ರತಿಭಟನೆ ನಡೆಸಿದರು. ನಂತರ, ಅವರನ್ನೆಲ್ಲಾ ಮತ್ತೆ ಬೆಂಗಳೂರಿಗೆ ಕರೆತರಲಾಯಿತು. ಬೆಂಗಳೂರಿಗೆ ಬಂದ ನಂತರವೂ ಕೆಲವು ಪ್ರಯಾಣಿಕರು ವಿಮಾನ ನಿಲ್ದಾಣದ ಇಮಿಗ್ರೇಶನ್ ಪ್ರದೇಶದ ಬಳಿ ಧರಣಿ ನಡೆಸಿದರು.

ನಮ್ಮ ಸಮಯ ವ್ಯರ್ಥವಾಯಿತು. ನಾವು ತಿಂಗಳುಗಟ್ಟಲೆ ಯೋಜನೆ ಮಾಡಿ ನೇಪಾಳ ಪ್ರವಾಸಕ್ಕೆ ಹೊರಟಿದ್ದೆವು. ಈಗ ಪ್ರವಾಸವೇ ಹಾಳಾಯಿತು. ದುಡ್ಡು ವ್ಯರ್ಥವಾಯಿತು ಎಂದು ಪ್ರಯಾಣಿಕೊಬ್ಬರು ಕಣ್ಣೀರಿಟ್ಟಿದ್ದಾರೆ. ಒಟ್ಟು 30 ಗಂಟೆಗಳಿಗೂ ಹೆಚ್ಚು ಕಾಲ ನಾವು ವಿಮಾನದ ಒಳಗೇ ಸಿಲುಕಿಕೊಂಡಿದ್ದೆವು. ವಿಮಾನ ಕಂಪನಿಯವರು ಸರಿಯಾಗಿ ಮಾತನಾಡಿಸಲಿಲ್ಲ ಎಂದು ಮತ್ತೊಬ್ಬ ಪ್ರಯಾಣಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಕೆಐಎಡಿಬಿ ಅಧಿಕಾರಿಗಳಿಗೆ ರೈತರ ತರಾಟೆ

### 260 ದಿನ ಪೂರೈಸಿದ ಅಹೋರಾತ್ರಿ ಧರಣಿ ಕೆಐಎಡಿಬಿ ಅಧಿಕಾರಿಗಳೊಂದಿಗೆ ಮಾತಿನ ಚಕಮಕಿ

• ಉದಯವಾಹಿನಿ, ಆನೇಕಲ್

ಸರ್ಜಾಪುರ ಹೋಬಳಿಯಲ್ಲಿ ಕೆಐಎಡಿಬಿ ಭೂಸ್ವಾಧೀನ ಪ್ರಕ್ರಿಯೆಯ ಸಂಬಂಧ ತಿಳುವಳಿಕೆ ನೋಟಿಸ್ ನೀಡಲು ಶುಕ್ರವಾರ ಸಂಜೆ ಬಂದ ಅಧಿಕಾರಿಗಳನ್ನು ರೈತರು ತರಾಟೆಗೆ ತೆಗೆದುಕೊಂಡಿದ್ದಾರೆ. ನೋಟಿಸ್ ಸ್ವೀಕರಿಸಲು ರೈತರು ನಿರಾಕರಿಸಿದರು. ಕೆಐಎಡಿಬಿ ಭೂಸ್ವಾಧಿನ ವಿರೋಧಿಸಿ ರೈತರು ನಡೆಸುತ್ತಿರುವ ಅಹೋರಾತ್ರಿ ಧರಣಿ 260 ದಿನ ಪೂರೈಸಿದ್ದು, ಪ್ರತಿಭಟನಾ ಸ್ಥಳಕ್ಕೆ ಬಂದ ಅಧಿಕಾರಿಗಳಿಗೆ ಮಹಿಳೆಯರು ಸೇರಿದಂತೆ ನೂರಾರು ಮಂದಿ ರೈತರು ಚಳಿ ಬಿಡಿಸಿದರು. ಸರ್ಜಾಪುರ ಹೋಬಳಿಯಲ್ಲಿ ಸ್ವಿಫ್ಟ್ ಸಿಟಿ ನಿರ್ಮಾಣಕ್ಕಾಗಿ 2,451 ಎಕರೆ ಭೂಮಿಯನ್ನು ಕೆಐಎಡಿಬಿ ಭೂಸ್ವಾಧೀನ ಪಡಿಸಿಕೊಳ್ಳಲು ಸಿದ್ಧತೆ ನಡೆಸಿದೆ. ಆದರೆ ಭೂಸ್ವಾಧೀನಕ್ಕೆ ರೈತರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಭೂಸ್ವಾಧೀನ ಖಂಡಿಸಿ 260ಕ್ಕೂ ಹೆಚ್ಚು ದಿನಗಳಿಂದ ಅಹೋರಾತ್ರಿ ಪ್ರತಿಭಟನೆ ನಡೆಸುತ್ತಿದ್ದಾರೆ.

ರೈತರೊಂದಿಗೆ ಚರ್ಚಿಸಲು ವಿಶೇಷ ಭೂಸ್ವಾಧೀನಾಧಿಕಾರಿ ಮಮತ ಅವರು ಆಗಮಿಸಿದ್ದರು.



ಉದಯವಾಹಿನಿ ಚಿತ್ರ

**ನಮ್ಮ ಪ್ರಾಣವಿರುವವರೆಗೂ ನಮ್ಮ ಭೂಮಿ ನಮ್ಮ ಹಕ್ಕು**

ಆದರೆ ರೈತರು ಯಾವುದೇ ಕಾರಣಕ್ಕೂ ಒಂದಿಂಚು ಭೂಮಿ ನೀಡುವುದಿಲ್ಲ. ನಮ್ಮ ಪ್ರಾಣವಿರುವವರೆಗೂ ನಮ್ಮ ಭೂಮಿ ನಮ್ಮ ಹಕ್ಕು ಎಂದು ಘೋಷಣೆ ಮೊಳಗಿಸಿದರು. ತಿಳುವಳಿಕೆ ನೋಟಿಸ್ ನೀಡಲು ಬಂದ ಅಧಿಕಾರಿಗಳೊಂದಿಗೆ ಮಾತಿನ ಚಕಮಕಿ ನಡೆಯಿತು. ಕೆಐಎಡಿಬಿ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿದ ರೈತರು, ಅನ್ನ ನೀಡುವ ರೈತನ ಮೇಲೆ ದೌರ್ಜನ್ಯ ಸಲ್ಲದು ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸರ್ಜಾಪುರದ ಭೂಮಿ ಕೃಷಿ ಭೂಮಿಯಾಗಿದೆ. ಈ ಮಣ್ಣನ್ನು ನಂಬಿ ನಾವು ಜೀವನ ನಡೆಸುತ್ತಿದ್ದೇವೆ. ಆದರೆ ಕೆಐಎಡಿಬಿಯು ರೈತರ ಭೂಮಿಯನ್ನು ಸ್ವಾಧೀನ ಪಡಿಸಿಕೊಂಡರೆ ರೈತರು ಬದುಕಿಗಾಗಿ ಎಲ್ಲಿಗೆ ಹೋಗಬೇಕು. ರೈತರ ಕೃಷಿ ಭೂಮಿಯನ್ನು ಬಂಜರು ಭೂಮಿ ಎಂದು ವರದಿ ನೀಡಿದ್ದಾರೆ. ತೋಟಗಾರಿಕೆ, ಕೃಷಿ, ತಾಲ್ಲೂಕು ಆಡಳಿತ, ಕೆಐಎಡಿಬಿ ಅಧಿಕಾರಿಗಲು ಜಂಟಿಯಾಗಿ ಸರ್ಜಾಪುರ ಹೋಬಳಿಗೆ ಭೇಟಿ ನೀಡಿ ಇಲ್ಲಿನ ಭೂಮಿಯನ್ನು ಪರಿಶೀಲನೆ ನಡೆಸಬೇಕು. ಸುಳ್ಳು ವರದಿಗೆ ರೈತರು ಜಗ್ಗುವ ಪ್ರಶ್ನೆಯೇ ಇಲ್ಲ ಎಂದು ರೈತ ಜಯಪ್ರಕಾಶ್ ಆಕ್ರೋಶ ವ್ಯಕ್ತಪಡಿಸಿದರು.


**ಬಿಗಿ ಪೊಲೀಸ್ ಬಂದೋಬಸ್ತ್:** ಕೆಐಎಡಿಬಿ ಅಧಿಕಾರಿಗಳು ಗ್ರಾಮಗಳಿಗೆ ಭೇಟಿ ನೀಡಿದ್ದ ಹಿನ್ನೆಲೆಯಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು. ಎಎಸ್ಪಿಗಳಾದ ವೆಂಕಟೇಶ್ ಪ್ರಸನ್ನ, ನಾಗರಾಜು, ಡಿವೈಎಸ್ಪಿ ಮಲ್ಲೇಶ್, ಸರ್ಕಲ್ ಇನ್‌ಸ್ಪೆಕ್ಟರ್‌ಗಳಾದ ಮಂಜುನಾಥ್, ನವೀನ್, ಸಂಜೀವ್ ಮಹಾಜನ್ ನೇತೃತ್ವದಲ್ಲಿ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿತ್ತು.

> ತಾಲ್ಲೂಕು ಕಚೇರಿ ಕೆಐಎಡಿಬಿ ಕಚೇರಿ ಮುತ್ತಿಗೆ ಸೇರಿದಂತೆ ಹಲವು ಹೋರಾಟ ನಡೆಸಿದ್ದೇವೆ. 260 ದಿನಗಳಿಂದ ರೈತರು ಹೋರಾಟ ನಡೆಸುತ್ತಿದ್ದರೂ ಯಾರಿಂದಲೂ ಸ್ಪಂದನೆ ದೊರೆತಿಲ್ಲ. ರೈತರ ಹೋರಾಟಕ್ಕೆ ಬೆಲೆಯೇ ಇಲ್ವೆ.
>
> –ದೇವರಾಜು, ರೈತ

**ಪಹಣಿಯಲ್ಲಿ ಕೆಐಎಡಿಬಿ ಹೆಸರು ತೆಗೆಯಲು ಆಗ್ರಹ**

**ಸರ್ಜಾಪುರ ಹೋಬಳಿಯ ಭೂಸ್ವಾಧೀನ ಪ್ರಕ್ರಿಯೆಯ ಸಂಬಂಧ ಕೆಲ ರೈತರ ಭೂಮಿಗಳ ಪಹಣಿಯಲ್ಲಿ ಕೆಐಎಡಿಬಿ ಪ್ರಾಥಮಿಕ ಅಧಿಸೂಚನೆಯ ಭೂಸ್ವಾಧೀನ ಎಂದು ಬರುತ್ತಿದೆ. ಪಹಣಿಯಲ್ಲಿ ನಮ್ಮ ಹೆಸರುಗಳ ಬರುವವರೆಗೂ ಕೆಐಎಡಿಬಿ ಅಧಿಕಾರಿಗಳೊಂದಿಗೆ ಚರ್ಚೆಗೆ ನಾವು ಸಿದ್ದರಿಲ್ಲ. ಹಾಗಾಗಿ ಕೆಐಎಡಿಬಿಯು ಪಹಣಿಯಲ್ಲಿ ಹೆಸರು ಬದಲಾವಣೆ ಮಾಡಲು ಸೂಚನೆ ನೀಡಬೇಕು' ಎಂದು ರೈತ ಮಹಿಳೆ ಉಮಾ ಪರಶುರಾಮ್ ಅಧಿಕಾರಿಗಳನ್ನು ಒತ್ತಾಯಿಸಿದರು.**

## ಆರೋಗ್ಯವಂತರೆ ನಿಜವಾದ ಶ್ರೀಮಂತರು


ಉದಯವಾಹಿನಿ ಚಿತ್ರ


• ಉದಯವಾಹಿನಿ, ಕನಕಪುರ

ದೇಶವು ಸುಭಿಕ್ಷವಾಗಿರಬೇಕಾದರೆ ದೇಶದ ಜನರ ಆರೋಗ್ಯ ಮುಖ್ಯವಾಗುತ್ತದೆ. 60-70 ವರ್ಷಗಳ ತನಕ ಯಾರು ಆರೋಗ್ಯವಾಗಿರುತ್ತಾರೋ ಅವರೇ ನಿಜವಾದ ಶ್ರೀಮಂತರು ಎಂದು ಸಂಸದ ಡಾ.ಸಿ.ಎನ್.ಮಂಜುನಾಥ್ ತಿಳಿಸಿದರು. ಕಸಬಾ ಹೋಬಳಿ ಬಿಎಸ್ ದೊಡ್ಡಿ ಗ್ರಾಮದಲ್ಲಿ ಜನೋತ್ಸವ 2026 ಬಿಎಸ್ ದೊಡ್ಡಿ. ನ್ಯೂ ಡೀಮ್ ಫೌಂಡೇಶನ್, ಕಿದ್ವಾಯ್ ಸಂಸ್ಥೆ, ಶಂಕರ ಕಣ್ಣಿನ ಆಸ್ಪತ್ರೆ ಆಶ್ರಯದಲ್ಲಿ ನಡೆದ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು. ವರ್ಷದಲ್ಲಿ ಒಂದು ಲಕ್ಷ ಹೆಣ್ಣು ಮಕ್ಕಳಿಗೆ ಗರ್ಭಕೋಶದ ಕ್ಯಾನ್ಸರ್ ಬರುತ್ತಿದ್ದು ವರ್ಷದಲ್ಲಿ 50 ಸಾವಿರ ಮಂದಿ ಸಾವಿಗೆ ತುತ್ತಾಗುತ್ತಿದ್ದಾರೆ. ಕ್ಯಾನ್ಸರ್ ಅನ್ನು ಸಂಪೂರ್ಣವಾಗಿ ತಡೆಗಟ್ಟಲು 13 ರಿಂದ 16 ವರ್ಷದ ವಯೋಮಾನದವರಿಗೆ ಸರ್ಕಾರದಿಂದ ಉಚಿತವಾಗಿ ಗರ್ಭಕೋಶದ ಲಸಿಕೆ ನೀಡುವ ರಾಷ್ಟ್ರೀಯ ಕಾರ್ಯಕ್ರಮವನ್ನು ಜಾರಿಗೆ ತರಲಾಗಿದೆ. ರಾಜಸ್ಥಾನದ ಕಾಶ್ಮೀರದಲ್ಲಿ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡುತ್ತಿದ್ದಾರೆ ಎಂದು ತಿಳಿಸಿದರು. ಅದೇ ರೀತಿ ಇಂದು ಬಿಎಸ್ ದೊಡ್ಡಿಯಲ್ಲಿ ಕಾಕತಾಳೀಯವಾಗಿ ಆರೋಗ್ಯ ಶಿಬಿರ ನಡೆಸಿ ಕ್ಯಾನ್ಸರ್ ತಪಾಸಣೆ ಮಾಡಲಾಗುತ್ತಿದೆ. ಪ್ರತಿಯೊಬ್ಬರು ಕಡ್ಡಾಯವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ಮೇಲಿನಿಂದ ನೋಡಲು ಎಷ್ಟೇ ಚೆನ್ನಾಗಿದ್ದರೂ ಒಳಗೆ ಆರೋಗ್ಯ ಸಮಸ್ಯೆಗಳಿರುತ್ತವೆ. ಹಾಗಾಗಿ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಮಾಡಬಾರದು ಎಂದು ಎಚ್ಚರಿಕೆ ನೀಡಿದರು. ಇಂದು ನಮ್ಮ ಆಹಾರ ಪದ್ಧತಿ ಹಾಗೂ ಜೀವನ ಶೈಲಿಯಿಂದ ಆರೋಗ್ಯ ಸಮಸ್ಯೆಗಳು ಹೆಚ್ಚಾಗುತ್ತಿವೆ. ಮನಸ್ಸು ಸರಿ ಇಲ್ಲ, ಆರೋಗ್ಯವು ಸರಿ ಇಲ್ಲ, ಹಿಂದಿನ ಕಾಲದಲ್ಲಿ ಯಾರಾದರೂ ಕುಡಿದು ಬಂದರೆ ಗ್ರಾಮದಿಂದ ಹೊರಗೆ ಮಲಗಿಸುತ್ತಿದ್ದರು. ಇಂದು ಕುಡಿಯದಿದ್ದರೆ ಅವರನ್ನು ನಿಕೃಷ್ಟವಾಗಿ ನೋಡಲಾಗುತ್ತದೆ. ಯಾವುದಕ್ಕೂ ಪ್ರಯೋಜನ ಇಲ್ಲದವರು ಎನ್ನುತ್ತಾರೆ ಎಂದು ತಿಳಿಸಿದರು.

### ಸಮಾಜದಲ್ಲಿ ಸಮಾನತೆ ಸಾರಿದವರು ಜಗದ್ಗುರು ರೇಣುಕಾಚಾರ್ಯರು: ಸ್ವಾಮೀಜಿ

## ಇಂತಹ ಪವಿತ್ರ ಸ್ಥಳದಲ್ಲಿರುವ ನಾವುಗಳೇ ಧನ್ಯರು

• ಉದಯವಾಹಿನಿ, ರಾಮನಗರ


ಉದಯವಾಹಿನಿ ಚಿತ್ರ

ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಮಾನವ ಧರ್ಮಕ್ಕೆ ಜಯವಾಗಲಿ ಎಂಬ ವಾಣಿಯೊಂದಿಗೆ ಸಮಾಜದಲ್ಲಿ ಸಮಾನತೆಯನ್ನು ಸಾರಿದವರು ಜಗದ್ಗುರು ರೇಣುಕಾಚಾರ್ಯರು ಎಂದು ಅವ್ವೇರಹಳ್ಳಿ ರೇವಣಸಿದ್ದೇಶ್ವರಸ್ವಾಮಿ ದಾಸೋಹ ಮಠದ ರಾಜಶೇಖರ ಶಿವಾಚಾರ್ಯ ಸ್ವಾಮೀಜಿ ಅವರು ಹೇಳಿದರು. ಅವರು ಭಾನುವಾರ ನಗರದ ಕಂದಾಯ ಭವನದಲ್ಲಿರುವ ಕನ್ನಡ, ಸಂಸ್ಕೃತಿ ಇಲಾಖೆಯ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ, ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿ ಮಾತನಾಡಿದರು.

ಯುಗ ಯುಗದಲ್ಲಿ ಅವತರಿಸಿದ ಮಹಾಮಹಿಮರು ಜಗದ್ಗುರು ರೇಣುಕಾಚಾರ್ಯರು ಲಿಂಗದಲ್ಲಿ ಉದ್ಭವವಾಗಿ ಅವ್ವೇರಹಳ್ಳಿ ಶ್ರೀ ರೇವಣಸಿದ್ದೇಶ್ವರ ಕ್ಷೇತ್ರಕ್ಕೆ ಬಂದು 700 ವರ್ಷಗಳ ಕಾಲ ತಪಸ್ಸು ಮಾಡಿ ಕ್ಷೇತ್ರವನ್ನು ಪುನೀತಗೊಳಿಸಿ ಜಗತ್ತಿಗೆ ಶಾಂತಿ ಸಂದೇಶ ನೀಡಿದವರು ರೇಣುಕಾಚಾರ್ಯರು ಇಂತಹ ಪವಿತ್ರ ಸ್ಥಳದಲ್ಲಿರುವ ನಾವುಗಳೇ ಧನ್ಯರು ಎಂದರು.

ವಿದ್ವಾನ್ ಚಂದ್ರಶೇಖರಯ್ಯ ಉಪನ್ಯಾಸ ನೀಡಿ, ಸಮಾಜದ ಅಸಮಾನತೆಯನ್ನು ತೊಡೆದು ಹಾಕಲು ಶಕ್ತಿ ವಿಶಿಷ್ಟಾದ್ವೈತ ಸಿದ್ಧಾಂತವನ್ನು ಬೋಧಿಸಿ ವೀರಶೈವ ಧರ್ಮವನ್ನು ನೆಲೆಗೊಳಿಸಿದ ಮಹಾತ್ಮರು ರೇಣುಕಾಚಾರ್ಯರು, ಆಂಧ್ರಪ್ರದೇಶದ ಕೊನಲಪಾಕಂ ಎಂಬಲ್ಲಿ ಸಾವಿರಾರು ವರ್ಷಗಳ ಹಿಂದೆ ಜನಿಸಿದರು. ರೇಣುಕಾಚಾರ್ಯರ ಧರ್ಮದ ದಶ ಸೂತ್ರಗಳು ಸರ್ವರಿಗೂ ಸರ್ವ ಕಾಲಕ್ಕೂ ಧರ್ಮದ ಹಾದಿಯಲ್ಲಿ ನಡೆಯುವ ದಿಕ್ಕನ್ನು ತೋರಿಸುತ್ತವೆ. ಅವರ ಆದರ್ಶಗಳನ್ನು ಮೈಗೂಡಿಸಿಕೊಂಡು ಇಂದು ನಾವು ಮುನ್ನಡೆಯಬೇಕಿದೆ ಸದಾ ಅವರ ಆಶೀರ್ವಾದ ಶ್ರೀರಕ್ಷೆ ಸರ್ವ ಸಮಾಜಕ್ಕೂ ಸಿಗುವಂತಾಗಲಿ ಎಂದರು. ಕನ್ನಡ, ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೆ.ಸತೀಶ್ ಮಾತನಾಡಿ, ಸಮಾಜದ ಕಟ್ಟಕಡೆಯ ವ್ಯಕ್ತಿಯು ಯಾರಾದರೂ ಇದ್ದರೆ ಅವರ ವಿದ್ಯಾಭ್ಯಾಸಕ್ಕೆ ಸಹಾಯ ಮಾಡಿ ಅವರನ್ನು ಮೇಲಕ್ಕೆ ಎತ್ತುವ ಕೆಲಸ ಮಾಡಿದರೆ ಒಳಿತು ಎಂದರು. ಅಖಿಲ ಭಾರತ ವೀರಶೈವ ಮಹಾಸಭಾ ಜಿಲ್ಲಾಧ್ಯಕ್ಷ ಎಚ್.ಎಸ್. ಯೋಗಾನಂದ ಮಾತನಾಡಿದರು ಇದೇ ಸಂದರ್ಭದಲ್ಲಿ ಸಮಾಜದ ಪ್ರಮುಖರನ್ನು ಜಿಲ್ಲಾ ಕನ್ನಡ, ಸಂಸ್ಕೃತಿ ಇಲಾಖೆಯ ವತಿಯಿಂದ ಗೌರವಿಸಿ ಸನ್ಮಾನಿಸಲಾಯಿತು.

**700 ವರ್ಷಗಳ ಕಾಲ ತಪಸ್ಸು**

**ಯುಗಮಾನೋತ್ಸವ ಆಚರಣೆ ನಡೆಸುತ್ತಿರುವುದು ಕೂಡ ಹೆಮ್ಮೆಯಾಗಿದೆ**

ರೇಣುಕಾಚಾರ್ಯರ ಜಯಂತಿಯಂದು ರೇವಣಸಿದ್ದೇಶ್ವರ ಕ್ಷೇತ್ರದಲ್ಲಿ ಸಂಜೆ ಉತ್ಸವ ನಡೆಸಲಾಗುತ್ತದೆ ಸಾವಿರಾರು ಭಕ್ತರು ಭಾಗವಹಿಸುತ್ತಿದ್ದಾರೆ. ರಂಬಾಪುರಿ ಬಾಳೇಹೊನ್ನೂರಿನ ಪೀಠ ಸೇರಿದಂತೆ ಎಲ್ಲಾ ಕಡೆಗಳಲ್ಲಿ ಭಾನುವಾರ ಯುಗಮಾನೋತ್ಸವ ಆಚರಣೆ ಮಾಡಲಾಗುತ್ತಿದೆ. ಪ್ರತಿ ಜಿಲ್ಲೆಯಲ್ಲೂ ಯುಗಮಾನೋತ್ಸವ ಮಾಡಬೇಕೆಂದು, ಸರ್ಕಾರದಿಂದ ಯುಗಮಾನೋತ್ಸವ ಆಚರಣೆ ನಡೆಸುತ್ತಿರುವುದು ಕೂಡ ಹೆಮ್ಮೆಯಾಗಿದೆ ಎಂದು ಪಂಚಾಮಠಗಳ ಪೀಠಾಧ್ಯಕ್ಷರು ಹೇಳಿದ್ದಾರೆ

## ಮಿನಿ ನ್ಯೂಸ್

### ಕಿಡ್ನಿ ವೈಫಲ್ಯದಿಂದ ಬಳಲುತ್ತಿದ್ದ ಯುವಕನಿಗೆ ಸಚ್ಚಿದಾನಂದ ಟ್ರಸ್ಟ್ ಅಧ್ಯಕ್ಷ ಬಸವರಾಜು ನೆರವು


ಉದಯವಾಹಿನಿ ಚಿತ್ರ

• ಉದಯವಾಹಿನಿ, ಗುಂಡ್ಲುಪೇಟೆ

ತಾಲ್ಲೂಕಿನ ಚಿಕ್ಕಾಟಿ ಗ್ರಾಮದಲ್ಲಿ ಕಿಡ್ನಿ ವೈಫಲ್ಯದಿಂದ ಬಳಲುತ್ತಿದ್ದ ಯುವಕನಿಗೆ ಬೆಂಗಳೂರಿನ ಸಚ್ಚಿದಾನಂದ ಟ್ರಸ್ಟ್ ಅಧ್ಯಕ್ಷ ಬಸವರಾಜು 50 ಸಾವಿರ ರೂ. ಆರ್ಥಿಕ ನೆರವು ನೀಡಿದರು, ಈ ಮೂಲಕ ಸಚ್ಚಿದಾನಂದ ಸೇವಾ ಟ್ರಸ್ಟ್ ಧಾರ್ಮಿಕ ಕಾರ್ಯಕ್ರಮಗಳಲ್ಲದೆ ನೊಂದವರಿಗೂ ಹೆಗಲಾಗುತ್ತದೆ ಎಂಬುದನ್ನ ಸಾರಿದ್ದಾರೆ. ಚಿಕ್ಕಾಟಿ ಗ್ರಾಮದ ಯುವಕ ಮಹದೇವಪ್ರಸಾದ್ ಕಿಡ್ನಿ ವೈಫಲ್ಯದಿಂದ ಬಳಲುತ್ತಿದ್ದ ಮಾಹಿತಿ ತಿಳಿದ ಸಚ್ಚಿದಾನಂದ ಟ್ರಸ್ಟ್ ಪದಾಧಿಕಾರಿಗಳು ನಿವಾಸಕ್ಕೆ ಭೇಟಿ ನೀಡಿ ಯೋಗ ಕ್ಷೇಮ ವಿಚಾರಿಸಿದರು. ಕಿಡ್ನಿ ಕಸಿ ಚಿಕಿತ್ಸೆಗೆ ಸಹೃದಯಿಗಳ ನೆರವಿಗೆ ವಿನಂತಿಸಿದ್ದ ವಿಷಯ ತಿಳಿದು ಭೇಟಿ ನೀಡಿ ಕೈಲಾದ ಧನಸಹಾಯ ಮಾಡಿದ್ದೇನೆ. ನೀವು ಚಿಕಿತ್ಸೆ ಪಡೆದು ಎಲ್ಲರಂತೆ ಜೀವನ ನಡೆಸುವಂತಾಗಲಿ ಎಂದು ಟ್ರಸ್ಟ್ ಅಧ್ಯಕ್ಷ ಬಸವರಾಜು ಹಾರೈಸಿದರು. ಮಹದೇವಪ್ರಸಾದ್ ತಂದೆ, ತಾಯಿ ಬಸವರಾಜುರವರಿಗೆ ಕೃತಜ್ಞತೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಚಿಕ್ಕಾಟಿ ಶಿವಣ್ಣನಾಯಕ, ಪ್ರವೀಣ್ ಆಲತ್ತೂರು, ಬಸವರಾಜು, ಸಿದ್ದಪ್ಪ, ಸಚ್ಚಿದಾನಂದ ಟ್ರಸ್ಟಿನ ಕುಮಾರ್, ಆಲತ್ತೂರು ಪ್ರವೀಣ್ ಸೇರಿದಂತೆ ಇತರರು ಹಾಜರಿದ್ದರು.

## ಕಾನೂನು ಪದವೀಧರರು ಶಿಷ್ಯವೇತನ ಸದ್ಬಳಕೆ ಮಾಡಿಕೊಳ್ಳಿ

• ಉದಯವಾಹಿನಿ, ಮೈಸೂರು


ಉದಯವಾಹಿನಿ ಚಿತ್ರ

ಕಾನೂನು ಪದವೀಧರರು ಶಿಷ್ಯವೇತನವನ್ನು ತಮ್ಮ ಶಿಕ್ಷಣಕ್ಕೆ ಸದ್ವಿನಿಯೋಗ ಮಾಡಿಕೊಳ್ಳುವಂತೆ ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ಎನ್. ಭಾಸ್ಕರ್ ಸಲಹೆ ನೀಡಿದರು. ನಾಲ್ಕು ವರ್ಷಗಳಿಂದ ನೆನಗುದಿಗೆ ಬಿದ್ದಿದ್ದ ಕಾನೂನು ಪದವೀಧರರ ಶಿಷ್ಯವೇತನವನ್ನು ಬಿಡುಗಡೆ ಮಾಡಿಸಿದ್ದರಿಂದ ಮೈಸೂರು ವಕೀಲ ಪದಾಧಿಕಾರಿಗಳಿಂದ ಜಲದರ್ಶಿನಿ ಅತಿಥಿಗೃಹದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿ, ಸಮಾಜ ಕಲ್ಯಾಣಾ ಇಲಾಖೆ ಸಚಿವ ಡಾ.ಎಚ್.ಸಿ. ಮಹದೇವಪ್ಪ ನಮ್ಮ ಮನವಿಗೆ ಒಗೊಟ್ಟು ಸಾಮಾಜಿಕ ಕಳಕಳಿಯಿಂದ 1 ಕೋಟಿ 30 ಲಕ್ಷ ರೂ.ಗಳನ್ನು ಒಂದೇ ಕಂತಿನಲ್ಲಿ ಬಿಡುಗಡೆ ಮಾಡಿ ಪದವೀಧರರ ಶಿಕ್ಷಣಕ್ಕೆ ನೆರವಾಗಿದ್ದಾರೆ ಎಂದು ಹೇಳಿದರು. ಪರಿಶಿಷ್ಟ ಜಾತಿಯ ಪರಿಶಿಷ್ಟ ಪಂಡಗಳ ಕಾನೂನು ಪದವೀಧರರಿಗೆ ನ್ಯಾಯವಾದಿ ವೃತ್ತಿಯ ಪ್ರಾಯೋಜಿತ ಕಾರ್ಯಕ್ರಮದಡಿಯಲ್ಲಿ ಪ್ರಸ್ತುತ ಜಾರಿಯಲ್ಲಿರುವ ತರಬೇತಿ ಅವಧಿಯನ್ನು ನಾಲ್ಕು ವರ್ಷಗಳಿಂದ 2 ವರ್ಷಗಳಿಗೆ ಕಡಿತಗೊಳಿಸಿ ಮಾಸಿಕ ತರಬೇತಿ ಭತ್ಯೆಯನ್ನು ಮಾಹೆಯಾನ ರೂ. 5 ಸಾವಿರದಿಂದ 10 ಸಾವಿರ ರೂ.ಗಳ ಹೆಚ್ಚಿಸಿ ಸರ್ಕಾರ ಆದೇಶ ಹೊರಡಿಸಲಾಗಿದೆ ಎಂದರು.

**ಸಿಎ ನಿವೇಶನಕ್ಕೆ ಮನವಿ:** ಎಸ್ಸಿ, ಎಸ್ಟಿ ವಕೀಲರ ಸಂಘಕ್ಕೆ ಮೈಸೂರು ನಗರದಲ್ಲಿ ನಿವೇಶನ ಕೊಡಿಸಬೇಕೆಂದು ವಕೀಲರು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಮತ್ತು ಎನ್.ಭಾಸ್ಕರ್ ಅವರಿಗೆ ಮನವಿ ಮಾಡಿದರು. ಈ ಸಂಬಂಧ ಮುಡಾದಲ್ಲಿ ಸಿಎ ನಿವೇಶನಕ್ಕೆ ಅರ್ಜಿ ಸಲ್ಲಿಸಿದ್ದೇವೆ. ಅದನ್ನಾದರೂ ಕೊಡಿಸುವಂತೆ ಕೋರಿದರು.

ಈ ಬಗ್ಗೆ ಪ್ರತಿಕ್ರಿಯಿಸಿದ ಎಂ. ಲಕ್ಷ್ಮಣ್, ಎನ್. ಭಾಸ್ಕರ್ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ. ಮಹದೇವಪ್ಪ ಅವರ ಗಮನಕ್ಕೆ ತಂದು ನಿವೇಶನ ಕೊಡಿಸುವ ಭರವಸೆ ನೀಡಿದರು.

## ನೀರಾವರಿಗೆ ಬಜೆಟ್‌ನಲ್ಲಿ ಅನುದಾನ ಘೋಷಿಸಿ

• ಉದಯವಾಹಿನಿ, ರಾಮನಗರ


ಉದಯವಾಹಿನಿ ಚಿತ್ರ

ಬರಪೀಡಿತ ಹನೂರು ತಾಲ್ಲೂಕಿನಲ್ಲಿ ಕುಡಿಯುವ ನೀರು ಮತ್ತು ಕೃಷಿ ಚಟುವಟಿಕೆಗಳಿಗೆ ನೀರಿನ ಸಮಸ್ಯೆ ಎದುರಾಗಿದೆ. ತಾಲ್ಲೂಕಿನಲ್ಲಿ ನೀರಾವರಿ ಯೋಜನೆ ಅನುಷ್ಠಾನಕ್ಕೆ ಸರ್ಕಾರ ಬಜೆಟ್‌ನಲ್ಲಿ ಅನುದಾನ ಘೋಷಿಸಬೇಕು ಎಂದು ರೈತ ಸಂಘದ ಚಾಮರಾಜನಗರದ ಜಿಲ್ಲಾ ಉಪಾಧ್ಯಕ್ಷ ಗೌಡೇಗೌಡ ಆಗ್ರಹಿಸಿದರು.

ನೀರಾವರಿ ಯೋಜನೆಗೆ ಅನುದಾನ ಬಿಡುಗಡೆ ಮಾಡುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ, ಹನೂರಿನಿಂದ ಬೆಂಗಳೂರಿಗೆ ಕೈಗೊಂಡಿರುವ ರೈತ ಸಂಘದ ಕಾರ್ಯಕರ್ತರ ಪಾದಯಾತ್ರೆ ರಾಮನಗರ ತಲುಪಿದಾಗ, ಸ್ಥಳೀಯ ರೈತ ಮುಖಂಡರಿಂದ ಸ್ವಾಗತ ಸ್ವೀಕರಿಸಿ ಅವರು ಮಾತನಾಡಿದರು.

ತಾಲ್ಲೂಕಿನಲ್ಲಿ ಸಾವಿರ ಅಡಿ ಕೊಳವೆ ಬಾವಿ ಕೊರೆಸಿದರೂ ನೀರು ಸಿಗದ ಸ್ಥಿತಿ ಇದೆ. ಇದನ್ನು ಮನಗಂಡು 2021-22ನೇ ಸಾಲಿನಲ್ಲಿ ಅಂದಿನ ಬಿಜೆಪಿ ಸರ್ಕಾರ ತಾಲ್ಲೂಕಿನ ಮುಡುಕುತೊರೆ ಜಲಾಶಯಕ್ಕೆ ಕಾವೇರಿ ನದಿಯಿಂದ ಏತ ನೀರಾವರಿ ಮೂಲಕ 1.31 ಟಿಎಂಸಿ ನೀರು ಹರಿಸಲು 180 ಕೋಟಿ ಮೊತ್ತದ ಯೋಜನೆಗೆ ಡಿಪಿಆರ್ ರೂಪಿಸಿತ್ತು ಎಂದು ಹೇಳಿದರು. ಡಿಪಿಆರ್ ರೂಪಿಸಲು ಆಸಕ್ತಿ ತೋರಿದ ಸರ್ಕಾರ ಯೋಜನೆಗೆ ಹಣ ಬಿಡುಗಡೆ ಮಾಡಲಿಲ್ಲ. ಈಗ ಮತ್ತೆ ತಯಾರಿಸಿರುವ ಡಿಪಿಆರ್‌ನಲ್ಲಿ ಯೋಜನೆಯ ಮೊತ್ತ 490 ಕೋಟಿಗೆ ಏರಿಕೆಯಾಗಿದೆ. ಈಗಲಾದರೂ ಯೋಜನೆಗೆ ಹಣ ಬಿಡುಗಡೆ ಮಾಡಿ, ತಾಲ್ಲೂಕಿಗೆ ನೀರಾವರಿ ಸೌಲಭ್ಯ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

## ರೈತರ ರಾಗಿ ಹಣಕ್ಕೆ ಸಿಬ್ಬಂದಿಗಳು ಕನ್ನ

• ಉದಯವಾಹಿನಿ, ಮಧುಗಿರಿ


ಉದಯವಾಹಿನಿ ಚಿತ್ರ

ದೇವರು ಕೊಟ್ಟರೂ ಪೂಜಾರಿ ಕೊಡನು ಎಂಬ ಗಾದೆಯಂತೆ ರೈತರ ರಾಗಿಗೆ ಸರ್ಕಾರ ಸಂಪೂರ್ಣ ಬೆಂಬಲ ಬೆಲೆ ನೀಡಿದರೂ ಈ ರಾಗಿ ತೂಗುವ ಸಿಬ್ಬಂದಿಗಳು ರೈತರ ರಾಗಿಗೆ ಇಲಿಯಂತೆ ಕನ್ನ ಹಾಕುತ್ತಿದ್ದು 1 ಮೂಟೆಗೆ 50.2 ಕೆಜಿ ಇರಬೇಕಿದ್ದು ರೈತರಿಂದ 1 ಮೂಟೆ 52. 2 ಕೆಜಿಯಂತೆ ತೂಗುತ್ತಿದ್ದು ಈ ಕೇಂದ್ರದಲ್ಲಿ ಒಟ್ಟಾರೆ 18500 ಕ್ವಿಂಟಾಲ್ ರಾಗಿಗೆ ರೈತರು ನೋಂದಣಿ ಮಾಡಿಕೊಂಡಿದೆ. ಸರ್ಕಾರದ ಬೆಂಬಲ ಬೆಲೆ 48.8 ರೂನಂತೆ ಒಟ್ಟಾರೆ 46 ರಿಂದ 47 ಸಾವಿರ ಕೆಜಿ ರಾಗಿಯನ್ನು ಹೆಚ್ಚುವರಿಯಾಗಿ ಪಡೆಯುತ್ತಿರುವ ಅಧಿಕಾರಿಗಳು ಸುಮಾರು 18 ರಿಂದ 20 ಲಕ್ಷ ಹಣ ಲೂಟಿ ಮಾಡುತ್ತಿದ್ದಾರೆ ಎಂಬ ಗಂಭೀರ ಆರೋಪ ಕೇಳಿ ಬಂದಿದ್ದು ರಾಗಿ ಖರೀದಿ ಕೇಂದ್ರಕ್ಕೆ ಸಿಸಿ ಟಿವಿ ಕ್ಯಾಮೆರಾ ಅಳವಡಿಸುವಂತೆ ಹಾಗೂ ಪ್ರಶ್ನಿಸಲು ಹೋದವರ ಮೇಲೆ ರೌಡಿಗಳಂತೆ ಹಲ್ಲೆ ಮಾಡಲು ಮುಂದಾದವರ ಮೇಲೆ ರೈತರು ಆಗ್ರಹಿಸಿದ್ದು ತಪ್ಪಿತಸ್ಥ ಅಧಿಕಾರಿಗಳ ಮೇಲೆ ಕಾನೂನು ಕ್ರಮಕ್ಕೆ ಮುಂದಾಗುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿಕೊಂಡಿದ್ದಾರೆ.

ಪಟ್ಟಣದ ಎಪಿಎಂಸಿ ಯಾರ್ಡ್ ನಲ್ಲಿ ತಾಲ್ಲೂಕು ರಾಗಿ ಖರೀದಿ ಕೇಂದ್ರ ಆರಂಭವಾಗಿದ್ದು ರೈತರಿಂದ ಕಳೆದ 3 ದಿನಗಳಿಂದ ರಾಗಿ ಖರೀದಿ ಮಾಡಲಾಗುತ್ತಿದೆ. ಸರ್ಕಾರವು ರೈತರ ಕೆಜಿ ರಾಗಿಗೆ 48. 80 ರೂ.ಗಳನ್ನು ನೀಡುತ್ತಿದ್ದು ಖಾತೆಗೆ ನೇರವಾಗಿ ಹಣ ಬೀಳುತ್ತಿದೆ. ಆದರೆ ಇದರಲ್ಲೂ ಹಣ ಲೂಟಿ ಹೊಡೆಯುವ ಮನಸ್ಸುಳ್ಳ ಅಧಿಕಾರಿಗಳು 1 ಚೀಲ ರಾಗಿಯು 50.2 ಕೆಜಿ ಮಾತ್ರ ತೂಗಬೇಕು. ಆದರೆ ಇಲ್ಲಿ ಕೇಂದ್ರ ಆರಂಭವಾದ ದಿನಗಳಿಂದ ಯಾರೂ ಹೇಳುವವರಿಲ್ಲದೆ ಅಧಿಕಾರಿಗಳು, ಸಿಬ್ಬಂದಿಗಳು ದೌರ್ಜನ್ಯದಿಂದ ರೈತರಿಂದ ಒಂದು ಚೀಲ ರಾಗಿಯನ್ನು52. 2 ಕೆಜಿಯಷ್ಟು ಖರೀದಿಸುತ್ತಿದ್ದಾರೆ. ಇದರಿಂದ ಕನಿಷ್ಠ ಒಂದು ಚೀಲ ರಾಗಿಗೆ 2 ಕೆಜಿ ಹೆಚ್ಚುವರಿ ರಾಗಿಯನ್ನು ಪಡೆಯಲಾಗುತ್ತಿದೆ.

ರೈತರ ಪರವಾಗಿ ವೀರೇಂದ್ರ ಮಾತನಾಡಿ, ಇಲ್ಲಿ ರೈತರಿಂದ ರಾಗಿ ಲೂಟಿ ನಡೆಯುತ್ತಿದೆ ಒಂದು ಚೀಲಕ್ಕೆ ಹೆಚ್ಚುವರಿಯಾಗಿ 2 ಕೆಜಿ ರಾಗಿ ಖರೀದಿಸುತ್ತಿರುವ ಅಧಿಕಾರಿಗಳು ರೈತರ ಹೊಟ್ಟೆ ಮೇಲೆ ಹೊಡೆಯುತ್ತಿದ್ದಾರೆ. ಇದೇ ರೀತಿ ಈ ಕೇಂದ್ರದಿಂದ 18,500 ಕ್ವಿಂಟಾಲ್ ರಾಗಿ ಖರೀದಿಗೆ ನೋಂದಣಿಯಾಗಿದ್ದು ಅದರಂತೆ 18,500 ಕ್ವಿಂಟಾಲ್ ರಾಗಿಗೆ ಬೆಂಬಲ ಬೆಲೆ 48.8 ರೂನಂತೆ ಒಟ್ಟಾರೆ 46 ರಿಂದ 47 ಸಾವಿರ ಕೆ.ಜಿ. ಆಗಲಿದ್ದು ಇದರ ಮೌಲ್ಯವೇ 18 ರಿಂದ 20 ಲಕ್ಷ ಆಗಲಿದೆ. ಈ ಹಣವನ್ನು ಅಧಿಕಾರಿಗಳು ಲೂಟಿ ಮಾಡುತ್ತಿದ್ದರೂ ಯಾರೂ ಕೇಳುವವರಿಲ್ಲ. ಇಂತಹ ಕೀಟದಂತ ಅಧಿಕಾರಿಗಳ ಮೇಲೆ ಮೇಲಾಧಿಕಾರಿಗಳು ಸೂಕ್ತ ಕ್ರಮ ಕೈಗೊಂಡು ರೈತರಿಗೆ ನ್ಯಾಯ ಒದಗಿಸಿಕೊಡುವಂತೆ ಮನವಿ ಮಾಡಿದ್ದಾರೆ.

## ಪ್ಯಾಸೆಂಜರ್ ರೈಲು ವಿಳಂಬ ಖಂಡಿಸಿ ಪ್ರಯಾಣಿಕರ ಪ್ರತಿಭಟನೆ

• ಉದಯವಾಹಿನಿ, ಬಿಡದಿ

ಮೈಸೂರು-ಬೆಂಗಳೂರು ನಡುವಣ ಸಂಚರಿಸುವ ಅಶೋಕಪುರಂ ಮೆಮು ಪ್ಯಾಸೆಂಜರ್ ರೈಲು ಒಂದೂವರೆ ತಾಸು ವಿಳಂಬವಾಗಿದ್ದನ್ನು ಖಂಡಿಸಿ ಪ್ರಯಾಣಿಕರು ಭಾನುವಾರ ಸಂಜೆ ರೈಲು ನಿಲ್ದಾಣದಲ್ಲಿ ಪ್ರತಿಭಟನೆ ನಡೆಸಿದರು. ಮೈಸೂರಿಗೆ ಹೊರಟಿದ್ದ ರೈಲು ನಿಲ್ದಾಣದಿಂದ ಒಂದೂವರೆ ತಾಸಾದರೂ ಕದಲಿಲ್ಲ. ಕಾದು ಹೈರಾಣಾದ ಪ್ರಯಾಣಿಕರು ನಂತರ ಹೊರಬಂದು ನಿಲ್ದಾಣದ ಅಧಿಕಾರಿಗಳನ್ನು ವಿಚಾರಿಸಲು ಮುಂದಾದರು. ಆದರೆ, ಸ್ಟೇಷನ್ ಮಾಸ್ಟರ್ ಕೊಠಡಿ ಬಾಗಿಲು ಹಾಕಿತ್ತು. ಉಳಿದ ಸಿಬ್ಬಂದಿ ಸಹ ಸರಿಯಾಗಿ ಪ್ರತಿಕ್ರಿಯಿಸಲಿಲ್ಲ. ಇದರಿಂದ ರೊಚ್ಚಿಗೆದ್ದ ಪ್ರಯಾಣಿಕರು ರೈಲು ಹಳಿ ಮೇಲೆ ನಿಂತು ಪ್ರತಿಭಟನೆ ಆರಂಭಿಸಿದರು. ರೈಲ್ವೆ ಇಲಾಖೆ ಹಾಗೂ ಅಧಿಕಾರಿಗಳ ವಿರುದ್ಧ ಘೋಷಣೆಗಳನ್ನು ಕೂಗಿದರು.

## ರಾಜ್ಯಕ್ಕೆ 3.15 ಲಕ್ಷ ಕೋಟಿ ರೂ. ಸಾಲದ ಹೊರೆ

**ಅಲುಗಾಡುತ್ತಿರುವ ಸಿಎಂ ಸೀಟು**


ಮುಖ್ಯಮಂತ್ರಿ ಸೀಟು ಸೇರಿದಂತೆ ಮಂತ್ರಿಗಳ ಸೀಟು ಅಲುಗಾಡುತ್ತಿದೆ. ಮುಂದಿನ ದಿನಗಳಲ್ಲಿ ಏನು ಬೇಕಾದರೂ ಆಗಬಹುದು ಎಂದು ಆರ್.ಅಶೋಕ್ ಭವಿಷ್ಯ ನುಡಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಕುರ್ಚಿ ಬಿಟ್ಟು ಕೊಡುವ ರಾಮಯ್ಯ ಅಲ್ಲ. ಎರಡೂವರೆ ವರ್ಷ ಒಪ್ಪಂದ ಆಗಿದೆ ಎಂದು ಡಿಸಿಎಂ ಡಿಕೆಶಿ ಹೇಳುತ್ತಾರೆ. ಆದರೆ, ಈ ಬಗ್ಗೆ ಸಿದ್ದರಾಮಯ್ಯ ಮಾತ್ರ ಬಾಯಿ ಬಿಡಲ್ಲ. ಒಟ್ಟಾರೆ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್‌ಗೆ ಪಂಗನಾಮ ಹಾಕುವುದು ಗ್ಯಾರಂಟಿ ಎಂದು ವ್ಯಂಗ್ಯವಾಡಿದರು ಎಂದು ಲೇವಡಿ ಮಾಡಿದರು.

• ಉದಯವಾಹಿನಿ, ಮಂಡ್ಯ

ಗ್ಯಾರಂಟಿಯಿಂದ ದಿವಾಳಿಯಾಗಿರುವ ಕರ್ನಾಟಕ ಸರಕಾರವು ಕರುನಾಡನ್ನು ಪಾಪರ್ ಮಾಡಲು ತೀರ್ಮಾನಿಸಿದೆ ಎಂದು ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಟೀಕಿಸಿದರು. ಕೇವಲ ಎರಡು ಮುಕ್ಕಾಲು ವರ್ಷಗಳ ಅವಧಿಯಲ್ಲಿಯೇ 3.15 ಲಕ್ಷ ಕೋಟಿ ರೂ. ಸಾಲ ಮಾಡಿದ್ದಾರೆ. ಇದೇ ರೀತಿ ಐದು ವರ್ಷಗಳಲ್ಲಿ 6 ಲಕ್ಷ ಕೋಟಿ ರೂ. ಸಾಲ ಮಾಡುವ ಜತೆಗೆ ಪ್ರತಿ ಸಾರ್ವಜನಿಕರ ತಲೆ ಮೇಲೆ ತಲಾ 1 ಲಕ್ಷ ರೂ. ಸಾಲದ ಹೊರೆ ಹೊರೆಸುತ್ತಾರೆ ಎಂದು ಸುದ್ದಿಗೋಷ್ಠಿಯಲ್ಲಿ ಆತಂಕ ವ್ಯಕ್ತಪಡಿಸಿದರು. ಸರಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ಔಷಧಗಳೇ ಸಿಗುತ್ತಿಲ್ಲ. ಈ ಬಗ್ಗೆ ಸರಕಾರ ಟೆಂಡರ್ ಕರೆಯಲಾಗುತ್ತದೆ ಎನ್ನುತ್ತಿದೆಯೇ ಹೊರತು ಯಾವುದೂ ಕಾರ್ಯಗತ ಆಗಿಲ್ಲ. ಸುಮಾರು 150 ಔಷಧಗಳು ಮಾತ್ರ ಸಿಗುತ್ತಿವೆ. ಯಾವ ಆಸ್ಪತ್ರೆಗೆ ಹೋದರೂ ಅಲ್ಲಿನ ವೈದ್ಯರು ಖಾಸಗಿ ಮೆಡಿಕಲ್‌ಗಳಿಗೆ ಚೀಟಿ ಬರೆದು ಕೊಡುತ್ತಿದ್ದಾರೆಂದು ಆರೋಪಿಸಿದರು.


**ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿನ ಬಿಜೆಪಿ-ಜೆಡಿಎಸ್ ಮೈತ್ರಿ ಕುರಿತು ಹೈಕಮಾಂಡ್ ತೀರ್ಮಾನಿಸಲಿದೆ. ರಾಜ್ಯದ ಪರಿಸ್ಥಿತಿ ಬಗ್ಗೆ ಈಗಾಗಲೇ ಉಸ್ತುವಾರಿಗೆ ನಮ್ಮ ಅಭಿಪ್ರಾಯಗಳನ್ನು ಹೇಳಿದ್ದೇವೆ. ಒಂದೊಂದು ಪ್ರಾಂತ್ಯದಲ್ಲಿ ಒಂದೊಂದು ವಿಚಾರವಿದೆ. ದೇವೇಗೌಡರೇ ಮೊದಲು ಮೈತ್ರಿ ಬೇಡ ಎಂದಿದ್ದರು. ಈಗ ಮೈತ್ರಿ ಬಗ್ಗೆ ಮಾತನಾಡಿದ್ದಾರೆ. ಹೊಂದಾಣಿಕೆ ಬಗ್ಗೆ ಆಮೇಲೆ ನೋಡೋಣ.**

**-ಆರ್.ಅಶೋಕ್, ಪ್ರತಿಪಕ್ಷದ ನಾಯಕ, ವಿಧಾನಸಭೆ**



## ರೇಷ್ಮೆ ಕಾರ್ಖಾನೆ ಮುಚ್ಚಲ್ಲ, ಅಪಾಯವಿದ್ದರೆ ಕ್ರೀಡಾಂಗಣ ಸ್ಥಳಾಂತರಕ್ಕೆ ಪರಿಶೀಲನೆ: ಸಂಸದ ಸುನೀಲ್ ಬೋಸ್

• ಉದಯವಾಹಿನಿ, ತಿ.ನರಸೀಪುರ


ಉದಯವಾಹಿನಿ ಚಿತ್ರ

ಸಾವಿರಾರು ಕಾರ್ಮಿಕರಿಗೆ ಉದ್ಯೋಗ ನೀಡುತ್ತಿರುವ ಪಟ್ಟಣದ ಕೆ ಎಸ್ ಐ ಸಿ ರೇಷ್ಮೆ ನೂಲು ತೆಗೆಯುವ ಕಾರ್ಖಾನೆಯನ್ನು ಮುಚ್ಚುವ ಪ್ರಶ್ನೆಯೇ ಇಲ್ಲ. ಕಾರ್ಖಾನೆಯ ಅಸ್ತಿತ್ವಕ್ಕೆ ಅಪಾಯವಿದ್ದರೆ ಸಂಬಂಧಿಸಿದ ಅವರೊಂದಿಗೆ ಸಾಧಕ ಬಾಧಕಗಳನ್ನು ಚರ್ಚಿಸಿ, ಕ್ರೀಡಾಂಗಣ ನಿರ್ಮಾಣ ಸ್ಥಳವನ್ನು ಬದಲಾವಣೆ ಮಾಡುವ ಬಗ್ಗೆ ಪರಿಶೀಲಿಸಲಾಗುವುದು ಎಂದು ಸಂಸದ ಸುನೀಲ್ ಬೋಸ್ ಹೇಳಿದರು. ತಾಲ್ಲೂಕಿನ ಕೆಂಪನಪುರ ಗ್ರಾಮದಲ್ಲಿ ವಿಶೇಷ ಘಟಕ ಅನುದಾನ ಹಾಗೂ ಮಳೆಹಾನಿ ಅನುದಾನದಲ್ಲಿ ಪ.ಜಾತಿ ಕಾಲೋನಿ ಮತ್ತು ಸಾಮಾನ್ಯ ವರ್ಗದ ಬಡಾವಣೆಯಲ್ಲಿ ಸಿಮೆಂಟ್ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ಸಲ್ಲಿಸಿದ ಬಳಿಕ ಮಾತನಾಡಿದ ಅವರು ರೇಷ್ಮೆ ಕಾರ್ಖಾನೆ ಆವರಣದಲ್ಲಿ ಕ್ರೀಡಾಂಗಣ ನಿರ್ಮಾಣ ಮಾಡಬೇಕೋ ಅಥವಾ ಬೇಡವೋ ಎಂಬುದರ ಬಗ್ಗೆ ನಿರ್ಧಾರ ಕೈಗೊಳ್ಳಲು ಅತಿ ಶೀಘ್ರದಲ್ಲೇ ಸ್ಥಳ ಪರಿಶೀಲಿಸಿ, ರೇಷ್ಮೆ ಉದ್ಯಮಗಳ ನಿಗಮದ ಅಧಿಕಾರಿಗಳ ಜೊತೆ ಚರ್ಚಿಸಲಾಗುವುದು ಎಂದರು.

ದೇಶ ವಿದೇಶಗಳಲ್ಲಿ ಹೆಸರುವಾಸಿಯಾಗಿರುವ ಮೈಸೂರು ರೇಷ್ಮೆ ಸೀರೆ ಉದ್ಯಮವನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಸ್ವತಂತ್ರ ಪೂರ್ವದಲ್ಲಿಯೇ ಹುಟ್ಟು ಹಾಕಿದ ಕೈಗಾರಿಕಾ ಸಂಸ್ಥೆಯನ್ನು ಮುಚ್ಚುವ ಕೆಲಸವನ್ನು ನಮ್ಮ ಸರ್ಕಾರ ಮಾಡುವುದಿಲ್ಲ. ವಿಪಕ್ಷ ಮುಖಂಡರು ಈ ವಿಚಾರವನ್ನು ಮುಂದಿಟ್ಟುಕೊಂಡು ಸಿಎಂ ಸಿದ್ದರಾಮಯ್ಯ, ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ ಅವರ ವಿರುದ್ಧ ವೃಥಾ ಆರೋಪವನ್ನು ಮಾಡುತ್ತಿದ್ದಾರೆ. ಅವರೆಷ್ಟು ಅಪಪ್ರಚಾರ ಮಾಡಿದಷ್ಟೂ ಜನರು ನಾಯಕರನ್ನಾಗಿ ಮಾಡುತ್ತಾರೆ ಎಂದರು.

ತಾಲ್ಲೂಕು ಕೇಂದ್ರದಲ್ಲಿ ಕ್ರೀಡಾಂಗಣ ನಿರ್ಮಾಣ ಮಾಡಬೇಕೆಂಬ ಬೇಡಿಕೆ ಜನರಿಂದ ಅದರಲ್ಲೂ ವಿದ್ಯಾರ್ಥಿಗಳಿಂದ ವ್ಯಾಪಕವಾಗಿತ್ತು. ಅದಕ್ಕಾಗಿ ವರ್ಷಗಳ ಹಿಂದೆಯೇ ಬಜೆಟ್‌ನಲ್ಲಿ ಅನುದಾನ ಮಂಜೂರು ಮಾಡಲಾಗಿತ್ತು. ರೇಷ್ಮೆ ಕಾರ್ಖಾನೆ ನಿವೇಶನವನ್ನು ಆಯ್ಕೆ ಮಾಡಿದ್ದಕ್ಕೆ ಮೊದಲು ಕಾರ್ಮಿಕರು ಮತ್ತು ಪರಿಸರ ಸಂಘಟನೆಗಳ ವಿರೋಧವಿತ್ತು. ಈಗ ಅದನ್ನು ಬಿಜೆಪಿ ರಾಜಕೀಯ ತಿರುವು ಕೊಟ್ಟು, ಸೂಕ್ಷ್ಮವಾದ ವಿಚಾರವನ್ನಾಗಿ ಮಾಡಿರುವುದು ವಿಷಾದಕರ ಸಂಗತಿಯಾಗಿದೆ ಎಂದರು. ಜಿ.ಪಂ ತಾಂತ್ರಿಕ ಉಪ ವಿಭಾಗದ 2024-25 ನೇ ಸಾಲಿನ 5054 ಮಳೆ ಹಾನಿ(ಸಾಮಾನ್ಯ) ಕೊಳತ್ತೂರು ಗ್ರಾಮದಲ್ಲಿ 25 ಲಕ್ಷ ವೆಚ್ಚದ ಸಿಮೆಂಟ್ ರಸ್ತೆ ಮತ್ತು ಚರಂಡಿ ನಿರ್ಮಾಣ ಸೇರಿದಂತೆ, ನರಗ್ಯಾತನಹಳ್ಳಿ ಗ್ರಾಮದಲ್ಲಿ 20 ಲಕ್ಷ, ಕೋಣಗಹಳ್ಳಿ 20 ಲಕ್ಷ, ಕಳೆದ 2023-24 ನೇ ಸಾಲಿನ ಸಿಎಂ ವಿಶೇಷ ಅನುದಾನ 1.20 ಕೋಟಿ, ಸಿಗೋಡಿಪುರ 20 ಲಕ್ಷ, ನಾಗಲಗೆರೆ ಗ್ರಾಮದಲ್ಲಿ ಸಿಎಂ ವಿಶೇಷ ಅನುದಾನ 60 ಲಕ್ಷ, ಚಿದರವಳ್ಳಿ ಗ್ರಾಮದಲ್ಲಿ ಎಸ್ಸಿಪಿ 20 ಲಕ್ಷ, ಮಳೆ ಹಾನಿ ಅನುದಾನ 30 ಲಕ್ಷ, ಬೊಮ್ಮನಹಳ್ಳಿ ಗ್ರಾಮದಲ್ಲಿ ಎಸ್‌ಸಿಪಿ ಅನುದಾನ 15 ಲಕ್ಷ, ಎಸ್ ದೊಡ್ಡಪುರ ಗ್ರಾಮದಲ್ಲಿ ಎಸ್ಪಿ ಅನುದಾನ 10 ಲಕ್ಷ, ಕೆಂಪನಪುರ ಗ್ರಾಮದಲ್ಲಿ ಎಸ್‌ಸಿಪಿ ಅನುದಾನ 10 ಲಕ್ಷ, ಮಳೆ ಹಾನಿ ಅನುದಾನ 20 ಲಕ್ಷ, ಬೋಳೇಗೌಡನಹುಂಡಿ ಮಳೆ ಹಾನಿ ಅನುದಾನ 25 ಲಕ್ಷ, ಸಿಎಂ ವಿಶೇಷ ಅನುದಾನ 80 ಲಕ್ಷ, ಉಕ್ಕಲಗೆರೆ ಗ್ರಾಮದಲ್ಲಿ ಎಸ್‌ಸಿಪಿ ಅನುದಾನ 15 ಲಕ್ಷ, ಮಳೆ ಹಾನಿ ಅನುದಾನ 20 ಲಕ್ಷ ಹಾಗೂ ಬೂದಹಳ್ಳಿ ಗ್ರಾಮದಲ್ಲಿ ಸಿಎಂ ವಿಶೇಷ ಅನುದಾನ 50 ಲಕ್ಷ ರೂಗಳ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸುನೀಲ್ ಬೋಸ್ ಭೂಮಿ ಪೂಜೆ ಸಲ್ಲಿಸಿ ಚಾಲನೆ ನೀಡಿದರು.

## ನಷ್ಟದಿಂದ ಲಾಭದತ್ತ ಬಮೂಲ್ ಹೆಜ್ಜೆ: ಡಿ.ಕೆ. ಸುರೇಶ್


ಉದಯವಾಹಿನಿ ಚಿತ್ರ

• ಉದಯವಾಹಿನಿ, ರಾಮನಗರ


ಬೆಂಗಳೂರು ಸಹಕಾರ ಹಾಲು ಒಕ್ಕೂಟಕ್ಕೆ ನಾನು ಅಧ್ಯಕ್ಷನಾಗಿ ಅಧಿಕಾರ ವಹಿಸಿಕೊಂಡಾಗ ಸುಮಾರು 45 ಕೋಟಿಯಷ್ಟು ನಷ್ಟದಲ್ಲಿತ್ತು. ಹಲವು ಸುಧಾರಣಾ ಕ್ರಮಗಳನ್ನು ಕೈಗೊಂಡ ಬಳಿಕ ಇದೀಗ ಮಾಸಿಕ 20 ಕೋಟಿ ಲಾಭದಲ್ಲಿದೆ ಎಂದು ಬಮೂಲ್ ಅಧ್ಯಕ್ಷ ಡಿ.ಕೆ. ಸುರೇಶ್ ಹೇಳಿದರು. ತಾಲ್ಲೂಕಿನ ಹಾಗಲಹಳ್ಳಿಯಲ್ಲಿ ನೂತನ ಡೇರಿ ಕಟ್ಟಡ ಉದ್ಘಾಟಿಸಿ ಮಾತನಾಡಿ, ಹಿಂದೆ ಬಮೂಲ್ ಪ್ರತಿ ತಿಂಗಳು 14.5 ಕೋಟಿ ನಷ್ಟ ಅನುಭವಿಸುತ್ತಿತ್ತು. ಅದನ್ನು ಹಂತ ಹಂತವಾಗಿ ಇಳಿಸಿ, ಇದೀಗ ಲಾಭದ ಹಳಿಗೆ ತರಲಾಗಿದೆ. ಜನವರಿ ತಿಂಗಳಲ್ಲಿ 20 ಕೋಟಿ ಲಾಭ ಗಳಿಸಿದೆ ಎಂದರು ಬಮೂಲ್ ಅಧಿಕಾರಿಗಳು, ಸಿಬ್ಬಂದಿ ತಮಗೆ ಸಿಗಬೇಕಾದ 5 ಕೋಟಿ ಡಿ.ಎ ಭತ್ಯೆಗೆ ಆಗ್ರಹಿಸಿ ಪ್ರತಿಭಟನೆಗೆ ಮುಂದಾಗಿದ್ದರು. ವಿಷಯ ನನ್ನ ಬಳಿಗೆ ಬಂದಾಗ, ಮೊದಲು ಹೈನುಗಾರರಿಗೆ ಹೆಚ್ಚು ಲಾಭವಾಗುವಂತೆ ಶ್ರಮಿಸಿ. ರೈತರು ಇದ್ದರಷ್ಟೇ ನಮಗೆ ಕೆಲಸ. ಹಾಗಾಗಿ, ಮೊದಲು ಅವರಿಗೆ ಲಾಭದ ಕೊಡುಗೆ ಕೊಡೋಣ. ನಂತರ ನಿಮಗೆ ನೀಡುತ್ತೇನೆ ಎಂದು ಭರವಸೆ ನೀಡಿದ ಬಳಿಕ ಪ್ರತಿಭಟನೆ ನಿರ್ಧಾರದಿಂದ ಹಿಂದೆ ಸರಿದರು ಎಂದು ತಿಳಿಸಿದರು. ಹಾಲು, ರೇಷ್ಮೆ ಮಾತ್ರ ಕೃಷಿ ಕ್ಷೇತ್ರದಲ್ಲಿ ರೈತರಿಗೆ ನಿಯಮಿತವಾಗಿ ಆದಾಯ ತಂದು ಕೊಡುತ್ತಿದೆ. ಲಕ್ಷಾಂತರ ಮಂದಿ ಅವಲಂಬಿಸಿರುವ ಕ್ಷೀರ ಕ್ಷೇತ್ರದಲ್ಲಿ ಗಮನಾರ್ಹ ಬದಲಾವಣೆ ತರುವ ಕೆಲಸ ಮಾಡುತ್ತಿದ್ದೇನೆ. ಮುಂದೆ ಸರ್ಕಾರಿ, ಖಾಸಗಿ ವಲಯದಲ್ಲೂ ಕೆಲಸ ಸಿಗಲ್ಲ. ದುಡಿಯುವ ಕೈಗಳಿಗೆ ಮಾತ್ರ ಆದಾಯ ಸಿಗುತ್ತದೆ ಎಂದು ಅಭಿಪ್ರಾಯಪಟ್ಟರು.

# ಖಮೇನಿಗೂ ಅಲಿಪುರಕ್ಕೂ ನಂಟೇನು?

### ಖಮೇನಿ ಸಾವಿಗೆ ಕಣ್ಣೀರಿಟ್ಟ ಚಿಕ್ಕಬಳ್ಳಾಪುರದ ಅಲಿಪುರ ಗ್ರಾಮಸ್ಥರು, 3 ದಿನ ಬ್ಲಾಕ್ ಡೇ ಘೋಷಣೆ

• ಉದಯವಾಹಿನಿ, ಚಿಕ್ಕಬಳ್ಳಾಪುರ


ಉದಯವಾಹಿನಿ ಚಿತ್ರ



ಅಮೆರಿಕಾ-ಇಸ್ರೇಲ್ ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ ಇರಾನ್ ಸರ್ವೋಚ್ಚನಾಯಕ ಅಯತೊಲ್ಲಾ ಅಲಿ ಖಮೇನಿ ಹತ್ಯೆಗೀಡಾಗಿದ್ದಾರೆ. ಈ ನಿಧನ ವಾರ್ತೆಯನ್ನು ಕೇಳಿ ಮಿನಿ ಇರಾನ್ ಎಂದೇ ಕರೆಸಿಕೊಳ್ಳುವ ಚಿಕ್ಕಬಳ್ಳಾಪುರದಲ್ಲಿರುವ ಅಲಿಪುರ ಗ್ರಾಮದ ಜನತೆ ಶೋಕಸಂದ್ರದಲ್ಲಿ ಮುಳುಗಿದ್ದು, ಅಮೆರಿಕಾ ವಿರುದ್ಧ ಧಿಕ್ಕಾರಗಳನ್ನು ಕೂಗಿ ಪ್ರತಿಭಟನೆಗಳನ್ನು ನಡೆಸುತ್ತಿದ್ದಾರೆ.

**ಖಮೇನಿ ಹತ್ಯೆಗೆ ಕಂಬನಿ ಮಿಡಿದ ಅಲಿಪುರ, 3 ದಿನ ಬ್ಲಾಕ್ ಡೇ ಘೋಷಣೆ:** ಇರಾನ್‌ನ ಸುಪ್ರೀಂ ಲೀಡರ್ ಖಮೇನಿ ಹತ್ಯೆಗೀಡಾಗಿದ್ದಾರೆ ಎಂಬ ಸುದ್ದಿಯನ್ನು ಕೇಳುತ್ತಿದ್ದಂತೆ ಅಲಿಪುರ ಗ್ರಾಮಸ್ಥರಲ್ಲಿ ಸೂತಕದ ಛಾಯೆ ಆವರಿಸಿದ್ದು, ಗ್ರಾಮಸ್ಥರು ಸ್ವಯಂ ಪ್ರೇರಿತರಾಗಿ ಗ್ರಾಮದಲ್ಲಿನ ಅಂಗಡಿ ಮುಗ್ಗಟ್ಟುಗಳನ್ನು ಬಂದ್ ಮಾಡಿದ್ದು, ಶೋಕಾಚರಣೆ ಮಾಡಲು ಮುಂದಾಗಿದ್ದು, 3 ದಿನಗಳ ಕಾಲ ಬ್ಲಾಕ್ ಡೇ (ಕರಾಳ ದಿನ) ಆಚರಿಸಲು ನಿರ್ಧರಿಸಿದ್ದಾರೆ. ಅಲ್ಲದೆ, ಮಸೀದಿ ಬಳಿಗೆ ಹೋಗಿ ಖಮೇನಿ ಸಾವಿಗೆ ಗೌರವ ಸೂಚಿಸಲು ಪ್ರಾರ್ಥನೆಗಳನ್ನು ಮಾಡುತ್ತಿದ್ದಾರೆ. ಈ ವೇಳೆ, ಅಲ್ಲಿನ ಗ್ರಾಮಸ್ಥರಲ್ಲಿ ಹಲವು ದುಃಖತಪ್ತರಾಗಿ ಕಣ್ಣೀರಿಟ್ಟಿದ್ದಾರೆ.

**ಅಮೆರಿಕಾ ವಿರುದ್ಧ ಧಿಕ್ಕಾರದ ಘೋಷಣೆ:** ಹೀಗೆ ಖಮೇನಿ ನಿಧನಕ್ಕೆ ಕಂಬನಿ ಮಿಡಿಯುತ್ತಿರುವ ಅಲಿಪುರ ಗ್ರಾಮಸ್ಥರು ಭಾನುವಾರ ಗ್ರಾಮದಲ್ಲಿ ಸ್ವಯಂಪ್ರೇರಿತ ಬಂದ್‌ಜಾರಿಯಲ್ಲಿದ್ದು, ಮಧ್ಯಾಹ್ನ 3 ಗಂಟೆಗೆ ಅಲಿಪುರ ಗ್ರಾಮದಲ್ಲಿ ಬೃಹತ್ ಶೋಕಾಚರಣೆ ಮೆರವಣಿಗೆ ನಡೆಸಲು ನಿರ್ಧರಿಸಿದ್ದಾರೆ. ಅಲ್ಲದೆ, ಇದೇ ವೇಳೆ ಖಮೇನಿ ಸಾವಿಗೆ ಕಾರಣವಾದ ಅಮೆರಿಕಾ ಮೇಲೆ ತಮ್ಮ ಆಕ್ರೋಶವನ್ನು ಹೊರಹಾಕಿದ್ದು, ಕಪ್ಪು ಬಟ್ಟೆಯನ್ನು ಧರಿಸಿ ಪ್ರತಿಭಟನಾ ಮೆರವಣಿಗೆ ನಡೆಸಿ ಅಮೆರಿಕಾ ವಿರುದ್ಧ ಧಿಕ್ಕಾರವನ್ನು ಕೂಗಿದ್ದಾರೆ.

**ಖಮೇನಿಗೂ ಅಲಿಪುರಕ್ಕೂ ಇದೇ ವಿಶೇಷ ನಂಟು:** ಇರಾನ್ ಸುಪ್ರೀಂ ಲೀಡರ್ ಆಯತೊಲ್ಲಾ ಖಮೇನಿ ಹಾಗೂ ಅಲಿಪುರಕ್ಕೂ ವಿಶೇಷ ನಂಟಿದೆ. ಚಿಕ್ಕಬಳ್ಳಾಪುರದ ಗೌರಿಬಿದನೂರು ತಾಲ್ಲೂಕಿನ ಈ ಅಲಿಪುರಕ್ಕೆ ಇರಾನ್ ಸರ್ವೋಚ್ಚನಾಯಕ ಆಯತೊಲ್ಲಾ ಅಲಿ ಖಮೇನಿ 1986 ರಲ್ಲಿ ಭೇಟಿ ನೀಡಿದ್ದರು. ಅಲ್ಲಿನ ಮಸೀದಿಯಲ್ಲಿ ಪ್ರಾರ್ಥನೆಯನ್ನೂ ಸಲ್ಲಿಸಿದ್ದರು. ಇಲ್ಲಿನ ಸುಮಾರು 20ಸಾವಿರಕ್ಕೂ ಅಧಿಕ ಶಿಯಾ ಮುಸ್ಲಿಂ ಪಂಗಡದವರು ಖಮೇನಿಯನ್ನು ತಮ್ಮ ಧರ್ಮಗುರು ಎಂದು ಭಾವಿಸುತ್ತಾರೆ. ಅಲ್ಲದೆ, ಈ ಗ್ರಾಮದಲ್ಲಿ ಖಮೇನಿ ಹೆಸರಿನ ಖಾಸಗಿ ಆಸ್ಪತ್ರೆಯನ್ನು ನಿರ್ಮಿಸಿದ್ದಾರೆ.

ಇನ್ನು, ಈ ಗ್ರಾಮದ ಹಲವು ವಿದ್ಯಾರ್ಥಿಗಳು ಧಾರ್ಮಿಕ ಶಿಕ್ಷಣ ಸೇರಿದಂತೆ ವೈದ್ಯಕೀಯ ಶಿಕ್ಷಣವನ್ನು ಪಡೆಯಲು ಇರಾನ್‌ಗೆ ಸಹ ಹೋಗಿದ್ದಾರೆ. ಸದ್ಯ ಅವರೆಲ್ಲರು ಈ ಯುದ್ಧದಿಂದಾಗಿ ಅಪಾಯದಲ್ಲಿ ಇದ್ದು, ಶೀಘ್ರವೇ ಅವರು ಭಾರತಕ್ಕೆ ಸುರಕ್ಷಿತವಾಗಿ ಮರಳಲಿ ಎಂದು ಪ್ರಾರ್ಥನೆಗಳನ್ನೂ ಸಹ ನಡೆಸುತ್ತಿದ್ದಾರೆ.

**3 ದಿನಗಳ ಕಾಲ ಕರಾಳ ದಿನ**

**ಅಮೆರಿಕಾ-ಇಸ್ರೇಲ್ ಜಂಟಿಯಾಗಿ ಇರಾನ್ ಮೇಲೆ ವೈಮಾನಿಕ ದಾಳಿ ನಡೆಸಿದ್ದು, ಇದರಿಂದಾಗಿ ಇರಾನ್ ಸುಪ್ರೀಂ ಲೀಡರ್ ಆಯತೊಲ್ಲಾ ಅಲಿ ಖಮೇನಿ ಹತ್ಯೆಗೀಡಾಗಿದ್ದಾರೆ. ಈ ನಿಧನದ ವಾರ್ತೆಯನ್ನು ಕೇಳುತ್ತಿದ್ದಂತೆ ಕರ್ನಾಟಕದಲ್ಲಿನ ಮಿನಿ ಇರಾನ್ ಅಲಿಪುರದಲ್ಲಿ ಶೋಕಮಡುಗಟ್ಟಿದ್ದು, ಅಲ್ಲಿನ ಗ್ರಾಮಸ್ಥರು ಸ್ವಯಂ ಪ್ರೇರಿತವಾಗಿ ಅಂಗಡಿಗಳನ್ನು ಬಂದ್ ಮಾಡಿದ್ದು, 3 ದಿನಗಳ ಕಾಲ ಕರಾಳ ದಿನ ಎಂದು ಶೋಕಾರಚಣೆ ಮಾಡಲು ಮುಂದಾಗಿದ್ದಾರೆ. ಅಲ್ಲದೆ, ಖಮೇನಿ ಹತ್ಯೆಗೆ ಕಾರಣವಾದ ಅಮೆರಿಕಾ ವಿರುದ್ಧ ಆಕ್ರೋಶ ಹೊರಹಾಕಿದ್ದು, ಧಿಕ್ಕಾರಗಳನ್ನು ಕೂಗುತ್ತಿದ್ದಾರೆ. ಇರಾನ್ ನಾಯಕನ ಹತ್ಯೆ ಕರ್ನಾಟಕದ ಅಲಿಪುರ ಗ್ರಾಮಸ್ಥರ ದುಃಖಕ್ಕೆ ಕಾರಣವಾಗಿದ್ದೇಕೆ? ಖಮೇನಿಗೂ ಮತ್ತು ಅಲಿಪುರಕ್ಕೆ ಇರುವ ನಂಟೇನು?**

## ಸಾಲುಗಟ್ಟಿ ನಿಂತ ವಾಹನ: ರೈತರು, ಅಧಿಕಾರಿಗಳ ವಾಗ್ವಾದ

• ಉದಯವಾಹಿನಿ, ತಿಪಟೂರು

ನಗರದ ಎಪಿಎಂಸಿ ಆವರಣದ ರಾಗಿ ಖರೀದಿ ಕೇಂದ್ರದಲ್ಲಿ ಜೇಷ್ಠತಾ ಪಟ್ಟಿ ಅನುಸರಿಸದೆ ರೈತರು ರಾಗಿ ತರುತ್ತಿದ್ದು ಈ ಬಗ್ಗೆ ರೈತರು ಹಾಗೂ ಅಧಿಕಾರಿಗಳ ನಡುವೆ ಶನಿವಾರ ವಾಗ್ವಾದ ನಡೆಯಿತು. ಸಮಸ್ಯೆ ತೀವ್ರವಾಗುತ್ತಿದ್ದಂತೆ ಸ್ಥಳಕ್ಕೆ ಭೇಟಿ ನೀಡಿದ ಶಾಸಕ ಕೆ.ಷಡಕ್ಷರಿ ರೈತರು, ಅಧಿಕಾರಿಗಳ ಅಹವಾಲು ಆಲಿಸಿದರು. ನಂತರ ಮಾತನಾಡಿದ ಷಡಕ್ಷರಿ, ಯಾರೇ ಬಂದರೂ ಜೇಷ್ಠತೆ ಹೊರತುಪಡಿಸಿ ರಾಗಿ ಖರೀದಿ ಮಾಡಬಾರದು. ಕೇಂದ್ರಕ್ಕೆ ಪೊಲೀಸ್ ಭದ್ರತೆ ಬೇಕಿದ್ದರೆ ನಿಯೋಜಿಸಲಾಗುವುದು. ಸಿ.ಸಿ. ಟಿವಿ ಕ್ಯಾಮೆರಾ ಅಳವಡಿಸಬೇಕು. ಜೇಷ್ಠತಾ ನಿಯಮ ಉಲ್ಲಂಘಿಸಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು. ರಾಗಿ ಖರೀದಿ ಅಧಿಕಾರಿ ರುದ್ರಪ್ಪ ಮಾತನಾಡಿ, ಜೇಷ್ಠತಾ ಪಟ್ಟಿಯನ್ನು ಪ್ರತಿ ಮೂರು ದಿನಕ್ಕೊಮ್ಮೆ ಪ್ರಕಟಿಸಲಾಗುತ್ತಿದೆ. ಅದರ ಪ್ರಕಾರವೇ ರೈತರಿಂದ ರಾಗಿ ಖರೀದಿ ಮಾಡಲಾಗುತ್ತಿದೆ. ಆದರೆ ಎಲ್ಲಾ ರೈತರು ರಾಗಿ ತೆಗೆದುಕೊಂಡು ಬಂದು ಸಾಲಗಟ್ಟಿ ನಿಂತಿದ್ದಾರೆ. ಕೇಂದ್ರದಲ್ಲಿ ಪ್ರತಿನಿತ್ಯ ನಾಲ್ಕರಿಂದ ಐದು ಸಾವಿರ ಕ್ವಿಂಟಲ್ ರಾಗಿ ಖರೀದಿ ಮಾಡಲಾಗುತ್ತಿದೆ ಎಂದರು. ರೈತರು ಮಾತನಾಡಿ, ಎರಡು ಮೂರು ದಿನಗಳ ಹಿಂದೆ ಜೇಷ್ಠತಾ ಪಟ್ಟಿ ಅನುಸರಿಸದೆ ರಾಗಿ ಖರೀದಿ ಮಾಡಲಾಗಿದೆ. ಅದನ್ನು ಅನುಸರಿಸಿ ನಾವು ರಾಗಿ ತಂದಿದ್ದು, ವಾಪಸ್ ಮನೆಗೆ ಹಿಂತಿರುಗಿದರೆ ಒಂದು ವಾಹನಕ್ಕೆ 5 ಸಾವಿರ ಖರ್ಚು ಬರುತ್ತದೆ. ಮೂರ್ನಾಲ್ಕು ದಿನಗಳಿಂದ ಕಾಯುತ್ತಿದ್ದೇವೆ. ಆದ್ದರಿಂದ ಖರೀದಿಗೆ ಅವಕಾಶ ನೀಡಬೇಕು ಎಂದು ಮನವಿ ಮಾಡಿದರು.

# ಸಾಲಪಡೆಯಲು ಪೌರ ಕಾರ್ಮಿಕರ ಹೆಸರು ದುರ್ಬಳಕೆ

• ಉದಯವಾಹಿನಿ ಮಂಗಳೂರು

ಪೌರಕಾರ್ಮಿಕರ ಹೆಸರನ್ನು ದುರ್ಬಳಕೆ ಮಾಡಿ ನಗರದ ಕೆಲ ಬ್ಯಾಂಕ್‌ನಲ್ಲಿ ಸಾಲ ಪಡೆದು ವಂಚಿಸಲಾಗಿದೆ. ಪಾಲಿಕೆ ಆಯುಕ್ತರ ಹಾಗೂ ಆರೋಗ್ಯ ಅಧಿಕಾರಿಯ ನಕಲಿ ಸಹಿ, ನಕಲಿ ವೇತನ ಚೀಟಿ, ನಕಲಿ ಮೊಹರು ಬಳಸಿ ನಕಲಿ ದಾಖಲೆ ಪತ್ರಗಳನ್ನು ಸೃಷ್ಟಿಸಿ ಈ ವಂಚನೆ ನಡೆಸಲಾಗಿದೆ. ಯಾರೋ ಮಾಡಿದ ಈ ವಂಚನೆಯಿಂದ ನೈಜ ಪೌರಕಾರ್ಮಿಕರಿಗೂ ಬ್ಯಾಂಕ್‌ನಲ್ಲಿ ಸಾಲ ಸಿಗದ ಸ್ಥಿತಿ ಎದುರಾಗಿದೆ ಎಂದು ಪರಿಶಿಷ್ಟ ಜಾತಿಯ ಮುಖಂಡರು ಆರೋಪಿಸಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಅಹವಾಲು ಆಲಿಸಲು ಮಂಗಳೂರು ಪೊಲೀಸ್ ಕಮಿಷನರೇಟ್ ವತಿಯಿಂದ ಏರ್ಪಡಿಸಿದ್ದ ಸಭೆಯಲ್ಲಿ ಪರಿಶಿಷ್ಟ ಜಾತಿಯ ಮುಖಂಡ ಅನಿಲ್ ಕುಮಾರ್ ಈ ಬಗ್ಗೆ ಗಮನ ಸೆಳೆದರು. ಬ್ಯಾಂಕ್ ಸಾಲಕ್ಕಾಗಿ ಪಾಲಿಕೆಯ ಕೆಲ ಪೌರ ಕಾರ್ಮಿಕರು ಅರ್ಜಿ ಸಲ್ಲಿಸಿದಾಗ ಆ ಬ್ಯಾಂಕಿನ ಅಧಿಕಾರಿ ಈಗಾಗಲೇ ಹಲವು ಪೌರ ಕಾರ್ಮಿಕರು ಸಾಲ ಪಡೆದು ವಂಚಿಸಿರುವ ಬಗ್ಗೆ ತಿಳಿಸಿದ್ದರು. ಈ ಬಗ್ಗೆ ಸಂಶಯ ಬಂದು ದಲಿತ ಮುಖಂಡ ವಿಶು ಕುಮಾರ್ ಮಾಹಿತಿ ಹಕ್ಕು ಕಾಯ್ದೆ (ಆರ್‌ಟಿಐ) ದಾಖಲೆಗಳನ್ನು ಸಂಗ್ರಹಿಸಿ ಪರಿಶೀಲಿಸಿದಾಗ ಈ ರೀತಿ ವಂಚನೆ ನಡೆದಿದ್ದು ಗೊತ್ತಾಗಿದೆ. ಪೌರಕಾರ್ಮಿಕರೇ ಅಲ್ಲದವರು, ಪಾಲಿಕೆಯ ಸಿಬ್ಬಂದಿಯೇ ಅಲ್ಲದವರು ಈ ರೀತಿ ಸಾಲ ಪಡೆದಿದ್ದಾರೆ. ಸಾಲ ಕೊಡಿಸಿದವರು ರೂ. 20 ಸಾವಿರದಿಂದ ರೂ. 50 ಸಾವಿರದವರೆಗೆ ಕಮಿಷನ್ ಪಡೆದ ಮಾಹಿತಿ ಇದೆ ಎಂದರು. ಜಿಲ್ಲೆಯ ಸಹಕಾರಿ ಬ್ಯಾಂಕಿನ ವ್ಯವಸ್ಥಾಪಕರೊಬ್ಬರು ಅರ್ಜಿ ವಿಲೇ ಮಾಡುವಾಗ ಪಾಲಿಕೆ ಆಯುಕ್ತರಿಂದ ವೇತನ ದೃಢೀರಣ ಪತ್ರ ಪಡೆದು ಸಲ್ಲಿಸುವಂತೆ ಕೇಳಿದ್ದಾರೆ. ಆದರೆ, ಸಹಕಾರಿ ಬ್ಯಾಂಕಿಗೆ ಸಲ್ಲಿಸಲಾದ ದಾಖಲೆಗಳೂ ನಕಲಿ. ಸಾಲದ ಅರ್ಜಿಗಳಲ್ಲಿದ್ದ ಹೆಸರಿನವರು ಯಾರೂ ಪಾಲಿಕೆಯ ಪೌರ ಕಾರ್ಮಿಕರಲ್ಲ ಎಂದು ಪಾಲಿಕೆ ಆಯುಕ್ತರೇ ಬ್ಯಾಂಕಿಗೆ ಪತ್ರ ಬರೆದು ಸ್ಪಷ್ಟಪಡಿಸಿದ್ದಾರೆ' ಎಂದರು.

ಉಳ್ಳಾಲ ತಾಲ್ಲೂಕಿನ ಬಾಳೆಪುಣಿ ಗ್ರಾಮದಲ್ಲಿ ಬಾಬು ಕೊರಗ 1 ಎಕರೆ ಕೃಷಿ ಜಮೀನು ಮಂಜೂರಾತಿ ಕೋರಿ ಅರ್ಜಿ ಸಲ್ಲಿಸಿದ್ದರು. ಅವರು ಕೋರಿದ್ದ ಜಮೀನು ಗೋಮಾಳ ಎಂಬ ಕಾರಣಕ್ಕೆ ಅರ್ಜಿಯನ್ನು ತಿರಸ್ಕರಿಸಲಾಗಿದೆ. ಆದರೆ ಅದೇ ಜಾಗದಲ್ಲಿ ಇತರರಿಗೆ ಕೃಷಿ ಜಮೀನು ಮಂಜೂರು ಆಗಿದ್ದು, ಈ ಬಗ್ಗೆ ಸಮಗ್ರ ತನಿಖೆಯಾಗಲಿ' ಎಂದು ಮುಖಂಡ ಎಸ್.ಪಿ. ಆನಂದ ಒತ್ತಾಯಿಸಿದರು.

ಖಾಸಗಿ ಐಟಿಐ ಪ್ರಾಂಶುಪಾಲರೊಬ್ಬರು ಅದೇ ಸಂಸ್ಥೆಯ ಉಪನ್ಯಾಸಕರನ್ನು ವಂಚಿಸಿರುವ ಆರೋಪದ ಬಗ್ಗೆ ತನಿಖೆ ನಡೆಸುವಂತೆ ಡಿಸಿಪಿ ಮಿಥುನ್ ಸೂಚಿಸಿದರು. ಡಿಸಿಪಿ (ಅಪರಾಧ ಮತ್ತು ಸಂಚಾರ ವಿಭಾಗ) ರವಿಶಂಕರ್ ಭಾಗವಹಿಸಿದ್ದರು. ಇನ್‌ಸ್ಪೆಕ್ಟರ್ ನಾಗರಾಜ್ ಸ್ವಾಗತಿಸಿ, ಹಿಂದಿನ ಸಭೆಯ ನಡಾವಳಿಯ ವಿವರ ನೀಡಿದರು. ಇನ್‌ಸ್ಪೆಕ್ಟರ್ ಮುಹಮ್ಮದ್ ಸಲೀಂ ಧನ್ಯವಾದ ಸಲ್ಲಿಸಿದರು.

## ಅರ್ಧಕ್ಕೆ ನಿಂತ ರಸ್ತೆ ಕಾಮಗಾರಿ


ಉದಯವಾಹಿನಿ ಚಿತ್ರ

• ಉದಯವಾಹಿನಿ ಕುಳಗೇರಿ ಕ್ರಾಸ್

ಸವದತ್ತಿ-ಪಟ್ಟದಕಲ್ಲು ರಾಜ್ಯ ಹೆದ್ದಾರಿ 14ಕ್ಕೆ ಹೊಂದಿಕೊಂಡಿರುವ ಸೋಮನಕೊಪ್ಪ ರಸ್ತೆ ಕಾಮಗಾರಿ ಅರ್ಧಕ್ಕೆ ಸ್ಥಗಿತವಾಗಿದ್ದರಿಂದ ಪ್ರಯಾಣಿಕರಿಗೆ ಸಂಕಷ್ಟ ಎದುರಾಗಿದೆ. ಹದಗೆಟ್ಟ ರಸ್ತೆಯಲ್ಲೇ ಸೋಮನಕೊಪ್ಪ ಗ್ರಾಮ ತಲುಪುವ ಜನರು, ರಸ್ತೆ ಕಾಮಗಾರಿ ಪೂರ್ಣಗೊಳಿಸಿದ್ದಕ್ಕೆ ಅಸಮಾಧಾನ ವ್ಯಕ್ತಪಡಿಸುತ್ತಾರೆ. ಸ್ವಂತ ವಾಹನದಲ್ಲಿ ಪ್ರಯಾಣಿಸಿದರೆ ಮಾತ್ರ ಗ್ರಾಮವನ್ನು ಸಮಯಕ್ಕೆ ಸರಿಯಾಗಿ ತಲುಪಬಹುದು. ಇಲ್ಲವಾದರೆ ಸಾಧ್ಯವಾಗುವುದಿಲ್ಲ ಎನ್ನುತ್ತಾರೆ ಗ್ರಾಮದ ನಿವಾಸಿ ರಮೇಶ್ ಮಣ್ಣೂರ.

ಗ್ರಾಮದ ಕಾಲೇಜು ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳು ಪ್ರತಿದಿನ 900 ಮೀಟರ್‌ನಷ್ಟು ನಡೆದು ರಾಜ್ಯ ಹೆದ್ದಾರಿ 14 ಅನ್ನು ತಲುಪಬೇಕು. ಕ್ರಾಸ್‌ನಲ್ಲಿ ಬಸ್‌ಗಳನ್ನು ನಿಲ್ಲಿಸುವುದಿಲ್ಲ. ಅಲ್ಲಿಂದ 2 ಕಿ.ಮೀ. ದೂರವಿರುವ ಕುಳಗೇರಿ ಕ್ರಾಸ್‌ವರೆಗೂ ನಡೆದುಕೊಂಡೇ ಬರಬೇಕಾದ ಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು.

ಗ್ರಾಮಕ್ಕೆ ಒಂದು ಬಸ್ ಬೆಳಿಗ್ಗೆ ಹಾಗೂ ರಾತ್ರಿ ಮಾತ್ರ ಸಂಚರಿಸುತ್ತದೆ. ಶಾಲಾ- ಕಾಲೇಜುಗಳ ಆರಂಭ ಹಾಗೂ ಮುಕ್ತಾಯದ ಸಮಯಕ್ಕೆ ಸರಿಯಾಗಿ ಬಸ್ ಸೌಲಭ್ಯ ಇಲ್ಲದ್ದರಿಂದ ನಡೆದುಕೊಂಡು ಬರುವುದು ಅನಿವಾರ್ಯವಾಗಿದೆ. ಗ್ರಾಮಸ್ಥರು ವಿವಿಧ ಕೆಲಸಕ್ಕೆ ಹಲವಾರು ಬಾರಿ ನಡೆದುಕೊಂಡೇ ಹೋಗಬೇಕಿದೆ. ಅನಾರೋಗ್ಯದಿಂದ ಬಳಲುತ್ತಿರುವವರು ಖಾಸಗಿ ವಾಹನಗಳನ್ನೇ ಆಶ್ರಯಿಸಬೇಕಿದೆ. ರಸ್ತೆ ದುರಸ್ತಿ ಮಾಡಬೇಕು. ಬಸ್ ಸಂಚಾರ ಹೆಚ್ಚಿಸಬೇಕು ಎಂಬುದು ಗ್ರಾಮಸ್ಥರ ಆಗ್ರಹ. ಸೋಮನಕೊಪ್ಪ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ 400 ಮೀಟರ್‌ನಷ್ಟು ರಸ್ತೆ ಕಾಮಗಾರಿ ಪೂರ್ಣವಾಗಿದೆ. ಇನ್ನುಳಿದ 500 ಮೀಟರ್ ರಸ್ತೆ ನಿರ್ಮಾಣಕ್ಕೆ ಟೆಂಡರ್ ಕರೆದು ಕಾಮಗಾರಿ ನಡೆಸಲಾಗುವುದು ಎಂದು ಲೋಕೋಪಯೋಗಿ ಇಲಾಖೆ ಎಇಇ ವೈ.ಎಫ್. ಆಡಿನ ತಿಳಿಸಿದರು.

## ಅಕ್ರಮವಾಗಿ ಶೆಡ್ ನಿರ್ಮಿಸಿಕೊಂಡು ಮಾಲೀಕತ್ವದ ಹಕ್ಕು ಪಡೆಯಲು ಪ್ರಯತ್ನ

# ಹಕ್ಕುಪತ್ರದ ಆಸೆ: ಸರ್ಕಾರಿ ಜಾಗದಲ್ಲಿ ಶೆಡ್

• ಉದಯವಾಹಿನಿ ಹಾವೇರಿ

ಸರ್ಕಾರಿ ಹಾಗೂ ಖಾಸಗಿ ಜಾಗದಲ್ಲಿ ಹಲವು ವರ್ಷಗಳಿಂದ ವಾಸವಿದ್ದರೂ ಮಾಲೀಕತ್ವದಿಂದ ವಂಚಿತರಾಗಿದ್ದ 1 ಲಕ್ಷಕ್ಕೂ ಹೆಚ್ಚಿನ ಅರ್ಹ ಕುಟುಂಬಗಳಿಗೆ ರಾಜ್ಯ ಸರ್ಕಾರವು ಇತ್ತೀಚೆಗಷ್ಟೇ ಹಕ್ಕುಪತ್ರ ವಿತರಿಸಿದೆ. ಸರ್ಕಾರದ ಅವಕಾಶವನ್ನು ದುರುಪಯೋಗ ಪಡಿಸಿಕೊಳ್ಳುತ್ತಿರುವ ಜಿಲ್ಲೆಯ ಕೆಲವರು, ಸರ್ಕಾರದ ಜಾಗದಲ್ಲಿ ಅಕ್ರಮವಾಗಿ ಶೆಡ್ ನಿರ್ಮಿಸಿಕೊಂಡು ಮಾಲೀಕತ್ವದ ಹಕ್ಕು ಪಡೆಯಲು ಪ್ರಯತ್ನಿಸುತ್ತಿದ್ದಾರೆ.

**ಹಕ್ಕುಪತ್ರ ಪಡೆಯಲು ಗ್ರಾ.ಪಂ ಗೆ ಅರ್ಜಿ**

ಜಿಲ್ಲೆಯ ರಾಣೆಬೆನ್ನೂರು ತಾಲ್ಲೂಕಿನ ಅರೇಮಲ್ಲಾಪುರ ಗ್ರಾಮದಲ್ಲಿ ನಡೆದಿರುವ ಘಟನೆಯಿಂದ ಎಚ್ಚೆತ್ತುಕೊಂಡಿರುವ ಜಿಲ್ಲಾಡಳಿತ, ಸರ್ಕಾರದ ಜಾಗದಲ್ಲಿ ಅಕ್ರಮವಾಗಿ ನಿರ್ಮಿಸಿರುವ ಶೆಡ್‌ಗಳನ್ನು ತೆರವುಗೊಳಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಲು ಮುಂದಾಗಿದೆ. ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದ ದಿನದಿಂದಲೇ, ಅರ್ಹರಿಗೆ ಹಕ್ಕುಪತ್ರ ನೀಡುತ್ತಿದೆ. 1 ಲಕ್ಷಕ್ಕೂ ಹೆಚ್ಚಿನ ಕುಟುಂಬಗಳಿಗೆ ಹಾವೇರಿಯಲ್ಲಿ ಫೆ.14ರಂದು ಆಯೋಜಿಸಿದ್ದ ಭೂ ಗ್ಯಾರಂಟಿ ಸಮರ್ಪಣಾ ಸಮಾವೇಶದಲ್ಲಿ ಹಕ್ಕುಪತ್ರ ವಿತರಿಸಲಾಗಿದೆ. ಜಿಲ್ಲೆಯಲ್ಲಿಯೂ 20 ಸಾವಿರಕ್ಕೂ ಅಧಿಕ ಜನರಿಗೆ ಹಕ್ಕುಪತ್ರ ನೀಡಲಾಗಿದೆ. ಮಾಲೀಕತ್ವದ ಹಕ್ಕಿಗಾಗಿ ಹಲವು ವರ್ಷಗಳಿಂದ ಕಾಯುತ್ತಿದ್ದ ಜನರು, ಹಕ್ಕುಪತ್ರ ಕೈಗೆ ಸಿಗುತ್ತಿದ್ದಂತೆ ಹರ್ಷಗೊಂಡಿದ್ದಾರೆ.

ಸರ್ಕಾರಿ ಜಾಗದಲ್ಲಿ ಹಲವು ವರ್ಷಗಳಿಂದ ನೆಲೆಸಿದ್ದ ತಮ್ಮೂರಿನ ವ್ಯಕ್ತಿಗಳಿಗೆ ಸರ್ಕಾರ ಹಕ್ಕುಪತ್ರ ನೀಡಿದೆ ಎಂದು ತಿಳಿದಿರುವ ಗ್ರಾಮದ ಕೆಲವರು, ಖಾಲಿ ಇರುವ ಸರ್ಕಾರದ ಜಾಗವನ್ನು ಅತಿಕ್ರಮಣ ಮಾಡಿ ಶೆಡ್ ನಿರ್ಮಿಸಿ ಹೊಸದಾಗಿ ಹಕ್ಕುಪತ್ರ ಪಡೆಯಲು ಗ್ರಾಮ ಪಂಚಾಯಿತಿಗೆ ಅರ್ಜಿ ಸಲ್ಲಿಸುತ್ತಿದ್ದಾರೆ.

ಸರ್ಕಾರದ ಜಾಗದಲ್ಲಿರುವ ಶೆಡ್‌ಗೆ ಹಕ್ಕುಪತ್ರ ನೀಡಲು ಹಾಗೂ ಇ-ಸ್ವತ್ತು ಮಾಡಲು ಅವಕಾಶವಿಲ್ಲ ಎಂದು ಅಧಿಕಾರಿಗಳು ಉತ್ತರ ನೀಡುತ್ತಿದ್ದಾರೆ. ಅಧಿಕಾರಿಗಳ ವಿರುದ್ಧವೇ ಹರಿಹಾಯುತ್ತಿರುವ ಕೆಲವರು, ಶಾಸಕರು ಹಾಗೂ ಇತರೆ ಜನಪ್ರತಿನಿಧಿಗಳ ಹೆಸರು ಹೇಳಿ ಬೆದರಿಸುತ್ತಿದ್ದಾರೆ. ಶಾಸಕರೇ ಅರ್ಜಿ ಕೊಡುವಂತೆ ಹೇಳುತ್ತಿದ್ದಾರೆ. ನೀವು ಏಕೆ ಅರ್ಜಿ ಪಡೆಯುತ್ತಿಲ್ಲ ಎಂದು ಅಧಿಕಾರಿಗಳನ್ನು ಪ್ರಶ್ನಿಸುತ್ತಿದ್ದಾರೆ. ಶಾಸಕರಿಂದಲೂ ಕರೆ ಮಾಡಿಸುತ್ತಿದ್ದಾರೆ. ಜಾಗ ಹಾಗೂ ನಿವೇಶನ ರಹಿತ ಅರ್ಹರಿಗೆ ಸರ್ಕಾರ ಭೂ ಗ್ಯಾರಂಟಿ ನೀಡುತ್ತಿದೆ. ಸರ್ಕಾರದ ಉದ್ದೇಶ ಜನಪರವಾಗಿದೆ. ಸರ್ಕಾರದ ಅವಕಾಶವನ್ನು ದುರುಪಯೋಗಪಡಿಸಿಕೊಳ್ಳುತ್ತಿರುವ ಕೆಲವರು, ಸರ್ಕಾರದ ಜಾಗದಲ್ಲಿ ತಾತ್ಕಾಲಿಕ ಶೆಡ್ ನಿರ್ಮಿಸಿ ಹಲವು ವರ್ಷಗಳಿಂದ ವಾಸಿಸುತ್ತಿರುವುದಾಗಿ ವಾದಿಸುತ್ತಿದ್ದಾರೆ. ಇಂಥ ಶೆಡ್‌ಗಳನ್ನು ವಸತಿ ಎಂದು ಪರಿಗಣಿಸಲು ಬರುವುದಿಲ್ಲವೆಂದು ಹೇಳಿದರೆ, ಶಾಸಕರ ಹೆಸರಿನಲ್ಲಿ ಬೆದರಿಸುತ್ತಿದ್ದಾರೆ ಎಂದು ರಾಣೆಬೆನ್ನೂರು ತಾಲ್ಲೂಕಿನ ಅಧಿಕಾರಿಯೊಬ್ಬರು ಅಳಲು ತೋಡಿಕೊಂಡರು.

**ರಾತ್ರೋರಾತ್ರಿ ಶೆಡ್ ನಿರ್ಮಾಣಕ್ಕೆ ತಯಾರಿ:** ಅರೇಮಲ್ಲಾಪುರ ಗ್ರಾಮದ ಹೊರವಲಯದಲ್ಲಿರುವ ಜಾಗವನ್ನು ಕಂದಾಯ ಗ್ರಾಮವೆಂದು ಘೋಷಿಸಿ, ಕೆಲವರಿಗೆ ಹಕ್ಕುಪತ್ರ ನೀಡಲಾಗಿದೆ. ಇದನ್ನೇ ಬಂಡವಾಳ ಮಾಡಿಕೊಂಡಿರುವ ಕೆಲವರು, ಗ್ರಾಮದಲ್ಲಿರುವ ಸರ್ಕಾರದ ಜಾಗದಲ್ಲಿ ರಾತ್ರೋರಾತ್ರಿ ಕಂಬ ನಿಲ್ಲಿಸಿ ಶೆಡ್ ನಿರ್ಮಿಸಲು ಪ್ರಯತ್ನಿಸಿ ಜಿಲ್ಲಾಡಳಿತಕ್ಕೆ ಸಿಕ್ಕಿಬಿದ್ದಿದ್ದಾರೆ.


ಉದಯವಾಹಿನಿ ಚಿತ್ರ

> ಯಾವುದಾದರೂ ಜಾಗದಲ್ಲಿ ಏಕಾಏಕಿ ಶೆಡ್ ನಿರ್ಮಿಸಿ ಹಕ್ಕುಪತ್ರ ಕೇಳಿದರೆ ಸಿಗುವುದಿಲ್ಲ. ಅದಕ್ಕೆಂದು ಹಲವು ನಿಯಮಗಳಿವೆ. ಅರ್ಹರಿಗೆ ಮಾತ್ರ ಹಕ್ಕುಪತ್ರ ಸಿಗುತ್ತದೆ ಹೊರತು ಅನರ್ಹರಿಗಲ್ಲ
>
> -ವಿಜಯ ಮಹಾಂತೇಶ
> ಜಿಲ್ಲಾಧಿಕಾರಿ

### ಜಾಗಕ್ಕಾಗಿ ಜನರಿಂದ ಅರ್ಜಿ ಸಲ್ಲಿಕೆ

**ಅರೇಮಲ್ಲಾಪುರದಲ್ಲಿರುವ ಸರ್ಕಾರಿ ಜಾಗದಲ್ಲಿ ಕೆಲವರು ಕಂಬಗಳನ್ನು ನಿಲ್ಲಿಸಿ ಶೆಡ್ ನಿರ್ಮಿಸಲು ತಯಾರಿ ನಡೆಸಿದ್ದರು. ಈ ಪೈಕಿ ಕೆಲವರು ಹಕ್ಕುಪತ್ರ ಕೊಡಿಸುವಂತೆ ಅರ್ಜಿ ಸಲ್ಲಿಸಿದ್ದಾರೆ. ಅದನ್ನು ಸ್ವೀಕರಿಸಿದ್ದೇವೆ ಎಂದು ಅರೇಮಲ್ಲಾಪುರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಪಿಡಿಒ) ಕೊಟ್ರಯ್ಯ ಅಜ್ಜವಾಡಿಮಠ ತಿಳಿಸಿದರು. ಇಂಥ ಅತಿಕ್ರಮಣದ ಬಗ್ಗೆ ಕಂದಾಯ ಇಲಾಖೆ ಅಧಿಕಾರಿಗಳು ಗಮನಹರಿಸುತ್ತಾರೆ' ಎಂದರು. ಜಾಗವಿಲ್ಲ ಮನೆಯಿಲ್ಲವೆಂದು ಜನರು ಅರ್ಜಿ ಕೊಟ್ಟಿದ್ದಾರೆ. ಅರ್ಜಿ ಬೇಡವೆಂದು ಹೇಳಲು ಬರುವುದಿಲ್ಲ. ಹೀಗಾಗಿ ಅರ್ಜಿ ಪಡೆದುಕೊಂಡಿದ್ದೇವೆ ಎಂದು ಹೇಳಿದರು.**

# ಮಿನಿ ನ್ಯೂಸ್

## ಮಹೋತ್ಸವದಲ್ಲಿ ಭಾಗವಹಿಸುವ ಭರವಸೆ

• ಉದಯವಾಹಿನಿ ಭಾಲ್ಕಿ

ಪಟ್ಟಣದಲ್ಲಿ ಹಿರೇಮಠ ಸಂಸ್ಥಾನ ಮತ್ತು ಅಮೃತ ಮಹೋತ್ಸವ ಸಮಿತಿ ವತಿಯಿಂದ ಬರುವ ಏಪ್ರಿಲ್‌ನಲ್ಲಿ ನಡೆಯಲಿರುವ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಸಮಾರಂಭಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಆಹ್ವಾನಿಸಲಾಗಿದೆ. ಬೆಂಗಳೂರಿನಲ್ಲಿ ಅಮೃತ ಮಹೋತ್ಸವ ಸಮಿತಿ ಅಧ್ಯಕ್ಷರು, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ನೇತೃತ್ವದಲ್ಲಿ ಸಿಎಂ ಅವರನ್ನು ಭೇಟಿಯಾಗಿ ಆಹ್ವಾನ ಪತ್ರ ನೀಡಿ ಅಮೃತ ಮಹೋತ್ಸವದಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಲಾಯಿತು. ಗಡಿಯಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಸಾಮಾಜಿಕ, ಶೈಕ್ಷಣಿಕ, ಧಾರ್ಮಿಕ ಕ್ಷೇತ್ರದಲ್ಲಿ ಕಳೆದ ನಾಲ್ಕೈದು ದಶಕಗಳಿಂದ ವಿಶಿಷ್ಟ ಕೊಡುಗೆ ನೀಡುತ್ತಿದ್ದಾರೆ. ಅಮೃತ ಮಹೋತ್ಸವ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ಇಂತಹ ಐತಿಹಾಸಿಕ ಸಮಾರಂಭದಲ್ಲಿ ಪಾಲ್ಗೊಳ್ಳುವಂತೆ ಸಿಎಂ ಅವರನ್ನು ಸಮಿತಿ ಅಧ್ಯಕ್ಷ ಖಂಡ್ರೆ ಮನವಿ ಮಾಡಿದರು.

## ಸಮರ್ಪಕ ಬಸ್ ಸೌಲಭ್ಯಕ್ಕೆ ಆಗ್ರಹ

• ಉದಯವಾಹಿನಿ ರಾಣೆಬೆನ್ನೂರು

ತಾಲ್ಲೂಕಿನ ಕೂನಬೇವು ಮತ್ತು ಕಜ್ಜರಿ ಸೇರಿದಂತೆ ಗ್ರಾಮೀಣ ಪ್ರದೇಶಗಳಿಗೆ ಸಮರ್ಪರ್ಕವಾಗಿ ಬಸ್ ಬಿಡಬೇಕೆಂದು ಆಗ್ರಹಿಸಿ ಭಾರತ ವಿದ್ಯಾರ್ಥಿ ಫೆಡರೇಷನ್ (ಎಸ್‌ಎಫ್‌ಐ) ವಿದ್ಯಾರ್ಥಿಗಳು ಶನಿವಾರ ಬಸ್ ನಿಲ್ದಾಣದಲ್ಲಿ ಪ್ರತಿಭಟನೆ ನಡೆಸಿ ಘಟಕ ವ್ಯವಸ್ಥಾಪಕ ಆರ್.ಸಿ.ಪಾಟೀಲ ಅವರಿಗೆ ಮನವಿ ಸಲ್ಲಿಸಿದರು. ಎಸ್‌ಎಫ್‌ಐ ಮುಖಂಡ ಅರುಣ್ ನಾಗವತ್ ಮಾತನಾಡಿ, ತಾಲ್ಲೂಕಿನ ವಿವಿಧ ಗ್ರಾಮೀಣ ಪ್ರದೇಶಗಳಿಂದ ಶಾಲಾ ಕಾಲೇಜು ವಿದ್ಯಾರ್ಥಿಗಳು, ಶಿಕ್ಷಕರು, ನೌಕರರು, ರೈತರು, ಕಾರ್ಮಿಕರು, ಸಾರ್ವಜನಿಕರು ಸೇರಿದಂತೆ ನಿತ್ಯ ಸಾವಿರಾರು ಜನರು ಪಟ್ಟಣಕ್ಕೆ ಬೇರೆ ಬೇರೆ ಕೆಲಸಗಳಿಗೆ ಆಗಮಿಸುತ್ತಾರೆ. ಆದರೆ, ಗ್ರಾಮೀಣ ಪ್ರದೇಶಗಳಿಗೆ ಸಮರ್ಪಕ ಬಸ್ ಸೌಲಭ್ಯ ಇಲ್ಲದಿರುವುದರಿಂದ ಸಾರಿಗೆ ಸಮಸ್ಯೆಗಳು ಹೆಚ್ಚಾಗುತ್ತಿವೆ ಎಂದರು.

ಈಗಾಗಲೇ ದ್ವಿತೀಯ ವಾರ್ಷಿಕ ಪರೀಕ್ಷೆ ಆರಂಭವಾಗಿವೆ. ಇದು ವಾರ್ಷಿಕ ಪರೀಕ್ಷಾ ಸಮಯವಾಗಿದ್ದರಿಂದ ಸಂಬಂಧಿಸಿದ ಕೆಎಸ್‌ಆರ್‌ಟಿಸಿ ಅಧಿಕಾರಿಗಳು ಗ್ರಾಮೀಣ ಪ್ರದೇಶಗಳಿಗೆ ಸಮರ್ಪಕವಾಗಿ ಬಸ್ ಬಿಡಬೇಕು ಎಂದರು. ಸೋಮವಾರದೊಳಗೆ ವಿದ್ಯಾರ್ಥಿಗಳ ಬೇಡಿಕೆ ಈಡೇರಿಸಲು ಮುಂದಾಗದಿದ್ದರೆ ಎಸ್‌ಎಫ್‌ಐ ನೇತೃತ್ವದಲ್ಲಿ ಬಸ್ ನಿಲ್ದಾಣ ಬಂದ್ ಮಾಡಿ ಬಹತ್ ಪ್ರತಿಭಟನೆ ನಡೆಸಲಾಗುವುದುಐ ಎಂದು ಆಗ್ರಹಿಸಿದರು.

## 10 ಅಪರಾಧಿಗಳಿಗೆ ಒಂದು ವರ್ಷ ಜೈಲು

• ಉದಯವಾಹಿನಿ ಹೊಳೆಹೊನ್ನೂರು

ಆರು ವರ್ಷಗಳ ಹಿಂದೆ ಸಮೀಪದ ಹಂಚಿನ ಸಿದ್ದಾಪುರ ಗ್ರಾಮದಲ್ಲಿ ಮಹಿಳೆಯನ್ನು ಕಿಚಾಯಿಸಿ, ಅವರ ಕುಟುಂಬದವರ ಮೇಲೆ ಹಲ್ಲೆ ನಡೆಸಿದ ಕಾರಣಕ್ಕೆ 10 ಅಪರಾಧಿಗಳಿಗೆ ಭದ್ರಾವತಿಯ ಒಂದನೇ ಸೆಷನ್ಸ್ ಹಾಗೂ ಜೆಎಂಎಫ್‌ಸಿ ನ್ಯಾಯಾಲಯ ಒಂದು ವರ್ಷ ಜೈಲು ಶಿಕ್ಷೆ ಹಾಗೂ ರೂ. 8,000 ದಂಡ ಮತ್ತು ಗಾಯಾಳುಗಳಿಗೆ ರೂ. 80,000 ನೀಡುವಂತೆ ಆದೇಶಿಸಿದೆ. ಗ್ರಾಮದ ರುದ್ರೇಶ್, ವಿಶ್ವ, ಶಿವು, ಗಿರೀಶ್, ಶಶಿಧರ್, ಮಧು, ಶೇಖರಪ್ಪ, ರಾಜಪ್ಪ, ಮಲ್ಲಿಕಾ, ಹರೀಶ ಶಿಕ್ಷೆಗೊಳಗಾದ ಅಪರಾಧಿಗಳು.

6 ವರ್ಷಗಳ ಹಿಂದೆ ಗ್ರಾಮದ ಸಾಕ್ಷಿ ಅಭಿಲಾಷ್ ಅವರು ಶಿವರಾತ್ರಿ ಹಬ್ಬದ ಅಂಗವಾಗಿ ದೇವಸ್ಥಾನಕ್ಕೆ ಹೋದಾಗ ರುದ್ರೇಶ್ ಹಾಗೂ ಇತರರು ಸೇರಿ ಅವರನ್ನು ನೋಡಿ ಕಿಚಾಯಿಸಿ, ಅವಹೇಳನವಾಗಿ ಮಾತನಾಡಿದ್ದರು. ಅಲ್ಲದೇ ಗುಂಪು ಕಟ್ಟಿಕೊಂಡು ಸಾಕ್ಷಿ ಅವರ ಮನೆಯೊಳಗೆ ನುಗ್ಗಿ ಅವಾಚ್ಯ ಶಬ್ದಗಳಿಂದ ಬೈದು, ಹಲ್ಲೆ ನಡೆಸಿ, ಸಾಕ್ಷಿ ಅವರ ತಾಯಿ ಅಜ್ಜಿ ಮತ್ತು ಅಕ್ಕನನ್ನೂ ಮೈ ಕೈ ಮುಟ್ಟಿ ಎಳೆದಾಡಿದ್ದರು. ಓಮಿನಿಯ ಹಿಂಭಾಗದ ಗ್ಲಾಸ್ ಜಖಂಗೊಳಿಸಿ, ಮನೆಯ ಹೊರಗೆ ಇದ್ದ ಸಿ.ಸಿ.ಟಿ.ವಿ ಕ್ಯಾಮೆರಾವನ್ನು ಕಿತ್ತು ಹಾಕಿದ್ದರು.

## ರೈತ ವಿರೋಧಿ ನೀತಿ ಹಿಮ್ಮೆಟ್ಟಿಸಲು ಒಟ್ಟಾಗಿ

• ಉದಯವಾಹಿನಿ ಹಾಸನ

ದೇಶದಲ್ಲಿ ಭೂಮಿಯನ್ನೇ ನಂಬಿ ದುಡಿಮೆ ಮಾಡುತ್ತಿರುವ ರೈತರು ಮತ್ತು ಕೂಲಿಕಾರರ ಆದಾಯ ವರ್ಷದಿಂದ ವರ್ಷಕ್ಕೆ ಕಡಿಮೆಯಾಗುತ್ತಿದೆ. ದೇಶದ ಕೆಲವೇ ಕೆಲವು ಶ್ರೀಮಂತರ ಆದಾಯ ಮತ್ತು ಆಸ್ತಿ ಎಲ್ಲೆ ಮೀರಿ ಬೆಳೆಯುತ್ತಿದೆ. ಇದಕ್ಕೆ ಕಾರಣವಾಗಿರುವ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ರೈತ ವಿರೋಧಿ ನೀತಿಗಳನ್ನು ಹಿಮ್ಮೆಟ್ಟಿಸದಿದ್ದರೆ, ಬಿಕ್ಕಟ್ಟಿನಲ್ಲಿರುವ ಕೃಷಿಯನ್ನಾಗಲಿ ಅಥವಾ ಸಂಕಷ್ಟದಲ್ಲಿರುವ ರೈತ ಸಮುದಾಯವನ್ನಾಗಲಿ ಉಳಿಸಿಕೊಳ್ಳಲು ಸಾಧ್ಯವಿಲ್ಲ ಎಂದು ಕರ್ನಾಟಕ ಪ್ರಾಂತ ರೈತ ಸಂಘದ ರಾಜ್ಯ ಘಟಕದ ಅಧ್ಯಕ್ಷ ಯು. ಬಸವರಾಜ ಹೇಳಿದರು. ರೈತರ ಸಮಗ್ರ ಅಭಿವೃದ್ಧಿಗೆ ಆಗ್ರಹಿಸಿ ನಗರದ ಸ್ವಾಭಿಮಾನಿ ಭವನದಲ್ಲಿ ನಡೆದ ಕರ್ನಾಟಕ ಪ್ರಾಂತ ರೈತ ಸಂಘದ (ಕೆಪಿಆರ್‌ಎಸ್) 3ನೇ ಜಿಲ್ಲಾ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ಕೇಂದ್ರದ ನರೇಂದ್ರ ಮೋದಿ ಸರ್ಕಾರ ರೈತರ ಆದಾಯ ದ್ವಿಗುಣ ಮಾಡುವ ಭರವಸೆ ನೀಡಿ, ವಿದ್ಯುತ್ ಖಾಸಗೀಕರಣ, ಬೀಜ ಮಸೂದೆ, ಭೂಸ್ವಾಧೀನ ತಿದ್ದುಪಡಿ ಕಾಯ್ದೆ, ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ತಿದ್ದುಪಡಿ ಮಾಡುವ ಮೂಲಕ ರೈತರ ಮತ್ತು ಕೂಲಿಕಾರರ ಆದಾಯವನ್ನು ಸಂಪೂರ್ಣವಾಗಿ ಕುಸಿಯುವಂತೆ ಮಾಡಲಾಗಿದೆ' ಎಂದು ಹೇಳಿದರು.

## ಕೆರೆಯ ಒಡ್ಡು ಒಡೆದಿದ್ದು ಯಾರು?: ಹೇಮಲತಾ

• ಉದಯವಾಹಿನಿ ಕೊಪ್ಪಳ

ನಗರದಲ್ಲಿರುವ ಐತಿಹಾಸಿಕ ಹುಲಿಕೆರೆಯ ಒಡ್ಡು ಒಡೆದಿದ್ದು ಯಾರು?, ಅಕ್ರಮವಾಗಿ ರಸ್ತೆ ನಿರ್ಮಿಸಿಕೊಳ್ಳಲು ಅವಕಾಶ ಮಾಡಿಕೊಟ್ಟಿದ್ದು ಯಾರು? ಎನ್ನುವುದರ ಬಗ್ಗೆ ಸಮಗ್ರ ತನಿಖೆ ನಡೆಯಲಿ ಎಂದು ವಿಧಾಪರಿಷತ್ ಸದಸ್ಯೆ ಹೇಮಲತಾ ನಾಯಕ ಆಗ್ರಹಿಸಿದರು. ಇಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಇತ್ತೀಚೆಗೆ ಹುಲಿಕೆರೆಗೆ ತೆರಳುವ ಮಾರ್ಗದಲ್ಲಿ ಅಕ್ರಮವಾಗಿ ನಿರ್ಮಿಸಿಕೊಳ್ಳಲಾದ ಆರೋಪ ಹೊತ್ತ ಮರಂ ರಸ್ತೆ ಬಗ್ಗೆ ಪ್ರಸ್ತಾಪಿಸಿದರು. ಫೆ. 18ರಂದು ಕೆರೆಗೆ ತೆರಳುವ ಮಾರ್ಗದಲ್ಲಿ ನಿರ್ಮಿಸಿದ ರಸ್ತೆ ಗಮನಕ್ಕೆ ಬಂದಿದ್ದು, ಅಧಿಕಾರಿಗಳನ್ನು ಈ ಕುರಿತು ವಿಚಾರಿಸಿದ್ದೇನೆ. ಬೆಂಗಳೂರಿನಿಂದ ಇಲ್ಲಿಗೆ ಬರುವಷ್ಟರಲ್ಲಿ ಕೆರೆಯ ಒಡ್ಡು ಒಡೆದು ನೀರು ಹರಿಸಿ ಖಾಲಿ ಮಾಡಿ 30 ಅಡಿ ರಸ್ತೆ ನಿರ್ಮಿಸಿದ್ದರು. ನಾನು ಸ್ಥಳಕ್ಕೆ ತೆರಳುವ ಮೊದಲೇ ಪೊಲೀಸರಿಗೆ ಇದನ್ನು ಗಮನಕ್ಕೆ ತಂದಿದ್ದೇನೆ. ಪರಿಸ್ಥಿತಿ ಕೈ ಮೀರಿದ್ದನ್ನು ಕಂಡು ತಕ್ಷಣ ದಿಢೀರ್ ಪ್ರತಿಭಟನೆ ನಡೆಸಿದೆವು' ಎಂದು ಹೇಳಿದರು. ಹೇಮಲತಾ ನಾಯಕ ಅವರು ಶಿವರಾತ್ರಿ ಉತ್ಸವದ ಕಾರ್ಯಕ್ರಮಕ್ಕೆ ಬಂದಾಗ ನೋಡಿಯೂ ಸುಮ್ಮನಿದ್ದು ಅಭಿವೃದ್ಧಿ ಕಾರ್ಯ ಸಹಿಸದೇ ಈಗ ಆರೋಪ ಮಾಡುತ್ತಿದ್ದಾರೆ ಎಂದು ಸಂಸದ ರಾಜಶೇಖರ ಹಿಟ್ನಾಳ ಇತ್ತೀಚೆಗೆ ಪತ್ರಿಕಾಗೋಷ್ಠಿಯಲ್ಲಿ ಆರೋಪಿಸಿದ್ದರು.

ನಾನು ಶಿವರಾತ್ರಿ ಉತ್ಸವದಲ್ಲಿ ಭಾಗಿಯಾಗಿಲ್ಲ, ದೇವಸ್ಥಾನಕ್ಕೆ ಮಾತ್ರ ಬಂದು ಹೋಗಿದ್ದೇನೆ. ಸುಮ್ಮನೇ ನನ್ನ ಮೇಲೆ ಆರೋಪ ಮಾಡುವುದು ಸರಿಯಲ್ಲ. ಇವರದೇ ಸರ್ಕಾರ ಕೆರೆ ಸಂರಕ್ಷಣೆ ಕಾಯ್ದೆ ಜಾರಿ ಮಾಡಿದೆ. ಅದರಲ್ಲಿ ಮೂಲ ಕೆರೆ ಹೊರತುಪಡಿಸಿ 24 ಮೀಟರ್ ಬಫರ್ ಜೋನ್ ಇರಬೇಕು. ಈ ನಿಯಮ ಪಾಲಿಸಿಲ್ಲ ಎಂದರು. ಬಿಜೆಪಿ ಅಭಿವೃದ್ಧಿ ವಿರೋಧಿ ಎಂದು ಸಂಸದರು ಬಿಂಬಿಸುತ್ತಿದ್ದಾರೆ. ಅವರಿಗೆ ನಿಜವಾಗಿಯೂ ಕಾಳಜಿಯಿದ್ದರೆ ಹುಲಿಕೆರೆ ವಿಷಯದಲ್ಲಿ ಅಕ್ರಮ ಎಸಗಿದವ ಮೇಲೆ ಕ್ರಮ ಕೈಗೊಳ್ಳಲಿ. ಹುಲಿಗಿ, ಅಂಜನಾದ್ರಿ, ಮಾರ್ಕಂಡೇಶ್ವರ ದೇವಸ್ಥಾನ ಸೇರಿದಂತೆ ಅನೇಕ ತಾಣಗಳನ್ನು ಅಭಿವೃದ್ಧಿಪಡಿಸಲಿ ಎಂದರು.

# ಸರ್ವಾಧಿಕಾರ ಧೋರಣೆಗೆ ಬೇಸತ್ತ ಕಾರ್ಮಿಕರು

## ಆತ್ಮ ಹತ್ಯೆಗೆ ಯತ್ನಿಸಿದ್ನಾ ಕಾರ್ಮಿಕ ? ವಿಡಿಯೋ ಮಾಡುತ್ತಾ ನಿಂತ ಚೀಫ್ ಆಫೀಸರ್ ?

• ಉದಯವಾಹಿನಿ ಕಾರಟಗಿ

ಪಟ್ಟಣದ ಪುರಸಭೆ ಯಲ್ಲಿ ಸುಮಾರು ಹತ್ತು ವರ್ಷಗಳಿಂದ ದುಡಿಯುತ್ತಿರುವ ಕಾರ್ಮಿಕ ವರ್ಗಕ್ಕೆ ಕೆಲವೊಂದು ಪುರಸಭೆ ಸದಸ್ಯರು ಮತ್ತು ಅಧಿಕಾರಿಗಳಿಂದ ಶೋಷಣೆ ನಡೆಯುತ್ತಿದೆ.ಸಾಮಾನ್ಯ ಸಭೆಯಲ್ಲಿ ಕೆಲವೊಂದು ಮೆಂಬರ್ ಗಳು ಸರ್ವಾಧಿಕಾರ ಧೋರಣೆ ನಡೆಸುತ್ತಿದ್ದಾರೆ. ಮಾನವೀಯತೆ ಮರೆತು ನಿಯಮ ಗಾಳಿಗೆ ತೂರಿ ಬಡ ಕಾರ್ಮಿಕರ ಕಣ್ಣೀರಿನ ಜೊತೆ ಚೆಲ್ಲಾಟವಾಡುತ್ತಿದ್ದಾರೆ.

ಪುರ ಸಭೆಯಲ್ಲಿ ಜನಪ್ರತಿನಿಧಿಗಳ ದರ್ಬಾರ್ ಯಾವ ಮಟ್ಟಿಗೆ ಇದೆ ಎಂದರೆ ಮುಖ್ಯಾಧಿಕಾರಿ ಅವರ ಕೈಗೊಂಬೆಯಾಗುವ ಮಟ್ಟಿಗೆ ಎನ್ನುವ ಗಂಭೀರ ಆರೋಪ ಕಾರ್ಮಿಕರಿಂದ ಕೇಳಿಬಂದಿದೆ

**ಪುರಸಭೆ ಸದಸ್ಯರು ಮತ್ತು ಅಧಿಕಾರಿಗಳಿಂದ ಶೋಷಣೆ**

ಪುರಸಭೆಯಲ್ಲಿ ಸುಮಾರು 03 ವರ್ಷಗಳಿಂದ ನಯಾ ಪೈಸೆ ಸಂಬಳ ಇಲ್ಲದೆ 17 ಜನ ಕಾರ್ಮಿಕರು ಇಡೀ ಊರಿನ ಹೊಲಸು ಸ್ವಚ್ಛ ಮಾಡ್ತಾ ಇದ್ದಾರೆ. ಸಂಬಳ ಇಲ್ಲದೆ ಒಂದೊಪ್ಪತ್ತು ಊಟನೂ ಇಲ್ಲದೆ ಆಸ್ಪತ್ರೆ ಖರ್ಚಿಗೆ ಹಣ ಇಲ್ಲದೆ ಕುಟುಂಬ ನಿರ್ವಹಣೆಗೆ ಮಾಡಲಾಗದೆ ಹೀನಾಯ ಸ್ಥಿತಿಯಲ್ಲಿರುವ 17 ಜನ ಕಾರ್ಮಿಕರು ಅಕ್ಷರಸಃ ನಲುಗಿ ಹೋಗಿದ್ದಾರೆ. ಪುರಸಭೆಯಲ್ಲಿ ಜನಪ್ರತಿ ನಿಧಿಗಳ ದರ್ಬಾರ್ ಯಾವ ಮಟ್ಟಿಗೆ ಇದೆ ಹೇಳುವುದಾದರೆ 17 ಜನ ಕಾರ್ಮಿಕರ ಬದುಕಿಗೆ ಎಳ್ಳು ನೀರು ಬಿಡಲು 17 ಜನ ಕಾರ್ಮಿಕರ ಬದುಕಿಗೆ ಗಾಯದ ಮೇಲೆ ಬರೆ ಎಳೆಯುವಂತ ಸರ್ವಾಧಿಕಾರ ಧೋರಣೆ ನಡೆಸುತ್ತಿದ್ದಾರೆ ಜನಪ್ರತಿನಿಧಿಗಳು.

ಹೌದು ಇದು ಅಕ್ಷರಶಃ ಸತ್ಯ, ಎಂದು ಕಾರ್ಮಿಕರ ಆಕ್ರೋಶವಾಗಿದೆ, ಇತ್ತೀಚಿಗೆ ನಡೆದ ಸಾಮಾನ್ಯ ಸಭೆಯಲ್ಲಿ ಸುಮಾರು 10 ವರ್ಷಗಳಿಂದ ಇದೆ ಪುರಸಭೆಯಲ್ಲಿ ಇಲ್ಲಿಯವರೆಗೂ 17 ಜನ ನೇರ ಪಾವತಿ ಮಾಡುತ್ತಾರೆ, ಎನ್ನುವ ಉದ್ದೇಶದಿಂದ ನಿರಂತರವಾಗಿ ಕೆಲಸ ನಿರ್ವಹಿಸುತ್ತಿದ್ದಾರೆ, ಆದರೆ ಅವರನ್ನು ಬಿಟ್ಟು ಕೆಲಸ ನಿರ್ವಹಿಸದೆ ಇರುವ ಖಾಸಗಿ ವ್ಯಕ್ತಿಗಳನ್ನು ಪುರಸಭೆಯಲ್ಲಿ ಕೆಲಸಕ್ಕೆ ಸೇರಿಸಿಕೊಳ್ಳಲ್ಲೂ ನಿರ್ಧಾರ ಕೈಗೊಳ್ಳಲಾಗಿದೆ.

ಇದರಿಂದ 17 ಜನ ಕಾರ್ಮಿಕರಲ್ಲಿನ ವ್ಯಕ್ತಿಗಳಿಗೆ ಮೊದಲ ಆದ್ಯತೆ ನೀಡಬೇಕೆಂದು ಒತ್ತಾಯಿಸಿದ್ದಾರೆ. ಜನಪ್ರತಿನಿಧಿಗಳಿಂದ ಹಾಗೂ ಅವರ ಕೈಗೊಂಬೆಯಾದ ಅಧಿಕಾರಿಗಳಿಂದ ತಮಗಾಗುತ್ತಿರುವ ಅನ್ಯಾಯದ ವಿರುದ್ಧ ಧ್ವನಿ ಎತ್ತಿದ್ದಾರೆ ಕಣ್ಣೀರು ಹಾಕಿದ್ದಾರೆ ಪುರಸಭೆ ವಾಹನದ ಮುಂದೆ ಬಿದ್ದು ಆತ್ಮ ಹತ್ಯೆಗೆ ಯತ್ನಿಸಿದ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಆ ಸಂದರ್ಭದಲ್ಲಿ ಮುಖ್ಯಾಧಿಕಾರಿ ಕಾರ್ಮಿಕನ ವಿಡಿಯೋ ಮಾಡಿದರೆ ಹೊರತು ಕಾರ್ಮಿಕನ ಮನ ಒಲಿಸಲು ಮುಂದಾಗಲಿಲ್ಲ ಅಲ್ಲದೆ ನಮ್ ಗಾಡಿಗೆ ಬೀಳಬೇಡ ಎಂದು ಕಠೋರವಾಗಿ ನಡೆದುಕೊಂಡು ಅವಮಾನಿಸಿದ್ದಾರೆ ಎನ್ನಲಾಗಿದೆ.


ಉದಯವಾಹಿನಿ ಚಿತ್ರ



## ಅನುದಾನ ಬಿಡುಗಡೆಗೆ ಆಗ್ರಹಿಸಿ ಪ್ರತಿಭಟನೆ

• ಉದಯವಾಹಿನಿ ಜಗಳೂರು

ಬರಪೀಡಿತ ತಾಲ್ಲೂಕಿಗೆ ನೀರಾವರಿ ಸೌಲಭ್ಯ ಕಲ್ಪಿಸುವ ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಅಗತ್ಯ ಅನುದಾನ ಬಿಡುಗಡೆ ಮಾಡುವ ಮೂಲಕ ತ್ವರಿತವಾಗಿ ಕಾಮಗಾರಿಯನ್ನು ಪೂರ್ಣಗೊಳಿಸಬೇಕು ಎಂದು ಆಗ್ರಹಿಸಿ ಪಟ್ಟಣದಲ್ಲಿ ನೀರಾವರಿ ಹೋರಾಟ ಸಮಿತಿ ಹಾಗೂ ರೈತ ಸಂಘದ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

ಹೋರಾಟ ಸಮಿತಿಯ ಅಧ್ಯಕ್ಷ ತೋರಣಗಟ್ಟೆ ತಿಪ್ಪೇಸ್ವಾಮಿ ಮಾತನಾಡಿ, ನಿರಂತರ ಹೋರಾಟದ ಪ್ರತಿರೂಪವಾಗಿರುವ ಭದ್ರಾ ಮೇಲ್ದಂಡೆ ಯೋಜನೆ ಯೋಜನೆ ನನೆಗುದಿಗೆ ಬಿದ್ದಿರುವುದು ವಿಷಾಧನೀಯ. ತಾಲ್ಲೂಕಿಗೆ 2.4 ಟಿಎಂಸಿ ನೀರನ್ನು ಹಂಚಿಕೆಮಾಡಿ ಸರ್ಕಾರ ಆದೇಶಿಸಿದೆ. ಇದರಿಂದ ತಾಲ್ಲೂಕಿನ 9 ಕೆರೆಗಳು ಹಾಗೂ 48 ಸಾವಿರ ಎಕರೆ ಪ್ರದೇಶ ಹನಿನೀರಾವರಿ ಆಗಬೇಕಿದೆ. ಆದರೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಇಚ್ಛಾಶಕ್ತಿ ಕೊರತೆಯಿಂದ ವಿಳಂಬವಾಗುತ್ತಿರುವುದು ಖಂಡನೀಯ ಎಂದು ನೀರಾವರಿ ಹೋರಾಟ ಸಮಿತಿ ಅಧ್ಯಕ್ಷ ತೋರಣಗಟ್ಟೆ ತಿಪ್ಪೇಸ್ವಾಮಿ ಆಕ್ರೋಶ ವ್ಯಕ್ತಪಡಿಸಿದರು. ವಕೀಲರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಮರೇನಹಳ್ಳಿ ಟಿ.ಬಸವರಾಜ್, ಭದ್ರಾಮೇಲ್ದಂಡೆ ಯೋಜನೆಯಡಿ ತಾಲ್ಲೂಕಿನ ಮರೇನಹಳ್ಳಿ, ಲಿಂಗಣ್ಣನಹಳ್ಳಿ, ಕಸ್ತೂರಿಪುರ ಸೇರಿದಂತೆ ವಿವಿಧ ಗ್ರಾಮಗಳನ್ನು ಸೇರ್ಪಡೆಗೊಳಿಸಬೇಕು. ರೈತರ ಸಹಕಾರದಿಂದ ಭದ್ರಾಮೇಲ್ದಂಡೆ ಯೋಜನೆ ಪೈಪ್ ಲೈನ್ ಕಾಮಗಾರಿಯನ್ನು ವೈಜ್ಞಾನಿಕವಾಗಿ ನಡೆಸಬೇಕು. ಬರದನಾಡಿನ ರೈತರ ಬದುಕು ನೀರಾವರಿಯೋಜನೆ ಸಾಕಾರದಿಂದ ಮಾತ್ರ ಹಸನಾಗಲು ಸಾಧ್ಯ ಎಂದರು.

ಪ್ರಧಾನಿ ಮೋದಿ ಅವರು 2019 ರ ಲೋಕಸಭಾ ಚುನಾವಣೆ ಪ್ರಚಾರದ ವೇಳೆ ಚಿತ್ರದುರ್ಗಕ್ಕೆ ಆಗಮಿಸಿದ್ದ ವೇಳೆ ಭದ್ರಾಮೇಲ್ದಂಡೆ ಯೋಜನೆಗೆ ಕೇಂದ್ರ ಸರಕಾರದಿಂದ 5300 ಕೋಟಿ ರೂಪಾಯಿ ಅನುದಾನ ನೀಡುವ ಬಹಿರಂಗ ಸಭೆಯಲ್ಲಿ ಘೋಷಿಸಿದ್ದರು. ಆದರೆ ಇದುವರೆಗೂ ನಯಪೈಸೆ ಅನುದಾನ ಬಿಡುಗಡೆ ಮಾಡಿಲ್ಲ. ಕೇಂದ್ರ ಮತ್ತು ರಾಜ್ಯ ಸರಕಾರಗಳ ಆಂತರಿಕ ಸಮಸ್ಯೆಯಿಂದ ತಾಲ್ಲೂಕಿಗೆ ತೀವ್ರತರ ಅನ್ಯಾಯವಾಗಿದೆ. ಕೂಡಲೇ ಅಗತ್ಯ ಅನುದಾನ ಒದಗಿಸಿ ಕಾಮಗಾರಿ ತ್ವರಿತಗತಿಯಲ್ಲಿ ಪೂರ್ಣಗೊಳಿಸಬಕು ಎಂದು ಸಮಿತಿ ಸದಸ್ಯ ಆರ್. ಓಬಳೇಶ್ ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

## ಚರಂಡಿ ಸಮಸ್ಯೆ: ಕ್ರಮಕ್ಕೆ ಆಗ್ರಹ, ಪ್ರತಿಭಟನೆ

• ಉದಯವಾಹಿನಿ ಉಳ್ಳಾಲ

ಇಲ್ಲಿನ ಖಾಸಗಿ ಆಸ್ಪತ್ರೆಯೊಂದರ ಮುಂಭಾಗದ ಚರಂಡಿ ಸಮಸ್ಯೆಗೆ ವರ್ಷ ಕಳೆದರೂ ಪರಿಹಾರ ಸಿಕ್ಕಿಲ್ಲ. ಆಸ್ಪತ್ರೆ ಸುತ್ತಲಿನ ಪರಿಸರದಲ್ಲಿ ರೋಗ ಭೀತಿ ಉಂಟಾಗಿದ್ದು, ಕೂಡಲೇ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಬಗಂಬಿಲ ರಿಕ್ಷಾ ಚಾಲಕರು ತುಳುನಾಡು ರಕ್ಷಣಾ ವೇದಿಕೆ ಜೊತೆಗೆ ಪ್ರತಿಭಟನೆ ನಡೆಸಿದ್ದಾರೆ.

ತುಳುನಾಡ ರಕ್ಷಣಾ ವೇದಿಕೆ ಸ್ಥಾಪಕಾಧ್ಯಕ್ಷ ಯೋಗೀಶ್ ಶೆಟ್ಟಿ ಜೆಪ್ಪು ಮಾತನಾಡಿ, ಕಟ್ಟಡ ತಲೆ ಎತ್ತಿದ ಕೂಡಲೇ ಅಭಿವೃದ್ಧಿ ಕೇಂದ್ರ ಎನ್ನಲು ಸಾಧ್ಯವಿಲ್ಲ. ಮೂಲಸೌಕರ್ಯ ಉತ್ತಮ ಗುಣಮಟ್ಟದಲ್ಲಿ ಇದ್ದರೆ ಮಾತ್ರ ಅಭಿವೃದ್ಧಿ ಸಾಧ್ಯ. ಕಟ್ಟಡಗಳಿಂದ ಹೊರಬರುತ್ತಿರುವ ತ್ಯಾಜ್ಯ ಚರಂಡಿಯಲ್ಲಿ ಸಂಗ್ರಹಗೊಂಡು ಇಲ್ಲಿನ ರಿಕ್ಷಾ ಚಾಲಕರು ತೊಂದರೆ ಅನುಭವಿಸುತ್ತಿದ್ದಾರೆ. ಬೆಳ್ಮ ಗ್ರಾಮ ಪಂಚಾಯಿತಿ ಹಾಗೂ ಕೋಟೆಕಾರ್ ಪಟ್ಟಣ ಪಂಚಾಯಿತಿ ಇದಕ್ಕೆ ಜವಾಬ್ದಾರಿಯಾಗಿದ್ದು, ಸಮಸ್ಯೆಯನ್ನು ಕೂಡಲೇ ಪರಿಹರಿಸಬೇಕು ಎಂದು ಆಗ್ರಹಿಸಿದರು. ರಿಕ್ಷಾ ಚಾಲಕರಾದ ಸತೀಶ್, ಕಾರ್ತಿಕ್ ಪಂಡಿತ್‌ಹೌಡ್, ಪುರುಷೋತ್ತಮ್ ಬಗಂಬಿಲ, ತುಳುನಾಡ ರಕ್ಷಣಾ ವೇದಿಕೆ ಕೇಂದ್ರಿಯ ಸಂಘಟನಾ ಕಾರ್ಯದರ್ಶಿ ಪ್ರಶಾಂತ್ ಭಟ್ ಕಡಬ ಮಾತನಾಡಿ, ಸಂಜೆ ವೇಳೆ ಸೊಳ್ಳೆಗಳ ಸಮಸ್ಯೆ ಇದ್ದು, ಸಮಸ್ಯೆ ಬಗ್ಗೆ ಜಿಲ್ಲಾಧಿಕಾರಿ, ಮುಖ್ಯಮಂತ್ರಿಗೂ ಮನವಿ ಮಾಡಿದ್ದೇವೆ. ಆದರೆ ಸ್ಪಂದನೆ ಸಿಕ್ಕಿಲ್ಲ ಎಂದರು.


ಉದಯವಾಹಿನಿ ಚಿತ್ರ

## ಮಾನವನ ದಾನವ ಗುಣಗಳನ್ನು ದಹಿಸಿ ಆತನನ್ನು ಮಹಾದೇವನನ್ನಾಗಿಸುವ ಅಪೂರ್ವ ಸಿದ್ಧಾಂತವನ್ನು ನೀಡಿದವರು ಶ್ರೀ ಜಗದ್ಗುರು ರೇಣುಕಾಚಾರ್ಯರು

• ಉದಯವಾಹಿನಿ ಕೊಲ್ಹಾರ

ಮಾನವನ ದಾನವ ಗುಣಗಳನ್ನು ದಹಿಸಿ ಆತನನ್ನು ಮಹಾದೇವನನ್ನಾಗಿಸುವ ಅಪೂರ್ವ ಸಿದ್ಧಾಂತವನ್ನು ನೀಡಿದವರು ಶ್ರೀ ಜಗದ್ಗುರು ರೇಣುಕಾಚಾರ್ಯರು. ಜೀವಿ ಶಿವನಾಗುವ, ಮಾನವ ಮಹಾದೇವನಾಗುವ, ಅಂಗ ಲಿಂಗವಾಗುವ ಅದ್ಭುತ ಸಿದ್ಧಾಂತವನ್ನು ಜಗತ್ತಿಗೆ ಬೋಧಿಸಿದ ಶ್ರೀ ಜಗದ್ಗುರು ರೇಣುಕಾಚಾರ್ಯರು ಎಂದು ದಿಗಂಬರೇಶ್ವರ ಮಠದ ಕಲ್ಲಿನಾಥ ಪೂಜ್ಯರು ಹೇಳಿದರು.

ಪಟ್ಟಣದ ಬಸ್ ನಿಲ್ದಾಣದ ಹತ್ತಿರವಿರುವ ಜಗದ್ಗುರು ಶ್ರೀ ರೇಣುಕಾಚಾರ್ಯರ ವೃತ್ತದಲ್ಲಿ ಜಯಂತೋತ್ಸವದ ನಿಮಿತ್ಯ ಪೂಜಿ ಸಲ್ಲಿಸಿ ಮಾತನಾಡಿದ, ಮನುಕುಲದ ಕಲ್ಯಾಣಕ್ಕಾಗಿ ಹಲವು ಆಚಾರ್ಯರು, ಪ್ರವಾದಿಗಳು, ಈ ಭೂಮಿಯ ಮೇಲೆ ಅವರಸಿ ಬಂದಿದ್ದಾರೆ. ಅಂತಹ ಪರಂಪರೆಯಲ್ಲಿ ಅವತರಿಸಿದ ಆದಿಜಗದ್ಗುರು ರೇಣುಕಾ ಪಂಚಾಚಾರ್ಯರು ಪರಶಿವನ ಆದೇಶದಂತೆ ಈ ಭೂತಲದಲ್ಲಿ ಶಕ್ತಿ ವಿಶಿಷ್ಟಾದ್ವೈತ ಸಿದ್ಧಾಂತವನ್ನು ಪ್ರಚುತಿಪಡಿಸಿ ವೀರಶೈವ ಧರ್ಮವನ್ನು ನೆಲೆಗೊಳಿಸಿದ್ದಾರೆ ಎಂದರು.

ಮಾಜಿ ಸಚಿವ ಎಸ್ ಕೆ ಬೆಳ್ಳುಬ್ಬಿ ಮಾತನಾಡಿ, ಆಚಾರ ವಿಚಾರಗಳ ಮೇಲೆ ಪುನರ್ಜನ್ಮಗಳ ಮೇಲೆ ನಂಬಿಕೆ ಇಟ್ಟಿದ್ದು ಕೇವಲ ಹಿಂದೂ ಧರ್ಮ. ನಾವು ಮಾಡಿರುವ ಪಾಪ ಪುಣ್ಯಗಳ ಮೇಲೆ ಸ್ವರ್ಗ ನರಕದಲ್ಲಿ ಹುಟ್ಟುತ್ತೇವೆ. ಎಂದು ವೇದ ಉಪನಿಷತ್ತಗಳ ಕಾಲದಿಂದಲೂ ಹಾಗೂ ಜಗದ್ಗುರು ರೇಣುಕಾಚಾರ್ಯರ ನಾನುಡಿಯಂತೆ ನಂಬಿಕೆ ಇಟ್ಟವರು ಕೇವಲ ಸನಾತನ ಹಿಂದೂ ಧರ್ಮೀಯರು' ಮಾತ್ರ. ಹಿಂದೂ ಧರ್ಮ ಅಸಹಾಯಕರು ಕೂಡ ಸರಿ ಸಮಾನವಾಗಿ ಬದುಕಬೇಕೆಂದು ಚಿಂತನೆಯನ್ನು ಕಲಿಸಿಕೊಟ್ಟಿದೆ.ಅಂತಹ ಪವಿತ್ರ ಭೂಮಿ ಭಾರತ ಹಿಂದೂ ಧರ್ಮದ ಮೇಲೆ ನಾನಾ ರೀತಿಯ ದಾಳಿಗಳಾಗಿವೆ. ವಿವಿಧ ಧರ್ಮಗಳಿಂದ ಮತಾಂತರವನ್ನ ಮಾಡಲು ಪ್ರಯತ್ನಿಸಿದರು ಇನ್ನೂ ಕೂಡ ಹಿಂದೂ ಧರ್ಮ ಗಟ್ಟಿಯಾಗಿ ಇರಲು ಈ ಭೂಮಿಯ ಹಾಗೂ ದೇವಾನು ದೇವತೆಗಳ ಜಗದ್ಗುರುಗಳ ಶಕ್ತಿಯ ಪ್ರತೀಕವಾಗಿದೆ ಹೇಳಿದರು. ಈ ವೇಳೆಯಲ್ಲಿ ಹಿರೇಮಠದ ಪಡದಯ್ಯ ಪೂಜ್ಯರು, ಡಾ.ಕೈಲಾಸನಾಥ ಶ್ರೀಗಳು, ಪ.ಪಂ ಅಧ್ಯಕ್ಷ ಸಿ.ಎಸ್ ಗಿಡ್ಡಪ್ಪಗೋಳ, ಜಂಗಮ ಸಮಾಜ ಅಧ್ಯಕ್ಷ ಸಿ ಎಂ ಗಣಕುಮಾರ, ತುಳಸಿಗೇರಿ ಹಗೇದಾಳ, ಸಿದ್ದಪ್ಪ ಬಾಲಗೊಂಡ, ಬಸಪ್ಪ ಉಪ್ಪಲದಿನ್ನಿ, ರಾಮಣ್ಣ ಉಪ್ಪಲದಿನ್ನಿ, ಈರಯ್ಯ ಮಠಪತಿ, ವೀರಭದ್ರಪ್ಪ ಬಾಗಿ, ಪರಶುರಾಮ ಗಣಿ, ರಾಚಣ್ಣ ಕೊಟ್ಟಗಿ, ಶಂಕರಯ್ಯ ಚಿಕ್ಕಮಠ, ಇದ್ದರು.


ಉದಯವಾಹಿನಿ ಚಿತ್ರ

# ಸರ್ಕಾರಿ ಆರೋಗ್ಯ ನೌಕರರ ಮುಷ್ಕರ: ಮಾ.11ರಿಂದ 5 ದಿನ ಒಪಿಡಿ ಬಂದ್

## ರಾಜ್ಯದ ಎಲ್ಲಾ ಸರಕಾರಿ ಆಸ್ಪತ್ರೆಗಳಿಗೆ ಸಮರ್ಪಕವಾಗಿ ಔಷಧಿ ನೀಡದೇ ಇರುವದರಿಂದ ರೋಗಿಗಳಿಗೆ ತೊಂದರೆಯಾಗುತ್ತದೆ

• ಉದಯವಾಹಿನಿ ಜಮಖಂಡಿ

ನಮ್ಮ ಬೇಡಿಕೆಗಳನ್ನು ಈಡೇರಿಸದಿದ್ದರೆ ಮಾ. 16ರಿಂದ ಎಲ್ಲಾ ಸೇವೆ ಬಂದ್, ತುರ್ತು ಸೇವೆ ಮಾತ್ರ ಲಭ್ಯ, 2 ಹಂತದಲ್ಲಿ ಪ್ರತಿಭಟನೆಗೆ ನಿರ್ಧಾರ ಎಂದು ಕರ್ನಾಟಕ ಸರಕಾರಿ ವೈದ್ಯಾಧಿಕಾರಿಗಳ ಸಂಘದ ಜಿಲ್ಲಾ ಖಜಾಂಚಿ ಡಾ.ಗೈಬುಸಾಬ ಗಲಗಲಿ ಹೇಳಿದರು.

ಆರೋಗ್ಯ ಇಲಾಖೆ ಅಧಿಕಾರಿ ಹಾಗೂ ನೌಕರರ ನ್ಯಾಯಯುತ ಬೇಡಿಕೆಗಾಗಿ ಮಾರ್ಚ 11 ರಿಂದ 15 ರವರಗೆ ಕಪ್ಪು ಪಟ್ಟಿ ಧರಿಸಿ ತುರ್ತುಸೇವೆ ನೀಡುವದು ನಮ್ಮ ಬೇಡಿಕೆ ಇಡೇರದಿದ್ದರೆ ಅನಿರ್ದಾಷ್ಟಾವಧಿ ಮುಷ್ಕರ ನಡೆಸುವದಾಗಿ ಸರ್ಕಾರಿ ವೈದ್ಯಾಧಿಕಾರಿಗಳ ಸಂಘ ಕರ್ನಾಟಕ ರಾಜ್ಯ ಆರೋಗ್ಯ ಮತ್ತು ವೈದಿಕಿಯ ಶಿಕ್ಷಣ ಇಲಾಖಾ ನೌಕರರ ಕೇಂದ್ರ ಸಂಘ ಹಾಗೂ ಇಲಾಖೆ ಎಲ್ಲಾ ವೃಂದ ಸಂಘಗಳ ಸಹಯೋಗದೊಂದಿಗೆ ನಗರದ ತಾಲ್ಲೂಕಾಡಳಿತ ಭವನದ ಆವರಣದಲ್ಲಿ ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ ಅವರಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು. ಮಾರ್ಚ 15 ರ ಒಳಾಗಾಗಿ ನಮ್ಮ ಬೇಡಿಕೆಗಳ ಇಡೇರದಿದ್ದರೆ ಮಾರ್ಚ 16 ರಿಂದ ಕರ್ತವ್ಯಕ್ಕೆ ಹಾಜರಗದೇ ಅನಿರ್ದಾಷ್ಟಾವಧಿ ಮುಷ್ಕರ ನಡಸಲಾಗುವದು ರಾಜ್ಯದ ಎಲ್ ಸರಕಾರಿ ಆಸ್ಪತ್ರೆಗಳಿಗೆ ಸಮರ್ಪಕವಾಗಿ ಔಷಧಿ ನೀಡದೇ ಇರುವದರಿಂದ ರೋಗಿಗಳಿಗೆ ತೊಂದರೆಯಾಗುತ್ತದೆ, ಇದರಿಂದ ಸಾರ್ವಜನಿಕರ ಕೋಪಕ್ಕೆ ನಾವು ಈಡಾಗುತ್ತೇವೆ ಅದು ನಿಲ್ಲಬೇಕು ನೇಮಕಾತಿಯ ಹಿಂದಿನ ಕಾನೂನು ಬದಲಾಗಿ ಪ್ರತಿ ಮೂರು ವರ್ಷಕ್ಕೊಮ್ಮೆ ಬದಲಾವಣೆಗೆ ತಿದ್ದುಪಡಿ ಮಾಡಬೇಕು, ಜೇಷ್ಠತಾ ಪಟ್ಟಿಯನ್ನು ಪ್ರಕಟಿಸದೇ ಇರುವದು. ಪ್ರತಿ ಐದು ವರ್ಷಕ್ಕೊಮ್ಮೆ ಮುಂಬಡತಿ ನೀಡದೇ ಇರುವದು. ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯ ತಜ್ಞ ವೈದ್ಯ, ಸಿಬ್ಬಂದಿಗಳಿಗೆ ಸಿಜಿಎಚ್, ಮತ್ತು ಎಐಸಿಟಿಇ ವೈದ್ಯಕೀಯ ಶಿಕ್ಷಣ ಮಾದರಿಯಲ್ಲಿ ವೇತನ ನೀಡುವದಕ್ಕಾಗಿ ಈ ಪ್ರತಿಭಟನೆಯನ್ನು ನಡೆಸಲಾಗುತ್ತದೆ ಎಂದು ಹೇಳಿದರು.

ಪ್ರಧಾನ ಕಾರ್ಯದರ್ಶಿ ಡಾ ಕೃಷ್ಣಾ ಬಣ್ಣದ, ತಾಲ್ಲೂಕಾ ಪ್ರತಿನಿಧಿ ಡಾ ವಾಸಪ್ಪಾ ಮುದಿಗೌಡರ, ಡಾ. ಮುಕುಂದ ಕಾಂಬಳೆ, ನರೇಂದ್ರ ನಿಡೋಣಿ, ಅನಿಲಕುಮಾರ ಸುರಗೊಂಡ,ಉಮೇಶ ಜೋಶಿ, ಸಂತೋಷ ನಾಯಿಕ, ರವಿ ಕಾಂಬಳೆ,ಜಾಕೀರ ನದಾಫ, ಜೆಡಿ.ಧನ್ನೂರ, ಲಲಿತಾ ಗಲಗಲಿ, ಜಗದೀಶ ಆಲಕನೂರ, ಸಂತೋಷ ಮಾಲಗತ್ತೀಮಠ, ವಿಶ್ವನಾಥ ಹರಿಜನ, ಭಾಗಣ್ಣಾ ನಾಗಠಾಣ, ಗಂಗಾಧರ ಚಾಬೂಕಸವಾರ, ಇನ್ನಿತರರು ಇದ್ದರು.


ಉದಯವಾಹಿನಿ ಚಿತ್ರ

**ಮಾ.16ರಿಂದ ಎಲ್ಲಾ ಸೇವೆಗಳು ಬಂದ್**

### ಬೇಡಿಕೆಗಳು

**ಔಷಧಿಗಳ ಸರಬರಾಜು, ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ,ಮುಂಬಡ್ತಿ, ಉನ್ನತ ವ್ಯಾಸಂಗ, ಸ್ನಾತಕೋತ್ತರ ವ್ಯಾಸಂಗಕ್ಕೆ ಅವಕಾಶ, ಖಾಲಿ ಹುದ್ದೆಗಳ ಭರ್ತಿ, ಕೇಂದ್ರ ಪುರಸ್ಕೃತ ಯೋಜನೆ ಅಡಿ ಕಾರ್ಯನಿರತ ಸುಮಾರು 6000 ನೌಕರರಿಗೆ ಹಲವಾರು ವರ್ಷಗಳಿಂದ 3-4 ತಿಂಗಳಿಗೊಮ್ಮೆ ವೇತನ ಭತ್ಯೆಗಳನ್ನು ನೀಡುತ್ತಿದ್ದು, ಪ್ರತಿ ತಿಂಗಳ ಮೊದಲ ವಾರದಲ್ಲಿ ವೇತನ ಭತ್ಯೆಗಳನ್ನು ನೀಡುವುದು ಸೇರಿ 11 ವಿವಿಧ ಬೇಡಿಕೆಗಳನ್ನು ಈಡೇರಿಸಬೇಕೆಂದು ಆಗ್ರಹಿಸಿದರು.**

